VOLUME: 16 | 27 APRIL 2026 | ಸೋಮವಾರ | RS: 2 | PAGE: 06 ISSUE: 80 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಖ್ಯಾತ ನಟಿ ಕಾಜೋಲ್ ಅವರು ಹಲವು ರೊಮ್ಯಾಂಟಿಕ್ ಸಿನಿಮಾಗಳಲ್ಲಿ ನಟಿಸಿದರೂ ಕೂಡ ಕಿಸ್ಸಿಂಗ್ ಸೀನ್ ಒಪ್ಪಿಕೊಂಡಿರಲಿಲ್ಲ. ಆದರೆ 30 ವರ್ಷಗಳ ಬಳಿಕ ಅವರು ಆ ನಿಯಮವನ್ನು ಮುರಿದರು. ಅದಕ್ಕೆ ಕಾರಣ ಏನು ಎಂಬುದನ್ನು ಅವರೀಗ ಬಹಿರಂಗಪಡಿಸಿದ್ದಾರೆ. 'ದಿ ಟ್ರಯಲ್' ಸರಣಿಯು ಬಿಡುಗಡೆ ಬಗ್ಗೆ ಮಾತನಾಡಿರುವ ಅವರು, ಪಾತ್ರ, ಆಲೋಚನೆಗಳು, ನಂಬಿಕೆಗಳು ಮತ್ತು ಆಕೆ ಏನನ್ನು ಬಯಸುತ್ತಿದ್ದಳು ಎಂಬುದನ್ನು ತೋರಿಸಲು ಆ ದೃಶ್ಯ ಅನಿವಾರ್ಯವಾಗಿತ್ತು ಎಂದಿದ್ದಾರೆ.



BHARATHA SARATHI
KANNADA DAILY NEWS PAPER
CALL 9740160669
# ಭಾರತ ಸಾರಥಿ
prabhavaa.com
RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ
ಸಂಪಾದಕ
ಗಂಡಸಿ ಸದಾನಂದಸ್ವಾಮಿ





ಬಂಗಾಳದ ಪ್ರತಿಯೊಬ್ಬ ಸಹೋದರಿ ಮತ್ತು ಮಗಳು ಈಗ ದಯೆಯಿಲ್ಲದ ತೃಣಮೂಲ ಸರ್ಕಾರದ ವಿರುದ್ಧ ದಂಗೆ ಎದ್ದಿದ್ದಾರೆ. ಮೊದಲ ಹಂತದ ಮತದಾನದಲ್ಲಿ ನಾವು ಇದರ ಒಂದು ನೋಟವನ್ನು ಕಂಡಿದ್ದೇವೆ. ಮಹಿಳಾ ಸಬಲೀಕರಣದಲ್ಲಿ ಮುಂಚೂಣಿಯಲ್ಲಿರುವ ಬಂಗಾಳವನ್ನು ತೃಣಮೂಲ ಪಕ್ಷವು ಕೆಳಮಟ್ಟಕ್ಕೆ ಇಳಿಸಿದೆ. ಪ್ರತಿದಿನ ಅತ್ಯಾಚಾರ, ಸಾಮೂಹಿಕ ಅತ್ಯಾಚಾರ ಮತ್ತು ಕೊಲೆಗಳು ವರದಿಯಾಗುತ್ತಿವೆ. ಅವರ 15 ವರ್ಷಗಳ ಕಾನೂನುಬಾಹಿರ ಆಳ್ವಿಕೆಯಲ್ಲಿ, ಅನೇಕ ಅತ್ಯಾಚಾರ ಮತ್ತು ಕೊಲೆ ಘಟನೆಗಳು ಸಂಭವಿಸಿವೆ.

# 'ಬಂಗಾಳದಲ್ಲಿ ತಾಯಂದಿರು ಕಣ್ಣೀರಿಡುತ್ತಿದ್ದಾರೆ'

ಕೋಲ್ಕತ್ತಾ: ಎರಡನೇ ಹಂತದ ಚುನಾವಣೆ ಹೊತ್ತಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಸಿಎಂ ಮಮತಾ ಬ್ಯಾನರ್ಜಿ ಅವರ ಟಿಎಂಸಿ ಪಕ್ಷವನ್ನು ತರಾಟೆಗೆ ತಗೆದುಕೊಂಡಿದ್ದಾರೆ. ಪಶ್ಚಿಮ ಬಂಗಾಳದಲ್ಲಿ ತಾಯಿ ಕಣ್ಣೀರಿಡುತ್ತಿದ್ದಾಳೆ, ರಾಜ್ಯವು ಒಳನುಸುಳುಕೋರರಿಂದ ತುಂಬಿದೆ, ಇಲ್ಲಿನ ಜನರು ಭಯಭೀತರಾಗಿದ್ದಾರೆಂದು ದೀದಿ ಆಡಳಿತವನ್ನು ಮೋದಿ ಟೀಕಿಸಿದರು.

ಬಂಗಾಳದಲ್ಲಿ ಮಹಿಳೆಯರಿಗೆ ಭದ್ರತೆ ಒದಗಿಸುವಲ್ಲಿ ತೃಣಮೂಲ ಕಾಂಗ್ರೆಸ್ ವಿಫಲವಾಗಿದೆ. ಕೋಲ್ಕತ್ತಾದ ಆರ್‌ಜಿ ಕಾರ್ ಆಸ್ಪತ್ರೆಯಲ್ಲಿ ಯುವ ವೈದ್ಯೆಯ ಮೇಲಿನ ಅತ್ಯಾಚಾರ ಮತ್ತು ಕೊಲೆ, ರಾಜ್ಯ ರಾಜಧಾನಿಯಿಂದ ಕೇವಲ 20 ಕಿ.ಮೀ ದೂರದಲ್ಲಿರುವ ಕಾಮದುನಿಯಲ್ಲಿ 20 ವರ್ಷದ ಯುವತಿಯ ಮೇಲೆ ಸಾಮೂಹಿಕ ಅತ್ಯಾಚಾರ ಮತ್ತು ಕೊಲೆ ಸೇರಿದಂತೆ ಹಲವಾರು ಲೈಂಗಿಕ ದೌರ್ಜನ್ಯ ಪ್ರಕರಣಗಳನ್ನು ಮೋದಿ ಪಟ್ಟಿ ಮಾಡಿದರು.



ಬಂಗಾಳದ ಪ್ರತಿಯೊಬ್ಬ ಸಹೋದರಿ ಮತ್ತು ಮಗಳು ಈಗ ದಯೆಯಿಲ್ಲದ ತೃಣಮೂಲ ಸರ್ಕಾರದ ವಿರುದ್ಧ ದಂಗೆ ಎದ್ದಿದ್ದಾರೆ. ಮೊದಲ ಹಂತದ ಮತದಾನದಲ್ಲಿ ನಾವು ಇದರ ಒಂದು ನೋಟವನ್ನು ಕಂಡಿದ್ದೇವೆ. ಮಹಿಳಾ ಸಬಲೀಕರಣದಲ್ಲಿ ಮುಂಚೂಣಿಯಲ್ಲಿರುವ ಬಂಗಾಳವನ್ನು ತೃಣಮೂಲ ಪಕ್ಷವು ಕೆಳಮಟ್ಟಕ್ಕೆ ಇಳಿಸಿದೆ. ಪ್ರತಿದಿನ ಅತ್ಯಾಚಾರ, ಸಾಮೂಹಿಕ ಅತ್ಯಾಚಾರ ಮತ್ತು ಕೊಲೆಗಳು ವರದಿಯಾಗುತ್ತಿವೆ. ಅವರ 15 ವರ್ಷಗಳ ಕಾನೂನುಬಾಹಿರ ಆಳ್ವಿಕೆಯಲ್ಲಿ, ಅನೇಕ ಅತ್ಯಾಚಾರ ಮತ್ತು ಕೊಲೆ ಘಟನೆಗಳು ಸಂಭವಿಸಿವೆ. ಆರ್‌ಜಿ ಕರ್ ವೈದ್ಯಕೀಯ ಕಾಲೇಜು ವಿದ್ಯಾರ್ಥಿನಿ ಅತ್ಯಾಚಾರ ಮತ್ತು ಕೊಲೆ, ಕಸ್ಬಾ ಕಾನೂನು ಕಾಲೇಜಿನಲ್ಲಿ ಅತ್ಯಾಚಾರ, ಪಾರ್ಕ್ ಸ್ಟ್ರೀಟ್ ಸಾಮೂಹಿಕ ಅತ್ಯಾಚಾರ, ಹನ್ಸ್‌ಖಾಲಿ ಅತ್ಯಾಚಾರ ಮತ್ತು ಕೊಲೆ, ಕಾಮದುನಿ ಸಾಮೂಹಿಕ ಅತ್ಯಾಚಾರ, ದುರ್ಗಾಪುರ ವೈದ್ಯಕೀಯ ಕಾಲೇಜು ಅತ್ಯಾಚಾರ ಪ್ರಕರಣ ಹೀಗೆ ಹಲವು.. ಎಂದು ಮೋದಿ ಬೇಸರ ಹೊರಹಾಕಿದರು.

# ಸಚಿವರ ಕ್ಷೇತ್ರದಲ್ಲೇ ಜನಿವಾರಕ್ಕೆ ಕತ್ತರಿ..!

ಚಿಂತಾಮಣಿ: ಸಿಇಟಿ ಪರೀಕ್ಷಾ ಕೇಂದ್ರದಲ್ಲಿ ವಿದ್ಯಾರ್ಥಿಯ ಜನಿವಾರವನ್ನು ಕತ್ತರಿಸಿ ಕಸದ ಬುಟ್ಟಿಗೆ ಎಸೆದಿರುವ ಆರೋಪಕ್ಕೆ ಸಂಬಂಧಿಸಿದ ಘಟನೆ ತಡವಾಗಿ ಬೆಳಕಿಗೆ ಬಂದಿದೆ. ಸಚಿವ ಎಂ.ಸಿ.ಸುಧಾಕರ್ ಕ್ಷೇತ್ರದಲ್ಲೇ ಈ ಘಟನೆ ನಡೆದಿದೆ.

ತಾಲ್ಲೂಕಿನ ಬೀಡಗಾನಹಳ್ಳಿ ಸಮೀಪದ ನಾಗಾರ್ಜುನ ಪಿಯು ಕಾಲೇಜಿನಲ್ಲಿ ಗುರುವಾರ ಈ ಘಟನೆ ನಡೆದಿದೆ ಎಂದು ತಿಳಿದುಬಂದಿದೆ. ಈ ಸಂಬಂಧ ವಿದ್ಯಾರ್ಥಿ, ಆತನ ತಾಯಿ ಹಾಗೂ ಬ್ರಾಹ್ಮಣ ಸಮುದಾಯದವರು ಘಟನೆಯನ್ನು ಖಂಡಿಸಿ ಪೊಲೀಸ್ ವರಿಷ್ಠಾಧಿಕಾರಿ ಮತ್ತು ಜಿಲ್ಲಾಧಿಕಾರಿಗೆ ದೂರು ನೀಡಲು ಮುಂದಾಗಿದ್ದಾರೆ.

ಚಿಂತಾಮಣಿ ಮೂಲದ ವಿದ್ಯಾರ್ಥಿ ಕೆ.ಆರ್. ಸುಪ್ರೀತ್ ಅವರು ಏಪ್ರಿಲ್ 23ರಂದು ಸಿಇಟಿ ಪರೀಕ್ಷೆ ಬರೆಯಲು ಕೇಂದ್ರಕ್ಕೆ ಬಂದಾಗ ಜನಿವಾರ ಕತ್ತರಿಸಲಾಗಿದೆ ಎಂದು ಆರೋಪಿಸಲಾಗಿದೆ. ತಂದೆಯನ್ನು ಕಳೆದುಕೊಂಡಿರುವ ಸುಪ್ರೀತ್‌ಗೆ ತಾಯಿ ವಾಣಿ ಅವರು ಇತ್ತೀಚೆಗೆ ಉಪನಯನ ನಡೆಸಿ ಜನಿವಾರ ಧರಿಸಿದ್ದರು.

ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಅಥವಾ ಸರ್ಕಾರದಿಂದ ಪರೀಕ್ಷೆಯ ವೇಳೆ ಜನಿವಾರ ತೆಗೆದು ಬರಬೇಕು ಎಂಬ ಯಾವುದೇ ಅಧಿಕೃತ ಮಾರ್ಗಸೂಚಿ ಇಲ್ಲ ಎಂದು ಹೇಳಲಾಗುತ್ತಿದೆ. ಧಾರ್ಮಿಕ ನಂಬಿಕೆಗಳಿಗೆ ಸಂಬಂಧಿಸಿದ ವಿಷಯಗಳಲ್ಲಿ ಅಧಿಕಾರಿಗಳು ಸೂಕ್ಷ್ಮವಾಗಿ ನಡೆದುಕೊಳ್ಳಬೇಕು ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ.

ಈ ಕುರಿತು ಪ್ರತಿಕ್ರಿಯಿಸಿದ ವಿದ್ಯಾರ್ಥಿ ಸುಪ್ರೀತ್, "ನಾನು ಸ್ವತಃ ತೆಗೆದು ಇಟ್ಟುಕೊಳ್ಳುತ್ತೇನೆ ಎಂದರೂ ಅವಕಾಶ ನೀಡಲಿಲ್ಲ. ಕತ್ತರಿಯಿಂದ ಜನಿವಾರ ಕತ್ತರಿಸಿ ಕಸದ ಬುಟ್ಟಿಗೆ ಹಾಕಿದರು. ಪರೀಕ್ಷೆಯ ನಂತರ ಅದನ್ನು ಹುಡುಕಿ ತೆಗೆದುಕೊಂಡು ಬಂದೆ. ಮಾನಸಿಕ ಒತ್ತಡದಿಂದ ಪರೀಕ್ಷೆ ಸರಿಯಾಗಿ ಬರೆಯಲಾಗಲಿಲ್ಲ," ಎಂದು ಹೇಳಿದ್ದಾರೆ.

ಕಳೆದ ವರ್ಷವೂ ಶಿವಮೊಗ್ಗ ಮತ್ತು ಬೀದರ್‌ನಲ್ಲಿ ಇಂತಹ ಘಟನೆಗಳು ನಡೆದಿದ್ದು ವಿವಾದಕ್ಕೆ ಕಾರಣವಾಗಿತ್ತು. ಈ ಬಾರಿ ಬೆಂಗಳೂರಿನ ಮಡಿವಾಳದ ಕೃಪಾನಿಧಿ ಕಾಲೇಜು ಹಾಗೂ ಚಿಕ್ಕಬಳ್ಳಾಪುರದ ನಾಗಾರ್ಜುನ ಕಾಲೇಜಿನಲ್ಲಿ ಇದೇ ರೀತಿಯ ಆರೋಪಗಳು ಕೇಳಿಬಂದಿವೆ. ಕೃಪಾನಿಧಿ ಕಾಲೇಜಿನಲ್ಲಿ ನಡೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಸಿಬ್ಬಂದಿಯನ್ನು ಅಮಾನತು ಮಾಡಲಾಗಿದೆ. ನಾಗಾರ್ಜುನ ಕಾಲೇಜಿನ ಘಟನೆ ಯಲ್ಲಿ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ಮುಂದಿನ ಕ್ರಮ ಕೈಗೊಳ್ಳುತ್ತದೆಯೇ ಎಂಬುದನ್ನು ಕಾದು ನೋಡಬೇಕಾಗಿದೆ.

# ಇಬ್ಬರು ಮಕ್ಕಳು ನೀರುಪಾಲು

ತುಮಕೂರು: ಮಧುಗಿರಿ ತಾಲೂಕಿನ ಮಿಡಿಗೇಶಿ ಹೋಬಳಿ ಬೆನಕನಹಳ್ಳಿ ಬಳಿಯ ಕೃಷಿ ಹೊಂಡದಲ್ಲಿ ನೀರು ಕುಡಿಯಲು ಹೋದ ಇಬ್ಬರು ಮಕ್ಕಳು ಕಾಲು ಜಾರಿ ಬಿದ್ದು ಮೃತಪಟ್ಟಿದ್ದಾರೆ.

ಮಿಡಿಗೇಶಿ ಹೋಬಳಿ ಕಸಾಪುರ ಗ್ರಾಮದ ಮಂಜುನಾಥ್ ಅವರ ಪುತ್ರಿ ಸುಚಿತ್ರಾ (11), ಪುತ್ರ ರವೀಂದ್ರ (9) ಮೃತರು. ಮಂಜುನಾಥ್‌ಗೆ ಮೂವರು ಮಕ್ಕಳು. ಮೂವರು ಮೇಕೆ ಮೇಯಿಸಲು ಹೋಗಿದ್ದರು. ಬಾಯಾರಿಕೆಯಾಗಿ ನೀರು ಕುಡಿಯಲು ಕೃಷಿ ಹೊಂಡಕ್ಕೆ ಹೋಗಿದ್ದಾಗ ಕಾಲು ಜಾರಿ ಬಿದ್ದಿದ್ದಾರೆ.

ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಮಧುಗಿರಿ ಸಾರ್ವಜನಿಕ ಆಸ್ಪತ್ರೆಗೆ ರವಾನಿಸಲಾಗಿದೆ. ಮಿಡಿಗೇಶಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಮತ್ತೆ ಮುರಿದು ಬಿದ್ದ ಸಂಧಾನ ಮಾತುಕತೆ

ಇಸ್ಲಾಮಾಬಾದ್: ಮಧ್ಯ ಪ್ರಾಚ್ಯ ಸಂಘರ್ಷ ಮುಂದುವರೆದಿರುವಂತೆಯೇ ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್ ನಲ್ಲಿ ಆಯೋಜನೆಯಾಗಿದ್ದ ಇರಾನ್ ಅಮೆರಿಕ ಸಂಧಾನ ಸಭೆ ಮತ್ತೆ ಮುರಿದುಬಿದ್ದಿದ್ದು, ಸಂಧಾನಕ್ಕಾಗಿ ಆಗಮಿಸಿದ್ದ ಅಮೆರಿಕ ಸರ್ಕಾರದ ನಿಯೋಗವನ್ನು ಭೇಟಿಯಾಗದೇ ಇರಾನ್ ಸರ್ಕಾರದ ನಿಯೋಗ ನಿರ್ಗಮಿಸಿದೆ.

ಪಾಕಿಸ್ತಾನದಲ್ಲಿ ಅಮೆರಿಕಕ್ಕೆ ಜಾಗತಿಕ ಮುಜುಗರವಾಗಿದ್ದು, ಅಮೆರಿಕದ ಪ್ರತಿನಿಧಿಯನ್ನು ಭೇಟಿಯಾಗದೆಯೇ ಇರಾನ್ ನಿಯೋಗವು ಪಾಕಿಸ್ತಾನದಿಂದ ನಿರ್ಗಮಿಸಿದೆ. ಇರಾನ್ ವಿದೇಶಾಂಗ ಸಚಿವ ಅಬ್ಬಾಸ್ ಅರಾಘ್ಚಿ ನೇತೃತ್ವದ ನಿಯೋಗವು ಅಮೆರಿಕದ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸದೆ ಶನಿವಾರ ಇಸ್ಲಾಮಾಬಾದ್‌ನಿಂದ ನಿರ್ಗಮಿಸಿತು.

ಹೀಗಾಗಿ ಮಧ್ಯಸ್ಥಿಕೆ ವಹಿಸಿದ್ದ ಪಾಕಿಸ್ತಾನಕ್ಕೆ ಎರಡೂ ದೇಶಗಳನ್ನು ಮಾತುಕತೆಗೆ ಒಪ್ಪಿಸಲು ಸಾಧ್ಯವಾಗಲಿಲ್ಲ. ಈ ಮಾತುಕತೆಗಾಗಿ ಇಸ್ಲಾಮಾಬಾದ್‌ನಲ್ಲಿ ಕಟ್ಟುನಿಟ್ಟಿನ ಭದ್ರತೆ ಹೇರಲಾಗಿತ್ತು. ಅದಾಗ್ಯೂ ಸಂಧಾನ ಮಾತುಕತೆ ವಿಫಲವಾಗಿದ್ದು ಅತ್ತ ಅಮೆರಿಕ ಮತ್ತು ಇತ್ತ ಪಾಕಿಸ್ತಾನಕ್ಕೆ ತೀವ್ರ ಮುಜುಗರವಾಗುವಂತೆ ಮಾಡಿದೆ.

ಇನ್ನು ಈ ಸಭೆಗೂ ಮೊದಲೇ ಅಮೆರಿಕದೊಂದಿಗೆ ನೇರ ಮಾತುಕತೆ ನಡೆಸುವುದಿಲ್ಲ ಎಂದು ಇರಾನ್ ವಿದೇಶಾಂಗ ಸಚಿವಾಲಯ ಸ್ಪಷ್ಟಪಡಿಸಿದೆ. ಸ್ಟೀವ್ ವಿಟ್ಕಾಫ್ ಮತ್ತು ಜೇರೆಡ್ ಕುಶ್ನರ್ ನೇತೃತ್ವದ ಅಮೆರಿಕದ ತಂಡವು ಇಸ್ಲಾಮಾಬಾದ್ ತಲುಪುವ ಮೊದಲೇ ಇರಾನ್ ನಿಯೋಗವು ಅಲ್ಲಿಂದ ಹೊರಟು ಹೋಗಿದೆ.

ಇರಾನ್ ಬಂದರುಗಳ ಮೇಲೆ ಅಮೆರಿಕ ವಿಧಿಸಿರುವ ನೌಕಾ ದಿಗ್ಬಂಧನವು ಕದನ ವಿರಾಮದ ಉಲ್ಲಂಘನೆ ಎಂದು ಇರಾನ್ ಆರೋಪಿಸಿದೆ. ವರದಿಗಳ ಪ್ರಕಾರ, ಇರಾನ್ ಕೆಳಹಂತದ ಪ್ರತಿನಿಧಿಗಳ ಬದಲಿಗೆ ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ಅವರೊಂದಿಗೆ ಮಾತುಕತೆ ನಡೆಸಲು ಆಸಕ್ತಿ ಹೊಂದಿದೆ.

ಈಗಿನ ನಿಯೋಗವನ್ನು ಭೇಟಿಯಾಗುವುದು ತನಗೆ ಮಾಡಿದ "ಅಪಮಾನ" ಎಂದು ಅದು ಭಾವಿಸಿದೆ. ಇದೇ ಕಾರಣಕ್ಕೆ ಮಾತುಕತೆಗೆ ನಿಲ್ಲದೇ ಇರಾನ್ ನಿಯೋಗ ಹೊರಟು ಹೋಗಿದೆ ಎನ್ನಲಾಗಿದೆ. ಅಂತೆಯೇ ಪಾಕಿಸ್ತಾನದಿಂದ ನಿರ್ಗಮಿಸಿದ ನಂತರ, ಇರಾನ್ ನಿಯೋಗವು ತನ್ನ ರಾಜತಾಂತ್ರಿಕ ಪ್ರವಾಸವನ್ನು ಮಸ್ಕತ್ ಮತ್ತು ಮಾಸ್ಕೋದಲ್ಲಿ ಮುಂದುವರಿಸಲಿದೆ.

# 'ಲೋಕಸಭೆಯಲ್ಲಿ ಮಹಿಳೆಯರ ಪ್ರಾತಿನಿಧ್ಯ ಜಾಸ್ತಿ ಆಗಬೇಕು'

ಬೆಂಗಳೂರು:ರಾಜ್ಯದ ವಿಧಾನಸಭೆ ಮತ್ತು ದೇಶದ ಲೋಕಸಭೆಯಲ್ಲಿ ಮಹಿಳೆಯರ ಪ್ರಾತಿನಿಧ್ಯ ಜಾಸ್ತಿ ಆಗಬೇಕು. ಮಹಿಳೆಯರು ಕಾನೂನು ರೂಪಿಸುವ ಜವಾಬ್ದಾರಿಯುತ ಅವಕಾಶ ಪಡೆಯಬೇಕು ಎಂದು ಮಹಿಳಾ ಮೀಸಲಾತಿ ಮಸೂದೆ ಜಾರಿಗೆ ಕೇಂದ್ರ ಸರ್ಕಾರ ಮುಂದಾಗಿತ್ತು ಎಂದು ಕೇಂದ್ರ ಸಚಿವೆ ಕು. ಶೋಭಾ ಕರಂದ್ಲಾಜೆ ಅವರು ಹೇಳಿದರು.

ಸಂಸತ್ತಿನಲ್ಲಿ ಇತ್ತೀಚೆಗೆ ಮಂಡಿಸಿದ ಮಹಿಳಾ ಮೀಸಲಾತಿ ಮಸೂದೆ ಜಾರಿಯಾಗದಂತೆ ತಡೆದ ಕಾಂಗ್ರೆಸ್ ಮತ್ತು ಇಂಡಿ ಮೈತ್ರಿ ಪಕ್ಷಗಳ ವಿರುದ್ಧ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ "ನಾರಿ ಶಕ್ತಿ ಫೋರಂ" ವತಿಯಿಂದ ಹಮ್ಮಿಕೊಂಡಿದ್ದ ಬೃಹತ್ ಪ್ರತಿಭಟನೆ ಉದ್ದೇಶಿಸಿ ಅವರು ಮಾತನಾಡಿದರು.

ದೇಶಕ್ಕೆ ಬೇಕಾದ ಕಾನೂನು ಲೋಕಸಭೆಯಲ್ಲಿ ಸಿದ್ಧವಾಗುತ್ತದೆ. ಯಾವ ನೀತಿ ಬೇಕು? ಹೇಗಿರಬೇಕು ಎಂಬ ನಿರ್ಣಾಯಕ ಪಾತ್ರದಲ್ಲಿ ಮಹಿಳೆಯರ ಪಾಲು ಇರಬೇಕು ಎಂಬ ಉದ್ದೇಶದಿಂದ ಮಹಿಳಾ ಮೀಸಲಾತಿ ಮಸೂದೆ ಮಂಡನೆಯಾಗಿತ್ತು. ಆದರೆ ಈ ಮಸೂದೆಗೆ ಕಾಂಗ್ರೆಸ್ ಹಾಗೂ ಅವರ ಮಿತ್ರ ಪಕ್ಷಗಳು ಬೆಂಬಲ ನೀಡದೆ ಸೋಲಾಗುವಂತೆ ಮಾಡಿದವು ಎಂದು ಆರೋಪಿಸಿದರು.

ದೇಶಕ್ಕೆ ಬೇಕಾದ ಕಾನೂನು ಲೋಕಸಭೆಯಲ್ಲಿ ಸಿದ್ಧವಾಗುತ್ತದೆ. ಯಾವ ನೀತಿ ಬೇಕು? ಹೇಗಿರಬೇಕು ಎಂಬ ನಿರ್ಣಾಯಕ ಪಾತ್ರದಲ್ಲಿ ಮಹಿಳೆಯರ ಪಾಲು ಇರಬೇಕು ಎಂಬ ಉದ್ದೇಶದಿಂದ ಮಹಿಳಾ ಮೀಸಲಾತಿ ಮಸೂದೆ ಮಂಡನೆಯಾಗಿತ್ತು. ಆದರೆ ಈ ಮಸೂದೆಗೆ ಕಾಂಗ್ರೆಸ್ ಹಾಗೂ ಅವರ ಮಿತ್ರ ಪಕ್ಷಗಳು ಬೆಂಬಲ ನೀಡದೆ ಸೋಲಾಗುವಂತೆ ಮಾಡಿದವು ಎಂದು ಆರೋಪಿಸಿದರು.

ಮಹಿಳೆಯ ಧ್ವನಿ ವಿಧಾನಸಭೆ ಮತ್ತು ಸಂಸತ್ತಿನಲ್ಲಿ ಇರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಬಯಸಿದ್ದರು. ರಾಜ್ಯಗಳ ವಿಧಾನಸಭೆಯಲ್ಲಿ ಮಹಿಳಾ ಎಂಎಸ್‌ಎಗಳ ಸಂಖ್ಯೆ ಹೆಚ್ಚಳವಾಗಬೇಕು ಎಂದುಕೊಂಡಿದ್ದರು ಎಂದರು.

ಪ್ರಧಾನಿ ಮೋದಿ ಅವರು ಮಹಿಳಾ ಸಂಸದರಿಗೆ ದೊಡ್ಡ ದೊಡ್ಡ ಜವಾಬ್ದಾರಿ ಕೊಟ್ಟಿದ್ದಾರೆ. ನಿರ್ಮಲಾ ಸೀತಾರಾಮನ್ ಅವರು ಈಗ ಹಣಕಾಸು ಸಚಿವೆ ಆಗಿದ್ದಾರೆ. ಈ ಹಿಂದೆ ರಕ್ಷಣಾ ಸಚಿವರಾಗಿದ್ದರು. ಭಾರತ ಇಂದು ವಿಶ್ವದ ಆರ್ಥಿಕ ಶಕ್ತಿಗಳಲ್ಲಿ ನಾಲ್ಕನೇ ಶಕ್ತಿ ಆಗಿದೆ. ಇಂದು ಮಹಿಳೆ ಯುದ್ಧ ವಿಮಾನಗಳನ್ನು ಚಾಲನೆ ಮಾಡುತ್ತಾರೆ. ಸಿಂಧೂರ ಕಾರ್ಯಾಚರಣೆಯ ನೇತೃತ್ವ ವಹಿಸಿದ್ದು ಮಹಿಳೆ. ಹೀಗೆ ಮಹಿಳೆಯ ಧ್ವನಿ ದೊಡ್ಡದಿದೆ. ಈ ಧ್ವನಿಗೆ ಶಿಕ್ಷಣ ಇದ್ದಾಗ ಬೆಲೆ ಬರುತ್ತೆ. ಹಣ ಇದ್ದಾಗ ಗೌರವ ಬರುತ್ತೆ. ಇದೆಲ್ಲಕ್ಕಿಂತ ನೀತಿ ರೂಪಿಸುವಲ್ಲಿ ಮಹಿಳೆ ಇದ್ದರೆ ಇನ್ನೂ ಒಳ್ಳೆಯದು ಎಂದರು.




**ಪ್ರಧಾನಿ ಮೋದಿ ಅವರು ಮಹಿಳಾ ಸಂಸದರಿಗೆ ದೊಡ್ಡ ದೊಡ್ಡ ಜವಾಬ್ದಾರಿ ಕೊಟ್ಟಿದ್ದಾರೆ. ನಿರ್ಮಲಾ ಸೀತಾರಾಮನ್ ಅವರು ಈಗ ಹಣಕಾಸು ಸಚಿವೆ ಆಗಿದ್ದಾರೆ. ಈ ಹಿಂದೆ ರಕ್ಷಣಾ ಸಚಿವರಾಗಿದ್ದರು. ಭಾರತ ಇಂದು ವಿಶ್ವದ ಆರ್ಥಿಕ ಶಕ್ತಿಗಳಲ್ಲಿ ನಾಲ್ಕನೇ ಶಕ್ತಿ ಆಗಿದೆ. ಇಂದು ಮಹಿಳೆ ಯುದ್ಧ ವಿಮಾನಗಳನ್ನು ಚಾಲನೆ ಮಾಡುತ್ತಾರೆ. ಸಿಂಧೂರ ಕಾರ್ಯಾಚರಣೆಯ ನೇತೃತ್ವ ವಹಿಸಿದ್ದು ಮಹಿಳೆ.**

ಮಹಿಳೆಯರು ಆರ್ಥಿಕವಾಗಿ ಸದೃಢವಾಗಲು ಹಲವು ಯೋಜನೆಗಳನ್ನು ಕೇಂದ್ರ ಸರ್ಕಾರ ಜಾರಿ ಮಾಡಿದೆ. ಮಹಿಳೆ ಇಂದು ಡ್ರೋಣ್ ತಯಾರಿ ಸಹ ಮಾಡುತ್ತಿದ್ದಾರೆ ಎಂದು ವಿವರಿಸಿದರು. ಹೊಸದಾಗಿ ಮಹಿಳಾ ಮೀಸಲು ಕಾಯಿದೆ ಯಾಕೆ ತಂದಿದ್ದೀರ ಎಂದು ಕಾಂಗ್ರೆಸ್ ನವರು ಕೇಳಬಹುದು.

ಈ ಹಿಂದೆ 543 ಸ್ಥಾನಗಳಿಗೆ ಮಹಿಳಾ ಮೀಸಲಾತಿ ಮಸೂದೆ ತಂದಿದ್ದರು.

ಪುರುಷರ ಸ್ಥಾನಗಳನ್ನು ಕಿತ್ತು ಕೊಳ್ಳುವುದು ಬೇಡ ಎಂದು ಸ್ಥಾನಗಳನ್ನು ಹೆಚ್ಚಳ ಮಾಡಿ ಮಸೂದೆ ಮಂಡಿಸಿದರು. ಗಣತಿ ಆದ ನಂತರ ಕ್ಷೇತ್ರ ಮರುವಿಂಗಡಣೆ ಮಾಡಿ ಎಂದು ಕಾಂಗ್ರೆಸ್ ನವರು ಒತ್ತಾಯ ಮಾಡುತ್ತಿದ್ದಾರೆ. ಸಮೀಕ್ಷೆ ಆದ ನಂತರ ಕ್ಷೇತ್ರ ಹಂಚಿಕೆ ಮಾಡಿದರೆ ದಕ್ಷಿಣ ಭಾರತಕ್ಕೆ ಸೀಟು ಕಡಿಮೆ ಆಗಲಿದೆ. ಹಾಗಾಗಿ ಎರಡೂ ಮಸೂದೆಯನ್ನು ಮಂಡಿಸಲಾಗಿತ್ತುಸಿತ್ತು ಎಂದರು.

# ಬಿಎಂಟಿಸಿಗೆ ವಿದ್ಯಾರ್ಥಿನಿ ಬಲಿ

ಬೆಂಗಳೂರು: ಸಿಲಿಕಾನ್ ಸಿಟಿಯಲ್ಲಿ ಬಿಎಂಟಿಸಿ ಬಸ್‌ಗೆ ಮತ್ತೊಂದು ಬಲಿಯಾಗಿದೆ. ನಗರದ ಉತ್ತರಹಳ್ಳಿ ಮುಖ್ಯರಸ್ತೆಯಲ್ಲಿ ಇಂದು ನಡೆದ ಭೀಕರ ಅಪಘಾತದಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿನಿಯೊಬ್ಬಳು ಬಿಎಂಟಿಸಿ ಬಸ್ ಚಕ್ರದಡಿ ಸಿಲುಕಿ ಸ್ಥಳದಲ್ಲೇ ದುರ್ಮರಣ ಹೊಂದಿರುವಂತಹ ಘಟನೆ ನಡೆದಿದೆ. ಶಿರೀಷಾ(21) ಮೃತ ಇಂಜಿನಿಯರಿಂಗ್ ವಿದ್ಯಾರ್ಥಿನಿ. ಕೆಂಗೇರಿ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಶಿರೀಷಾ ತಮ್ಮ ದ್ವಿಚಕ್ರ ವಾಹನದಲ್ಲಿ ತೆರಳುತ್ತಿದ್ದಾಗ, ಉತ್ತರಹಳ್ಳಿ ಮುಖ್ಯರಸ್ತೆಯ ಶ್ರೀನಿವಾಸಪುರ ಕ್ರಾಸ್ ಬಳಿ ಈ ದುರ್ಘಟನೆ ಸಂಭವಿಸಿದೆ. ಒಂದೇ ದಿಕ್ಕಿನಲ್ಲಿ ಚಲಿಸುತ್ತಿದ್ದ ಬಿಎಂಟಿಸಿ ಬಸ್ ಮತ್ತು ಬೈಕ್ ನಡುವೆ ಅಂತರ ಕಡಿಮೆಯಾದ ಕಾರಣ, ಬೈಕ್‌ನ ಹ್ಯಾಂಡಲ್ ಬಸ್‌ಗೆ ತಗುಲಿದೆ. ಪರಿಣಾಮ ಶಿರೀಷಾ ರಸ್ತೆಗೆ ಬಿದ್ದಿದ್ದಾರೆ. ಈ ವೇಳೆ ವೇಗವಾಗಿ ಬಂದ ಬಸ್ ಯುವತಿಯ ಮೇಲೆ ಹರಿದಿದ್ದು, ತೀವ್ರ ರಕ್ತಸ್ರಾವದಿಂದಾಗಿ ಸ್ಥಳದಲ್ಲೇ ಕೊನೆಯುಸಿರೆಳೆದಿದ್ದಾರೆ.

ಅಪಘಾತದ ಬಳಿಕ ಸ್ಥಳಕ್ಕೆ ಧಾವಿಸಿದ ಕೆಂಗೇರಿ ಸಂಚಾರಿ ಪೊಲೀಸರು, ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆರ್.ಆರ್. ಮೆಡಿಕಲ್ ಕಾಲೇಜು ಆಸ್ಪತ್ರೆಗೆ ರವಾನಿಸಿದ್ದಾರೆ. ಅಪಘಾತಕ್ಕೆ ಕಾರಣವಾದ ಬಿಎಂಟಿಸಿ ಬಸ್ ಚಾಲಕ ಚಂದ್ರು ಎಂಬಾತನನ್ನು ಪೊಲೀಸರು ವಶಕ್ಕೆ ಪಡೆದಿದ್ದು, ತನಿಖೆ ನಡೆಸಿದ್ದಾರೆ.

# ಬೀಸುವ ದೊಣ್ಣೆಯಿಂದ ತಪ್ಪಿಸಿಕೊಂಡರೆ ಸಾಕೆಂಬ ರೀತಿಯ ತೀರ್ಮಾನ

ಬೆಂಗಳೂರು: ಒಳ ಮೀಸಲಾತಿಗೆ ಸಂಬಂಧಿಸಿ ಎಲ್ಲರನ್ನೂ ಬೀದಿಯಲ್ಲಿ ನಿಲ್ಲಿಸಿ ಬೀಸುವ ದೊಣ್ಣೆಯಿಂದ ತಪ್ಪಿಸಿಕೊಂಡರೆ ಸಾಕೆಂಬ ರೀತಿಯಲ್ಲಿ ತೀರ್ಮಾನವನ್ನು ಕಾಂಗ್ರೆಸ್ಸಿನ ಸಿದ್ದರಾಮಯ್ಯನವರ ಸರಕಾರ ಮಾಡಿದೆ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಆಕ್ಷೇಪಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಈ ತೀರ್ಮಾನ ಮಾಡುವಾಗ ಉಪ ಮುಖ್ಯಮಂತ್ರಿಗಳು ಊರಲ್ಲೇ ಇರಲಿಲ್ಲ; ಬಹುಶಃ ಅವರಿಗೂ ಇದು ತೃಪ್ತಿಕರ ಅಲ್ಲ ಎಂಬುದು ಗೊತ್ತಿತ್ತು ಎಂದು ವಿಶ್ಲೇಷಿಸಿದರು.

# ಹೈ ಸ್ಪೀಡ್ ರೈಲು ತಯಾರಿಕೆ 'ಸಂಕೀರ್ಣ'ಕ್ಕೆ ಚಾಲನೆ

ಬೆಂಗಳೂರು: ಕೇಂದ್ರ ರೈಲ್ವೆ, ಮಾಹಿತಿ ಮತ್ತು ಪ್ರಸಾರ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಅವರು ಇಂದು ಬೆಂಗಳೂರಿನ ಬಿಇಎಂಎಲ್ ತಿಪ್ಪಸಂದ್ರ ಕ್ಯಾಂಪಸ್‌ಗೆ ಭೇಟಿ ನೀಡಿ, ಹೈ ಸ್ಪೀಡ್ ರೈಲು ತಯಾರಿಕೆಗೆ ಮೀಸಲಾಗಿರುವ ವಿಶೇಷ ಸಂಕೀರ್ಣ 'ಆದಿತ್ಯ' ಅನ್ನು ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಹೈ ಸ್ಪೀಡ್ ರೈಲು ತಂತ್ರಜ್ಞಾನವು ಅತ್ಯಂತ ಸಂಕೀರ್ಣ ಮತ್ತು ಉನ್ನತ ಮಟ್ಟದ ತಾಂತ್ರಿಕತೆಯನ್ನು ಒಳಗೊಂಡಿದ್ದು, ಅದರ ಸ್ವದೇಶೀ ಅಭಿವೃದ್ಧಿ ಭಾರತದ ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಮಹತ್ವದ ಮೈಲಿಗಲ್ಲಾಗಿದೆ ಎಂದು ಹೇಳಿದರು.

ಹೊಸದಾಗಿ ಉದ್ಘಾಟಿಸಲಾದ 'ಆದಿತ್ಯ' ಸಂಕೀರ್ಣವು ಪ್ರಸ್ತುತ ಬಿ–28 ಕೋಚ್‌ಗಳ ಅಭಿವೃದ್ಧಿಗೆ ವಿನ್ಯಾಸಗೊಳಿಸಲಾಗಿದೆ.

ಹೈ ಸ್ಪೀಡ್ ರೈಲುಗಳ ಪರಿವರ್ತಕ ಶಕ್ತಿಯನ್ನು ಉಲ್ಲೇಖಿಸಿದ ಸಚಿವರು, ಇವು ಪ್ರಮುಖ ನಗರಗಳ ನಡುವಿನ ದೂರವನ್ನು ಪರಿಣಾಮಕಾರಿಯಾಗಿ ಕಡಿಮೆ ಮಾಡುವುದರ ಮೂಲಕ ಅವುಗಳನ್ನು ಒಂದೇ ವಿಸ್ತೃತ ನಗರ ವ್ಯವಸ್ಥೆಯಾಗಿ ರೂಪಿಸುವುದಕ್ಕೆ ಸಹಾಯ ಮಾಡುತ್ತವೆ ಎಂದು ಹೇಳಿದರು. ಉದಾಹರಣೆಗೆ, ಚೆನ್ನೈ ಮತ್ತು ಬೆಂಗಳೂರು ನಡುವಿನ ಪ್ರಯಾಣದ ಅವಧಿ ಕೇವಲ 73 ನಿಮಿಷಗಳಿಗೆ ಇಳಿಯುವ ಸಾಧ್ಯತೆ ಇದೆ ಎಂದು ತಿಳಿಸಿದರು.



ಮುಂಬೈ–ಬೆಂಗಳೂರು ಸಂಪರ್ಕವನ್ನು ಇನ್ನಷ್ಟು ಬಲಪಡಿಸಲು, ಎರಡು ಹೊಸ ಸೇವೆಗಳ ಪರಿಚಯದ ಬಗ್ಗೆ ಸಚಿವರು ಮಾಹಿತಿ ನೀಡಿದರು. ಹುಬ್ಬಳ್ಳಿ ಮಾರ್ಗವಾಗಿ ಎಲ್‌ಎಚ್‌ಬಿ ಕೋಚ್‌ಗಳನ್ನು ಒಳಗೊಂಡ ಹೊಸ ಮೇಲ್/ಎಕ್ಸ್‌ಪ್ರೆಸ್ ರೈಲು ಪರಿಚಯಿಸಲಾಗುವುದು. ಜೊತೆಗೆ, ವಂದೇ ಭಾರತ್ ಸ್ಲೀಪರ್ ಎಕ್ಸ್‌ಪ್ರೆಸ್ ಶೀಘ್ರದಲ್ಲೇ ಕಾರ್ಯಾಚರಣೆಗೆ ಬರಲಿದೆ ಎಂದು ಹೇಳಿದರು.

ಪ್ರಾದೇಶಿಕ ಸಂಪರ್ಕವನ್ನು ವಿಸ್ತರಿಸುವ ಉದ್ದೇಶದಿಂದ, ಮಂಗಳೂರು ಬೆಂಗಳೂರು ನಡುವಿನ ವಂದೇ ಭಾರತ್ ಸೇವೆಯನ್ನು ಶೀಘ್ರದಲ್ಲೇ ಪ್ರಾರಂಭಿಸಲಾಗುವುದು ಎಂದು ಸಚಿವರು ದೃಢಪಡಿಸಿದರು.

ಈ ಸೇವೆಯನ್ನು ಅನುಷ್ಠಾನಗೊಳಿಸುವ ಮೊದಲು ಮಡಗಾಂವ್ ಹಾಗೂ ಕರ್ನಾಟಕದ ಇತರ ಕರಾವಳಿ ನಗರಗಳನ್ನು ಸಂಪರ್ಕಿಸುವ ಬಗ್ಗೆ ಪರಿಗಣಿಸಲಾಗುತ್ತಿದೆ ಎಂದು ಹೇಳಿದರು. ಹಾಸನ ಮಂಗಳೂರು ವಿಭಾಗದಲ್ಲಿ ವಿದ್ಯುದೀಕರಣ ಪೂರ್ಣಗೊಂಡಿರುವುದು ಹಾಗೂ ಕಡಿದಾದ ಕರಾವಳಿ ಪ್ರದೇಶಗಳಲ್ಲಿ ಸುರಕ್ಷತೆಯನ್ನು ಹೆಚ್ಚಿಸಲು ಸ್ವಯಂಚಾಲಿತ ತುರ್ತು ಬ್ರೇಕಿಂಗ್ (ಎಇಬಿ) ವ್ಯವಸ್ಥೆಗಳನ್ನು ಅಳವಡಿಸಿರುವುದರಿಂದ ತಾಂತ್ರಿಕ ಅಡಚಣೆಗಳು ನಿವಾರಣೆಯಾಗಿವೆ ಎಂದು ಅವರು ವಿವರಿಸಿದರು.

ತಿಪ್ಪಸಂದ್ರ ಘಟಕದ ಎಂಜಿನಿಯರಿಂಗ್ ಸಾಮರ್ಥ್ಯವನ್ನು ಶ್ಲಾಘಿಸಿದ ಸಚಿವರು, ಮುಂದಿನ ಪೀಳಿಗೆಯ ರೋಲಿಂಗ್ ಸ್ಟಾಕ್ ಅಭಿವೃದ್ಧಿಯಲ್ಲಿ ಅವರ ಕೊಡುಗೆ ಅಭಿವೃದ್ಧಿ ಹೊಂದಿದ ಭಾರತದ ನಿರ್ಮಾಣದಲ್ಲಿ ಪ್ರಮುಖ ಪಾತ್ರವಹಿಸುತ್ತದೆ ಎಂದು ಹೇಳಿದರು. ದೊಡ್ಡ ಮೂಲಸೌಕರ್ಯ ಅಭಿವೃದ್ಧಿಯೊಂದಿಗೆ ಪರಿಸರ ಸಂರಕ್ಷಣೆ ಮತ್ತು ಸಾರ್ವಜನಿಕ ಜಾಗೃತಿ ನಡುವಿನ ಸಮತೋಲನವನ್ನು ಕಾಪಾಡುವಲ್ಲಿ ಸರ್ಕಾರದ ಬದ್ಧತೆಯನ್ನು ಅವರು ಪುನರುಚ್ಚರಿಸಿದರು.

ಭಾರತ ಸಾರಥಿ
27/04/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## 3,003 ಕೋಟಿ ರೂಪಾಯಿಗಳ ಕ್ರೋಢೀಕೃತ ಲಾಭ

ಮುಂಬೈ

ಎಲ್&ಟಿ ಫೈನಾನ್ಸ್ ಲಿಮಿಟೆಡ್ (ಎಲ್‌ಟಿಎಫ್), ಭಾರತದ ಪ್ರಮುಖ ಬ್ಯಾಂಕೇತರ ಹಣಕಾಸು ಕಂಪನಿಗಳಲ್ಲಿ ಒಂದಾಗಿದ್ದು, ಮಾರ್ಚ್ 31, 2026ಕ್ಕೆ ಕೊನೆಗೊಂಡ ಹಣಕಾಸು ವರ್ಷದಲ್ಲಿ (ಕಾರ್ಮಿಕ ಸಂಹಿತೆ ಜಾರಿಗೆ ಮೊದಲು) ತೆರಿಗೆ ನಂತರ 3,003 ಕೋಟಿ ರೂಪಾಯಿಗಳ ಕ್ರೋಢೀಕೃತ ಲಾಭವನ್ನು ದಾಖಲಿಸಿದೆ. ಇದು ವರ್ಷದಿಂದ ವರ್ಷಕ್ಕೆ 14% ಏರಿಕೆಯನ್ನು ಸೂಚಿಸುತ್ತದೆ.

ಮಾರ್ಚ್ 31, 2026 ಕ್ಕೆ ಕೊನೆಗೊಂಡ ನಾಲ್ಕನೇ ತ್ರೈಮಾಸಿಕದಲ್ಲಿ ಕಂಪನಿಯು 807 ಕೋಟಿ ರೂಪಾಯಿಗಳ ಕ್ರೋಢೀಕೃತ ಲಾಭವನ್ನು ದಾಖಲಿಸಿದ್ದು, ವರ್ಷದಿಂದ ವರ್ಷಕ್ಕೆ 27% ಹೆಚ್ಚಳವಾಗಿದೆ. ಕಂಪನಿಯು ಸಂಪೂರ್ಣವಾಗಿ ಕೃತಕ ಬುದ್ಧಿಮತ್ತೆ ಆಧಾರಿತ ತಂತ್ರಜ್ಞಾನ ಬಳಕೆಯತ್ತ ವೇಗವಾಗಿ ಮುಂದುವರಿಯುತ್ತಿದೆ ಎಂದು ತಿಳಿಸಿದೆ.

ಮಾರ್ಚ್ 31, 2026 ಕ್ಕೆ ಕೊನೆಗೊಂಡ ಹಣಕಾಸು ವರ್ಷದಲ್ಲಿ ರಿಟೇಲ್ ಪುಸ್ತಕದ ಗಾತ್ರ 1,19,508 ಕೋಟಿ ರೂಪಾಯಿಗಳಿಗೆ ತಲುಪಿದ್ದು, ವರ್ಷದಿಂದ ವರ್ಷಕ್ಕೆ 26% ಏರಿಕೆಯಾಗಿದೆ.

ಕಂಪನಿಯು ಮಾರ್ಚ್ 31, 2026 ಕ್ಕೆ ಕೊನೆಗೊಂಡ ಹಣಕಾಸು ವರ್ಷದಲ್ಲಿ 83,213 ಕೋಟಿ ರೂಪಾಯಿಗಳ ವಿತರಣೆಯನ್ನು ದಾಖಲಿಸಿದ್ದು, ವರ್ಷದಿಂದ ವರ್ಷಕ್ಕೆ 39% ಏರಿಕೆಯಾಗಿದೆ.

## 21ರಿಂದ ವಸಂತ ಶಿಬಿರ

ಬಳ್ಳಾರಿ

ಇಲ್ಲಿನ ವಾಚಸ್ಪತಿ ಸಂಸ್ಕೃತ ಗುರುಕುಲವು ವಿಶ್ವಬ್ರಾಹ್ಮಣ ವೈದಿಕ ಪ್ರತಿಷ್ಠಾನಂ ಟ್ರಸ್ಟ್ (ರಿ), ಇವರ ಆಶ್ರಯದಲ್ಲಿ ಸಂಸ್ಕೃತ ಭಾರತಿ ಕರ್ನಾಟಕ ಉತ್ತರಂ ವತಿಯಿಂದ ಇದೇ 21 ರಿಂದ ಮೇ 1ರವರೆಗೆ 11 ದಿನಗಳ ಕಾಲ ಮಕ್ಕಳಿಗೆ ಸಂಸ್ಕಾರ ನೀಡುವಲ್ಲಿ ವಿಶೇಷವಾಗಿ ವಸಂತ ಶಿಬಿರ ಆಯೋಜಿಸಿದೆ.

ಶಿಬಿರದಲ್ಲಿ ಪ್ರತಿದಿನ ಬೆಳಿಗ್ಗೆ 8 ಗಂಟೆಯಿಂದ 11 ಗಂಟೆಯವರೆಗೆ ಪಾಠ ಪ್ರವಚನಗಳು, ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಸಂಸ್ಕೃತ ಸಂಭಾಷಣೆ, ದೇವಪೂಜಾ ವಿಧಿ, ಭಗವದ್ಗೀತೆ, ವೇದಮಂತ್ರಗಳು, ಪೌರಾಣಿಕ ಕಥೆಗಳು, ಪ್ರವಚನ, ಸಂಧ್ಯಾವಂದನಾ ಇರಲಿದೆ. ಸಂಜೆ 4 ರಿಂದ 6 ರ ವರೆಗೆ ಪ್ರವಚನ, ಭಜನೆ, ಕುಣಿತ ಭಜನೆ ಇರಲಿದೆ. ಇಸ್ಕಾನ್ ದೇವಸ್ಥಾನ ಸಹಯೋಗದೊಂದಿಗೆ ಜರುಗಲಿದ್ದು, ಚಿತ್ರಕಲೆ ಸ್ಪರ್ಧೆ, ಕ್ರೀಡೆ (ರಾಜ್ಯೋದ್ದಾನ), ದ್ವಾದಶ ಜ್ಯೋತಿರ್ಲಿಂಗ ದರ್ಶನ, ನಾಟಕ, ಭಗವದ್ಗೀತೆ ಸ್ಪರ್ಧೆ, ಭರತ ನಾಟ್ಯ, ಮಾತೃವಂದನಾ ಕಾರ್ಯಕ್ರಮಗಳೂ ನಡೆಯಲಿವೆ.

ಕಾಳಮ್ಮ ಬೀದಿಯ ಶ್ರೀ ಕಾಳಿಕಾ ಕಮಠೇಶ್ವರ ದೇವಸ್ಥಾನದಲ್ಲಿ ಈ ಎಲ್ಲ ಚಟುವಟಿಕೆಗಳು ನಡೆಯಲಿದ್ದು ಆಸಕ್ತ ವಿದ್ಯಾರ್ಥಿಗಳು ವಿಶ್ವರೂಪ ಆಚಾರ್ಯ, ಸಂಸ್ಕೃತ ಶಿಕ್ಷಕರು ಹಾಗೂ ಸಾಹಿತಿಗಳು ಇವರನ್ನು 9686260240 ಸಂಪರ್ಕಿಸಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು. ವೈಶಾಖ ಶುದ್ಧ ಪಂಚಮಿ 21ರ ಮಂಗಳವಾರದಂದು ಬೆಳಿಗ್ಗೆ 9 ಗಂಟೆಯಿಂದ ಪೂಜಾ ಹಾಗೂ ಶ್ರೀ ಗಾಯತ್ರಿ ಜಯಂತಿ ಮತ್ತು ಭಗವತ್ಪಾದ ಶ್ರೀ ಆದಿಶಂಕರಾಚಾರ್ಯ ಜಯಂತಿಯನ್ನು ಆಚರಿಸಲಾಗುತ್ತದೆ. ಇದೇವೇಳೆ ಶ್ರೀ ವಾಚಸ್ಪತಿ ಸಂಸ್ಕೃತ ಗುರುಕುಲ ಉದ್ಘಾಟನೆ ಕಾರ್ಯಕ್ರಮವೂ ಇರಲಿದೆ ಎಂದು ಶ್ರೀ ಓಂಕಾರಸ್ವಾಮಿ ಮಠ ಮತ್ತು ಶ್ರೀ ಕಾಳಿಕಾ ಕಮಠೇಶ್ವರ ಸ್ವಾಮಿ ದೇವಸ್ಥಾನ, ವಿಶ್ವಬ್ರಾಹ್ಮಣ ವೈದಿಕ ಪ್ರತಿಷ್ಠಾನಂ ಟ್ರಸ್ಟ್ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿಯವರು ತಿಳಿಸಿದ್ದಾರೆ.

## 7ರಂದು 'ಗೀತ-ನೃತ್ಯ' ವೈಭವ

ತುಮಕೂರು

ನಗರದ ಸ್ವರಸಿಂಚನ ಸುಗಮ ಸಂಗೀತ ಜಾನಪದ ಕಲಾ ಸಂಸ್ಥೆ ಹಾಗೂ ಜ್ಞಾನಬುತ್ತಿ ಸತ್ಸಂಗ ಕೇಂದ್ರದ ಸಂಯುಕ್ತ ಆಶ್ರಯದಲ್ಲಿ ಇದೇ 7ರಂದು ಸಂಜೆ 6 ಗಂಟೆಗೆ ಎಸ್.ಎಸ್.ಪುರಂನ ವಾಸವಿ ದೇವಾಲಯದ ಸುಜ್ಞಾನ ಮಂದಿರದಲ್ಲಿ "ಕೊರಳ ಕೊಳಲ ಧ್ವನಿಗೆ ಗೆಜ್ಜೆಯ ನಾದವಾಲಿಸೇ ಓ ಮನವೇ" ಎಂಬ ವಿನೂತನ ಸಾಂಸ್ಕೃತಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಕಾರದೊಂದಿಗೆ ನಡೆಯಲಿರುವ ಈ ಕಾರ್ಯಕ್ರಮದ ಕುರಿತು ಸಂಸ್ಥೆಯ ಅಧ್ಯಕ್ಷ ಮಲ್ಲಿಕಾರ್ಜುನ ಕೆಂಕೆರೆ ಮಾಹಿತಿ ನೀಡಿದ್ದಾರೆ.

ತುಮಕೂರು ಉಪವಿಭಾಗಾಧಿಕಾರಿ ನಾಹಿದಾ ಜಮ್ ಜಮ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ. ಜ್ಞಾನಬುತ್ತಿ ಸತ್ಸಂಗ ಕೇಂದ್ರದ ಅಧ್ಯಕ್ಷ ಮುರುಳೀಕೃಷ್ಣಪ್ಪ ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ನಗರಪಾಲಿಕೆ ಉಪ ಆಯುಕ್ತರಾದ ಸುಪ್ರಿಯ ಬಣಗಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಈಶ್ವರ್ ಕುಮಾರ್ ಮಿರ್ಜಿ, ಹಿರಿಯ ಪತ್ರಕರ್ತ ಸಾ.ಚಿ. ರಾಜಕುಮಾರ್ ಹಾಗೂ ನಾಟಕ ಅಕಾಡೆಮಿ ರಿಜಿಸ್ಟ್ರಾರ್ ನೀಲಮ್ಮ ಪಾಲ್ಗೊಳ್ಳಲಿದ್ದಾರೆ.

ಕಾರ್ಯಕ್ರಮದ ವಿಶೇಷತೆಗಳು:

ಸಂಗೀತ ಮತ್ತು ನೃತ್ಯದ ಸಮಾಗಮವಿರುವ ಈ ಸಂಜೆ ಹಲವು ಕಲಾವಿದರಿಂದ ಸಾಂಸ್ಕೃತಿಕ ಮೆರುಗು ಸಿಗಲಿದೆ.

ಜಾನಪದ ನೃತ್ಯ: ಅಂತರಾಷ್ಟ್ರೀಯ ನೃತ್ಯ ಕಲಾವಿದ ವಿದ್ವಾನ್ ಕೋಲಾರ ರಮೇಶ್ ಮತ್ತು ತಂಡ.


ಗೀತ ವೈವಿಧ್ಯ: ಅಕಾಡೆಮಿ ಸದಸ್ಯ ಪದ ದೇವರಾಜು, ವನಿತಾ ಹಿರೇಮಠ ಹಾಗೂ ವೈ.ಎನ್. ಶಶಿಕುಮಾರ್ ತಂಡದಿಂದ ಜನಪದ ಗಾಯನ.

ಸುಗಮ ಸಂಗೀತ: ಬೆಂಗಳೂರಿನ ಸಮೃದ್ಧಿ ಸಂಗೀತ ಶಾಲೆಯ ಮಂಜುಳಾ ಮತ್ತು ತಂಡ.

ತತ್ವಪದಗಳು: ಎಳನಡುವಿನ ರಘು ಪೂಜಾರ್ ಮತ್ತು ತಂಡದಿಂದ ಗಾಯನ.

ವಾದ್ಯ ವೈವಿಧ್ಯ: ಗಣೇಶ್ ಪ್ರಸಾದ್ (ಕೀಬೋರ್ಡ್), ಲೋಕೇಶ್ ಬಾಬು (ತಬಲ), ರಾಜೇಶ್ ರಂಗನಾಥ್ (ಡೋಲಕ್), ನಿರಂಜನ್ (ರಿದಮ್ ಪ್ಯಾಡ್) ಹಾಗೂ ಪಂಡಿತ್ ನಾಗರಾಜ ಶ್ಯಾವಿ (ಕೊಳಲು) ಅವರು ಹಿನ್ನೆಲೆ ಸಂಗೀತದಲ್ಲಿ ಸಾಥ್ ನೀಡಲಿದ್ದಾರೆ.

ಸಂಗೀತ ಹಾಗೂ ಕಲಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಸಾಂಸ್ಕೃತಿಕ ಸಂಜೆಯನ್ನು ಯಶಸ್ವಿಗೊಳಿಸಬೇಕೆಂದು ಮಲ್ಲಿಕಾರ್ಜುನ ಕೆಂಕೆರೆ ಮನವಿ ಮಾಡಿದ್ದಾರೆ.




ಉತ್ತರ ಪ್ರದೇಶದ ಗ್ರೇಟರ್ ನೋಯ್ಡಾದಲ್ಲಿ ನಡೆದ ಪ್ರತಿಷ್ಠಿತ 'ಇಂಡಿಯಾ ಸ್ಕಿಲ್ ಒಲಂಪಿಕ್ಸ್ 2025-26' ಕ್ರೀಡಾ ಪಂದ್ಯಾವಳಿಯ ಸೈಬರ್ ಸೆಕ್ಯೂರಿಟಿ ವಿಭಾಗದಲ್ಲಿ ದೊಡ್ಡಬಳ್ಳಾಪುರ ನಗರದ ಕುಮಾರಿ ಚಿತ್ರಾ ಉದಯ್ ಕುಮಾರ್ ಬಂಗಾರದ ಪದಕ ಜಯಗಳಿಸಿದ್ದಾರೆ. ಈ ಅಮೋಘ ಸಾಧನೆಗೆ ತಾಲ್ಲೂಕಿನ ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಗಣ್ಯರು ಹರ್ಷ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

# 'ಅಮಿಡ್‌ಸ್ಟ್ ನೇಚರ್' ಮೊದಲ ಹಂತದ ಪಾಲುದಾರಿಕೆ ಘೋಷಣೆ

ಬೆಂಗಳೂರು

ಬೆಂಗಳೂರಿನ ಪ್ರಕೃತಿ–ಕೇಂದ್ರಿತ ಪ್ಲಾಟೆಡ್ ಅಭಿವೃದ್ಧಿ ಕ್ಷೇತ್ರದಲ್ಲಿ ಅತ್ಯಂತ ನಿರೀಕ್ಷಿತ ಯೋಜನೆಗಳಲ್ಲಿ ಒಂದಾಗಿರುವ ಈಎಆರ್‌ಎ ಗುಂಪಿನ 'ಅಮಿಡ್‌ಸ್ಟ್ ನೇಚರ್' ಮೊದಲ ಹಂತವನ್ನು ಚಾನೆಲ್ ಪಾಲುದಾರರಿಗೆ ಅಧಿಕೃತವಾಗಿ ಪರಿಚಯಿಸಲಾಯಿತು.

ಈಎಆರ್‌ಎ ಗುಂಪು ಆಯೋಜಿಸಿದ್ದ ವಿಶೇಷ ಚಾನೆಲ್ ಪಾಲುದಾರರ ಸಭೆ ಯೋಜನೆಯ ಸ್ಥಳದಲ್ಲೇ ಯಶಸ್ವಿಯಾಗಿ ನಡೆಯಿತು. ಈ ಕಾರ್ಯಕ್ರಮದಲ್ಲಿ ಸುಮಾರು ನೂರುಕ್ಕೂ ಹೆಚ್ಚು ಪಾಲುದಾರರು ಭಾಗವಹಿಸಿದ್ದು, ಯೋಜನೆಯ ಬಗ್ಗೆ ಉದ್ಯಮ ವಲಯದಲ್ಲಿ ಇರುವ ಭಾರೀ ಆಸಕ್ತಿ ಮತ್ತು ವಿಶ್ವಾಸವನ್ನು ತೋರಿಸಿದೆ. ಆಯ್ದ ಪಾಲುದಾರರಿಗೆ ಮಾತ್ರ ಆಹ್ವಾನ ನೀಡಲಾಗಿದ್ದ ಈ ಕಾರ್ಯಕ್ರಮವು ಯೋಜನೆಯ ಮಾರುಕಟ್ಟೆ ಬಿಡುಗಡೆಗೆ ಮುನ್ನ ವಿಶೇಷ ಪೂರ್ವಾವಲೋಕನವಾಗಿಯೂ ಕಾರ್ಯನಿರ್ವಹಿಸಿತು.ಸಭೆಯ ಪ್ರಮುಖ ಉದ್ದೇಶ




ಚಾನೆಲ್ ಪಾಲುದಾರರೊಂದಿಗೆ ಸಂಬಂಧವನ್ನು ಮತ್ತಷ್ಟು ಬಲಪಡಿಸುವುದರ ಜೊತೆಗೆ ಯೋಜನೆಯ ದೃಷ್ಟಿಕೋನ, ವಿನ್ಯಾಸ, ಜೀವನಶೈಲಿ ಸೌಲಭ್ಯಗಳು ಹಾಗೂ ದೀರ್ಘಕಾಲೀನ ಹೂಡಿಕೆ ಸಾಧ್ಯತೆಗಳ ಬಗ್ಗೆ ಸಮಗ್ರ ಮಾಹಿತಿ ನೀಡುವುದಾಗಿತ್ತು. ಈಎಆರ್‌ಎ ತಂಡವು ಯೋಜನೆಯ ವಿನ್ಯಾಸ ತತ್ವ, ಕಡಿಮೆ ಸಾಂದ್ರತೆಯ ಯೋಜನೆ, ಮೂಲಸೌಕರ್ಯದ ಸಿದ್ಧತೆ ಹಾಗೂ ಕಾನೂನು ಸ್ಪಷ್ಟತೆ ಸೇರಿದಂತೆ ಹಲವು ಪ್ರಮುಖ ಅಂಶಗಳನ್ನು ವಿವರವಾಗಿ ಪರಿಚಯಿಸಿತು.

ಪಾಲುದಾರರಿಗೆ ಯೋಜನೆಯ ವಿಶೇಷತೆಗಳನ್ನು ಗ್ರಾಹಕರಿಗೆ ಪರಿಣಾಮಕಾರಿಯಾಗಿ ತಲುಪಿಸಲು ಅಗತ್ಯವಾದ ಜ್ಞಾನ ಹಾಗೂ ಸಾಧನಗಳನ್ನು ಒದಗಿಸುವತ್ತವೂ ಈ ಸಭೆ ಗಮನಹರಿಸಿತು. ಸಂವಾದಾತ್ಮಕ ಚರ್ಚೆಗಳು ಮತ್ತು ಸ್ಥಳ ಪರಿಶೀಲನೆಯ ಮೂಲಕ ಭಾಗವಹಿಸಿದವರಿಗೆ ಯೋಜನೆಯ ವ್ಯಾಪ್ತಿ, ಸ್ಥಳದ ತಂತ್ರಾತ್ಮಕ ಮಹತ್ವ ಹಾಗೂ ಯೋಜಿತ ಮೂಲಸೌಕರ್ಯದ ಕುರಿತು ನೇರ ಅನುಭವ ದೊರೆಯಿತು.

ಈಎಆರ್‌ಎ ಪ್ರತಿನಿಧಿ ಇ. ಲಕ್ಷ್ಮೀನಾರಾಯಣ ರೆಡ್ಡಿ ಮಾತನಾಡಿ, ಚಾನೆಲ್ ಪಾಲುದಾರರು ಸಂಸ್ಥೆಯ ಬೆಳವಣಿಗೆಯ ಪ್ರಮುಖ ಭಾಗವಾಗಿದ್ದು, ಈ ಸಭೆ ಸಹಕಾರವನ್ನು ಇನ್ನಷ್ಟು ಗಟ್ಟಿಗೊಳಿಸುವ ಉದ್ದೇಶದಿಂದ ಆಯೋಜಿಸಲಾಗಿದೆ ಎಂದು ಹೇಳಿದರು. 'ಅಮಿಡ್‌ಸ್ಟ್ ನೇಚರ್' ಯೋಜನೆ ಪ್ರಕೃತಿ ಮತ್ತು ಆಧುನಿಕ ಜೀವನಶೈಲಿಯ ಸಮತೋಲನವನ್ನು ಒದಗಿಸುವ ದೃಷ್ಟಿಕೋನದಲ್ಲಿ ರೂಪುಗೊಂಡಿದ್ದು, ತಕ್ಷಣ ನಿರ್ಮಾಣ ಆರಂಭಿಸಬಹುದಾದ ಸಿದ್ಧ ಪ್ಲಾಟ್‌ಗಳನ್ನು ಒಳಗೊಂಡಿದೆ ಎಂದು ಅವರು ತಿಳಿಸಿದರು. ಬಲವಾದ ಮೂಲಸೌಕರ್ಯ, ಕಾನೂನು ಸ್ಪಷ್ಟತೆ ಹಾಗೂ ಕಡಿಮೆ ಸಾಂದ್ರತೆಯ ವಿನ್ಯಾಸ ಈ ಯೋಜನೆಯ ಪ್ರಮುಖ ವೈಶಿಷ್ಟ್ಯಗಳಾಗಿವೆ ಎಂದು ಅವರು ಹೇಳಿದರು.

# ವಿಶ್ವಚೇತನ ಬಳಗದಿಂದ 161ನೇ ಕಾರ್ಯಕ್ರಮ ಯಶಸ್ವಿ

ಬೆಂಗಳೂರು

ರವೀಂದ್ರ ಕಲಾಕ್ಷೇತ್ರದಲ್ಲಿನಡೆದ ವಿಶ್ವ ಚೇತನ ಬಳಗ ವತಿಯಿಂದ ಕನ್ನಡ ಕಲಿಕಾಗಾನ ಕಲಾವಿದರ ವೇದಿಕೆಯ ಸಹಯೋಗದಲ್ಲಿ ಆಯೋಜಿಸಲಾದ 161ನೇ ಸಾಂಸ್ಕೃತಿಕ ಹಾಗೂ ಸಾಮಾಜಿಕ ಕಾರ್ಯಕ್ರಮವು ವಿಜೃಂಭಣೆಯಿಂದ ನೆರವೇರಿತು.

ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಸಾಧಕರಿಗೆ ಸನ್ಮಾನ ಸಮಾರಂಭವೂ ಇದೇ ಸಂದರ್ಭದಲ್ಲಿ ನಡೆಯಿತು.

ಪದ್ಮಭೂಷಣ ಡಾ.ರಾಜಕುಮಾರ್ ಹಾಗೂ ಕರ್ನಾಟಕ ರತ್ನ ಡಾ. ಪುನೀತ್ ರಾಜಕುಮಾರ್ ಸಂಸ್ಮರಣೆ ಪ್ರಯುಕ್ತ ವಿಶೇಷ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಕಾರ್ಯಕ್ರಮದ







ಉದ್ಘಾಟನೆಯನ್ನು ಭಾರತ ಸಾರಥಿ ಕನ್ನಡ ದಿನಪತ್ರಿಕೆ ಸಂಪಾದಕ, ಹಾಗೂ ನಟ,ನಿರ್ಮಾಪಕರಾದ ಗಂಡಸಿ ಸದಾನಂದಸ್ವಾಮಿ ಜ್ಯೋತಿ ಬೆಳಗಿಸುವ ಮೂಲಕ ಉದ್ಘಾಟಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಾಹಿತಿ ಹಾಗೂ ಸಂಘಟಕರಾದ ರಾಂ. ಕೆ.ಹನುಮಂತಯ್ಯ ವಹಿಸಿದ್ದರು.

ಪ್ರಾಸ್ತಾವಿಕ ನುಡಿಯನ್ನು ಕನ್ನಡ ಪರಿಚಾರಕರಾದ ಎಂ.ಶಿವಸ್ವಾಮಿ ಅವರು ಸಲ್ಲಿಸಿದರು.

ಮುಖ್ಯ ಅತಿಥಿಗಳಾಗಿ ಮೋಹನಕಾಂತ ರಂಗದಳದ ಪ್ರತಿನಿಧಿಗಳು, ಪಿ.ಎಸ್. ಸಾಲಿಮಠ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ಸಂಗೀತ, ನೃತ್ಯ, ಭರತನಾಟ್ಯ ಹಾಗೂ ಜನಪದ ಕಲಾ ಪ್ರದರ್ಶನಗಳು ಗಮನಸೆಳೆದವು. ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿದ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಕನ್ನಡ ಸಂಸ್ಕೃತಿ, ಕಲೆ ಹಾಗೂ ಸಾಮಾಜಿಕ ಏಕತೆಯನ್ನು ಉತ್ತೇಜಿಸುವ ಉದ್ದೇಶದಿಂದ ಈ ಕಾರ್ಯಕ್ರಮವನ್ನು ಯಶಸ್ವಿಯಾಗಿ ಆಯೋಜಿಸಲಾಗಿತ್ತು.

## 'ಜಾಗತಿಕ ನಾವೀನ್ಯತೆ ಸವಾಲು" ಚಿಂತನಾ ದಿನ

ಬೆಂಗಳೂರು

'ದಿ ಫ್ಯೂಚರ್ ಇಸ್ ಲೋಕಲ್' ಎಂಬ ವಿಷಯಾಧಾರಿತ ಎರಡು ದಿನಗಳ 'ಜಾಗತಿಕ ನಾವೀನ್ಯತೆ ಸವಾಲು" ಚಿಂತನಾ ದಿನ ಕಾರ್ಯಕ್ರಮವನ್ನು ಸಿಎಂಆರ್ ವಿಶ್ವವಿದ್ಯಾಲಯ ಯಶಸ್ವಿಯಾಗಿ ಆಯೋಜಿಸಿತು.

ನಗರದ ಬಾಗಲೂರಿನಲ್ಲಿರುವ ಲೇಕ್ ಸೈಡ್ ಕ್ಯಾಂಪಸ್ ನಲ್ಲಿ ದಿನಾಂಕ:–23.04.2026 ಮತ್ತು 24.04.2026 ರಂದು ಎರಡು ದಿನಗಳ ವರೆಗೆ ಆಯೋಜಿಸಿದ್ದ ವಿನ್ಯಾಸ ಚಿಂತನಾ ದಿನ ಕಾರ್ಯಕ್ರಮದಲ್ಲಿ ನಾವಿನ್ಯತೆ, ಸೃಜನಾತ್ಮಕ ಚಿಂತನೆಗಳೊಂದಿಗೆ ಯುವ ಸಮುದಾಯವನ್ನು ರೂಪಿಸುವ ನಿಟ್ಟಿನಲ್ಲಿ ವಿನ್ಯಾಸ ಚಿಂತನಾ ಕಾರ್ಯಕ್ರಮ ಯಶಸ್ವಿಯಾಯಿತು.



ಸಿಎಂಆರ್ ಕಾಸ್–2026: ವಿನ್ಯಾಸ ಚಿಂತನಾ ದಿನ (ಗ್ಲೋಬಲ್ ಓಪನ್ ಇನ್ನೋವೇಷನ್ ಚಾಲೆಂಜ್) ಕಾರ್ಯಕ್ರಮದಲ್ಲಿ 10 ದೇಶಗಳು ಮತ್ತು 127 ನಗರಗಳಾದ್ಯಂತ 120 ಸಂಸ್ಥೆಗಳಿಂದ 893 ಕ್ಕೂ ಹೆಚ್ಚು ತಂಡಗಳಿಂದ 3500 ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಡಾ.ಕೆ.ಸಿ.ರಾಮಮೂರ್ತಿ, (ಐಪಿಎಸ್ ನಿವೃತ್ತ), ಮಾಜಿ ರಾಜ್ಯಸಭಾ ಸದಸ್ಯರು, ಅಧ್ಯಕ್ಷರು, ಸಿಎಂಆರ್ ಸಮೂಹ ಶಿಕ್ಷಣ ಸಂಸ್ಥೆಗಳು ಮತ್ತು ಸಿಎಂಆರ್ ವಿಶ್ವವಿದ್ಯಾಲಯ "ವಿದ್ಯಾರ್ಥಿಗಳು ಜಾಗತಿಕ ಮಟ್ಟದಲ್ಲಿ ಪ್ರಸ್ತುತಪಡಿಸುತ್ತಿರುವ ನವೀನ ವಿಚಾರಗಳು ಮತ್ತು ತಾಂತ್ರಿಕ ಆವಿಷ್ಕಾರಗಳು ಹೆಮ್ಮೆ ತರುವಂತಹವು.

ಕೌಶಲ್ಯಗಳೇ ಯಶಸ್ಸಿನ ಗುಟ್ಟು ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳು ಸಮಾಜದ ವಿವಿಧ ಸಮಸ್ಯೆಗಳಿಗೆ ಇಂದು ವಿಭಿನ್ನ ಪರಿಹಾರಗಳನ್ನು ಹಾಗೂ ನವೀನ ಮಾದರಿಗಳನ್ನು ಕಂಡುಕೊಳ್ಳುತ್ತಿದ್ದಾರೆ.

# ಸೇಲ್ಸ್‌ಫೋರ್ಸ್‌ನೊಂದಿಗೆ ಸಹಯೋಗ ಘೋಷಣೆ

ಬೆಂಗಳೂರು

ವಿಶ್ವದ ಪ್ರಮುಖ ಗ್ರಾಹಕ ಸಂಬಂಧ ನಿರ್ವಹಣಾ ತಂತ್ರಜ್ಞಾನ ಸಂಸ್ಥೆಯಾದ ಸೇಲ್ಸ್‌ಫೋರ್ಸ್ ಮತ್ತು ಭಾರತದ ಪ್ರಮುಖ ಐಸ್ಕ್ರೀಮ್ ಬ್ರಾಂಡ್ಗಳಲ್ಲಿ ಒಂದಾದ ಹಾಗೂ ದೇಶದ ಅತಿದೊಡ್ಡ ಕ್ಯಾಂಡಿ ಮತ್ತು ಕೋನ್ ತಯಾರಕರಲ್ಲಿ ಒಂದಾದ ಡೈರಿ ಡೇ ಇಂದು ಮಹತ್ವದ ಸಹಭಾಗಿತ್ವವನ್ನು ಘೋಷಿಸಿವೆ. ಈ ಸಹಕಾರದ ಮೂಲಕ ಡೈರಿ ಡೇ ತನ್ನ ಮಾರಾಟ ಪ್ರಕ್ರಿಯೆಗಳನ್ನು ಸಂಪೂರ್ಣವಾಗಿ ಡಿಜಿಟಲೀಕರಣಗೊಳಿಸಿ ಮಾರುಕಟ್ಟೆಯಲ್ಲಿ ತನ್ನ ಉಪಸ್ಥಿತಿಯನ್ನು ಇನ್ನಷ್ಟು ಬಲಪಡಿಸಲು ಉದ್ದೇಶಿಸಿದೆ.

ಡೈರಿ ಡೇ ಸಂಸ್ಥೆಯು ಸೇಲ್ಸ್‌ಫೋರ್ಸ್‌ನ ಮುಂದುವರಿದ ಮಾರಾಟ ಮತ್ತು ಸೇವಾ ತಂತ್ರಜ್ಞಾನಗಳನ್ನು ಅಳವಡಿಸಿಕೊಂಡಿದೆ. ಈ ತಂತ್ರಜ್ಞಾನಗಳು ಎಲ್ಲಾ ಮಾರಾಟ ಕಾರ್ಯಗಳನ್ನು ಒಂದೇ ಡಿಜಿಟಲ್ ವೇದಿಕೆಯಡಿ ತರಲಿದ್ದು, ಮಾರುಕಟ್ಟೆಯ ನೈಜ ಮಾಹಿತಿ, ದಾಸ್ತಾನು ನಿರ್ವಹಣೆ ಮತ್ತು ಮಾರಾಟ ಸಿಬ್ಬಂದಿಯ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಸಹಾಯ ಮಾಡಲಿವೆ. ಹವಾಮಾನ ಆಧಾರಿತ ಬೇಡಿಕೆ ಬದಲಾವಣೆಗಳು ಹೆಚ್ಚಿರುವ ಐಸ್ಕ್ರೀಮ್ ಉದ್ಯಮಕ್ಕೆ ಈ ರೀತಿಯ ತಂತ್ರಜ್ಞಾನ ಅತ್ಯಂತ ಉಪಯುಕ್ತವಾಗಿದೆ ಎಂದು ಕಂಪನಿ ತಿಳಿಸಿದೆ.

ಕಳೆದ ಇಪ್ಪತ್ತೂರು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಡೈರಿ ಡೇ ಸಂಸ್ಥೆಯು ಇದೀಗ ತನ್ನ ವ್ಯಾಪಾರವನ್ನು ಟೈರ್ ಎರಡು ಮತ್ತು ಟೈರ್ ಮೂರು ನಗರಗಳತ್ತ ವಿಸ್ತರಿಸುತ್ತಿದೆ. ಮುಂದಿನ ಮೂರು ವರ್ಷಗಳಲ್ಲಿ ತನ್ನ ಚಿಲ್ಲರೆ ಮಳಿಗೆಗಳ ಸಂಖ್ಯೆಯನ್ನು ದ್ವಿಗುಣಗೊಳಿಸುವ ಮೂಲಕ ಹತ್ತು ಸಾವಿರ ಕೋಟಿ ರೂಪಾಯಿಗಳ ಆದಾಯ ಗುರಿಯನ್ನು ತಲುಪಲು ಯೋಜನೆ ರೂಪಿಸಿದೆ. ಈ ಬೆಳವಣಿಗೆ ಸಾಧಿಸಲು ಮಾರುಕಟ್ಟೆಯ ನಿಖರ ಮಾಹಿತಿ ಮತ್ತು ವೇಗದ ಕಾರ್ಯಾಚರಣೆ ಅಗತ್ಯವಾಗಿದ್ದು, ಹೊಸ ಡಿಜಿಟಲ್ ವ್ಯವಸ್ಥೆ ಅದಕ್ಕೆ ಸಹಕಾರಿಯಾಗಲಿದೆ.

# ಟಿಸಿಎಸ್ ವರ್ಲ್ಡ್ 10ಕೆಗೆ ಚಾಲನೆ



ಬೆಂಗಳೂರು

ಟಿಸಿಎಸ್ ವರ್ಲ್ಡ್ 10 ಕೆ ಬೆಂಗಳೂರಿನ 18ನೇ ಆವೃತ್ತಿಗೆ ಭಾನುವಾರ ಭಾರತೀಯ ಗಣ್ಯ ಕ್ರೀಡಾಪಟುಗಳ ಬಲವಾದ ತಂಡವು ಆರಂಭಿಕ ಸಾಲಿಗೆ ಸೇರಲಿದ್ದಾರೆ. ಒಟ್ಟು 210,000 ಅಮೆರಿಕನ್ ಡಾಲರ್ ಬಹುಮಾನದೊಂದಿಗೆ, ಭಾರತೀಯ ಪುರುಷರ ವಿಜೇತರು 3,00,000 ರೂಪಾಯಿಗಳನ್ನು ಪಡೆಯಲಿದ್ದಾರೆ, ಆದರೆ ಭಾರತೀಯ ಮಹಿಳಾ ವಿಜೇತರು 2,75,000 ರೂಪಾಯಿಗಳನ್ನು ಪಡೆಯಲಿದ್ದಾರೆ. ಹೆಚ್ಚುವರಿಯಾಗಿ, ವಿಶ್ವ ಅಥ್ಲೆಟಿಕ್ಸ್ ಗೋಲ್ಡ್ ಲೇಬಲ್ ರೇಸ್‌ನಲ್ಲಿ ಅಸ್ತಿತ್ವದಲ್ಲಿರುವ ಕೂಟದ ದಾಖಲೆಗಳನ್ನು ಮುರಿಯುವ ಕ್ರೀಡಾಪಟುಗಳಿಗೆ 1,00,000 ರೂ. ಬೋನಸ್ ನೀಡಲಾಗುತ್ತದೆ.

ಹಾಲಿ ಚಾಂಪಿಯನ್ ಅಭಿಷೇಕ್ ಪಾಲ್ ಕಳೆದ ವರ್ಷ 29:12 ನಿಮಿಷಗಳಲ್ಲಿ ಗುರಿ ತಲುಪಿ ಭಾರತೀಯ ಪುರುಷರ ಕೂಟದ ದಾಖಲೆಯನ್ನು ಸ್ಥಾಪಿಸಿದರು ಮತ್ತು ಆ ಪ್ರದರ್ಶನವನ್ನು ಹೆಚ್ಚಿಸಲು ಪ್ರಯತ್ನಿಸುತ್ತಾರೆ.

"ಬೆಂಗಳೂರು ನನಗೆ ಯಾವಾಗಲೂ ವಿಶೇಷವಾಗಿದೆ. ನಾನು ಇಲ್ಲಿ ಅನೇಕ 10 ಕಿ.ಮೀ ಓಡಿದ್ದೇನೆ ಮತ್ತು ಕಳೆದ ವರ್ಷ ನಾನು ಕೋರ್ಸ್ (ಕೂಟ) ದಾಖಲೆಯನ್ನು ಮುರಿಯಲು ಸಾಧ್ಯವಾಯಿತು, ಇದು ನನಗೆ ಮರಳಿ ಬರುವ ವಿಶ್ವಾಸವನ್ನು ನೀಡುತ್ತದೆ. ಈ ಓಟವು ಋತುವಿನ ಆರಂಭದಲ್ಲಿ ನಾನು ಎಲ್ಲಿ ನಿಲ್ಲುತ್ತೇನೆ ಎಂಬುದನ್ನು ನಿರ್ಣಯಿಸಲು ಉತ್ತಮ ಮಾರ್ಗವಾಗಿದೆ. ಇದು ನಿಮ್ಮ ವೇಗ, ಸಹಿಷ್ಣುತೆ ಮತ್ತು ಒಟ್ಟಾರೆ ಸ್ಥಿತಿಯ ಬಗ್ಗೆ ನಿಮಗೆ ಹೇಳುತ್ತದೆ ಮತ್ತು ವರ್ಷದ ಉಳಿದ ಭಾಗವನ್ನು ರೂಪಿಸಲು ಸಹಾಯ ಮಾಡುತ್ತದೆ. ಆ ಲಯದಲ್ಲಿ ನಿರ್ಮಿಸಲು ಮತ್ತು ಮತ್ತೊಂದು ಬಲವಾದ ಪ್ರದರ್ಶನವನ್ನು ನೀಡಲು ನಾನು ಆಶಿಸುತ್ತಿದ್ದೇನೆ, "ಎಂದು ಅಭಿಷೇಕ್ ಹೇಳಿದರು.

ಅವರೊಂದಿಗೆ ಡಾ. ಕಾರ್ತಿಕ್ ಕರ್ಕೇರಾ ಕೂಡ ಸೇರಿದ್ದಾರೆ, ಅವರು ರಾಷ್ಟ್ರೀಯ ಮ್ಯಾರಥಾನ್ ಚಾಂಪಿಯನ್‌ಶಿಪ್ ಮತ್ತು ಟಾಟಾ ಮುಂಬೈ ಮ್ಯಾರಥಾನ್‌ನ ಚೊಚ್ಚಲ ಗೆಲುವುಗಳನ್ನು ಒಳಗೊಂಡಂತೆ ಒಂದು ಪ್ರಗತಿಪರ ಹಾದಿಯ ಹಿನ್ನೆಲೆಯಲ್ಲಿ ಓಟಕ್ಕೆ ಬರುತ್ತಿದ್ದಾರೆ.

"ನಾನು ಬೆಂಗಳೂರಿಗೆ ಉತ್ತಮ ವೇಗದೊಂದಿಗೆ ಬರುತ್ತಿದ್ದೇನೆ, ಆದರೆ ಈ ಹಂತವು ಏಷ್ಯನ್ ಕ್ರೀಡಾಕೂಟದಂತಹ ದೊಡ್ಡ ಗುರಿಗಳತ್ತ ಸಾಗುವ ಬಗ್ಗೆ. 10 ಕಿ.ಮೀ ಓಟವು ನಿರ್ಣಾಯಕವಾಗಿದೆ. ಇದು ಸಹಿಷ್ಣುತೆಯನ್ನು ಕಾಯ್ದುಕೊಳ್ಳುವಾಗ ವೇಗವನ್ನು ಹೆಚ್ಚಿಸುತ್ತದೆ, ಎರಡೂ ಮ್ಯಾರಥಾನ್‌ಗೆ ಅತ್ಯಗತ್ಯ.

ಈ ರೀತಿಯ ಕೂಟಗಳು ಭಾರತೀಯ ಕ್ರೀಡಾಪಟುಗಳಿಗೆ ಅಂತಾರಾಷ್ಟ್ರೀಯ ಸ್ಪರ್ಧೆಗೆ ಒಡ್ಡಿಕೊಳ್ಳುವುದನ್ನು ನೀಡುತ್ತದೆ,

ಮತ್ತು ಆ ಅನುಭವವು ಅಮೂಲ್ಯವಾಗಿದೆ. ನಾವು ಅತ್ಯುನ್ನತ ಮಟ್ಟದಲ್ಲಿ ಸ್ಪರ್ಧಿಸಬಹುದು ಎಂದು ನಂಬುವಂತೆ ಇದು ನಮ್ಮನ್ನು ತಳ್ಳುತ್ತದೆ. ನನ್ನ ಸ್ಥಾನವನ್ನು ಅಳೆಯಲು ಇಲ್ಲಿ ವೇಗದ ಓಟವು ಮುಖ್ಯವಾಗಿರುತ್ತದೆ, " ಎಂದು ಅವರು ಹೇಳಿದರು.


# 'ಕೈಗಾರಿಕೀಕರಣದ ಹೆಸರಲ್ಲಿ ಅನ್ನದಾತನ ಹೊಟ್ಟೆಗೆ ಹೊಡೆಯದಿರಿ'

ಚಿಕ್ಕಬಳ್ಳಾಪುರ

"ರಕ್ತ ಕೊಟ್ಟೇವು, ಕೃಷಿ ಭೂಮಿ ಕೊಡುವುದಿಲ್ಲ" ಎಂಬ ಘೋಷವಾಕ್ಯದೊಂದಿಗೆ ಕೆಐಎಡಿಬಿ ಭೂಸ್ವಾಧೀನ ಪ್ರಕ್ರಿಯೆ ವಿರೋಧಿಸಿ ರೈತರು ನಡೆಸುತ್ತಿರುವ ಅಹೋರಾತ್ರಿ ಧರಣಿ ಸತ್ಯಾಗ್ರಹವು ಶನಿವಾರ (ಏಪ್ರಿಲ್ 4) 21ನೇ ದಿನಕ್ಕೆ ಕಾಲಿಟ್ಟಿದೆ. ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ 13 ಹಳ್ಳಿಗಳ ರೈತರು ಜಿಲ್ಲಾಧಿಕಾರಿ ಕಚೇರಿ ಎದುರು ಬೀಡುಬಿಟ್ಟಿದ್ದು, ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ.

ಕೈಗಾರಿಕೀಕರಣಕ್ಕಾಗಿ 2,332 ಎಕರೆ ಫಲವತ್ತಾದ ಕೃಷಿ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಹೊರಡಿಸಿರುವ ಅಂತಿಮ ಅಧಿಸೂಚನೆಯನ್ನು ಕೂಡಲೇ ವಾಪಸ್ ಪಡೆಯಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

ರೈತ ಸಂಘದ ರಾಜ್ಯ ಕಾರ್ಯಾಧ್ಯಕ್ಷ ಭಕ್ತರಹಳ್ಳಿ ಬೈರೇಗೌಡ ಮಾತನಾಡಿ, "ರೈತರು ಜಮೀನು ನೀಡುವುದಿಲ್ಲ ಎಂದು ಮುಚ್ಚಳಿಕೆ ಬರೆದುಕೊಟ್ಟಿದ್ದರೂ ಸರ್ಕಾರ ಬಲವಂತವಾಗಿ ಭೂಮಿ ಕಸಿದುಕೊಳ್ಳಲು ಮುಂದಾಗಿರುವುದು ಸರಿಯಲ್ಲ. ನಮ್ಮ ಸತತ ಹೋರಾಟದಿಂದಾಗಿ ಈಗಾಗಲೇ 471 ಎಕರೆ ನೀರಾವರಿ ಭೂಮಿಯನ್ನು ಕೈಬಿಡಲಾಗಿದೆ. ಅದೇ ರೀತಿ ಉಳಿದ ಭೂಮಿಯನ್ನೂ ಸ್ವಾಧೀನ ಪ್ರಕ್ರಿಯೆಯಿಂದ ಮುಕ್ತಗೊಳಿಸಬೇಕು," ಎಂದು ಗುಡುಗಿದರು.



"ಶೇ. 75ರಷ್ಟು ರೈತರು ಭೂಮಿ ನೀಡಲು ಸಿದ್ಧರಿಲ್ಲದಿದ್ದರೂ ಉತ್ತರ ಭಾರತದ ಕೈಗಾರಿಕೆಗಳನ್ನು ತರಲು ಸರ್ಕಾರ ಹಠಕ್ಕೆ ಬಿದ್ದಿದೆ. ಚಿನ್ನದಂತಹ ಭೂಮಿಯನ್ನು ಕಸಿದುಕೊಂಡು ನಮ್ಮನ್ನು ನಿರ್ಗತಿಕರನ್ನಾಗಿ ಮಾಡಿದರೆ ಸರ್ಕಾರಕ್ಕೆ ಜನರೇ ತಕ್ಕ ಪಾಠ ಕಲಿಸಲಿದ್ದಾರೆ," ಎಂದು ಎಚ್ಚರಿಸಿದರು.

ಈ ಹೋರಾಟಕ್ಕೆ ರೈತ ಸಂಘದ ಜೊತೆಗೆ ದಲಿತ ಸಂಘರ್ಷ ಸಮಿತಿ (ದಸಂಸ), ಕನ್ನಡಪರ ಸಂಘಟನೆಗಳು, ಮಾನವ ಹಕ್ಕುಗಳ ಸಮಿತಿ ಹಾಗೂ ವಿವಿಧ ಪ್ರಗತಿಪರ ಸಂಘಟನೆಗಳು ಕೈಜೋಡಿಸಿವೆ. ಕೃಷಿ ಭೂಮಿ ನಮ್ಮ ಹಕ್ಕು ಎಂದು ಘೋಷಣೆ ಕೂಗಿದ ಪ್ರತಿಭಟನಾಕಾರರು, ಸರ್ಕಾರ ರೈತರನ್ನು ವಿಭಜಿಸುವ ತಂತ್ರ ಬಿಟ್ಟು ಕೂಡಲೇ ಅಧಿಸೂಚನೆ ರದ್ದುಗೊಳಿಸಬೇಕು ಎಂದು ಒತ್ತಾಯಿಸಿದರು.

ಜಂಗಮಕೋಟೆ ಪ್ರದೇಶದಲ್ಲಿಯೇ ಸರ್ಕಾರಕ್ಕೆ ಭೂಮಿ ಬೇಕೆ? ತಾಲೂಕಿನಲ್ಲಿ ಬೇರೆಲ್ಲೂ ಜಾಗವಿಲ್ಲವೇ? ನಮ್ಮ ಬದುಕಿನ ಆಧಾರವಾಗಿರುವ ಭೂಮಿಯನ್ನು ರಕ್ಷಿಸಿಕೊಳ್ಳಲು ನಾವು ಯಾವುದೇ ತ್ಯಾಗಕ್ಕೂ ಸಿದ್ಧ ಎಂದು ಹೋರಾಟಗಾರರ ಒಮ್ಮತದ ಧ್ವನಿ. ರೈತ ಸಂಘದ ಜಿಲ್ಲಾಧ್ಯಕ್ಷ ಎಚ್.ಪಿ. ರಾಮನಾಥರೆಡ್ಡಿ, ಮಾನವ ಹಕ್ಕುಗಳ ಸಮಿತಿ ಅಧ್ಯಕ್ಷ ಸಿ.ಎಂ. ಬೈರೇಗೌಡ, ದಸಂಸ ಮುಖಂಡ ಕೆ.ಸಿ. ರಾಜಾಕಾಂತ್, ಪರಿಸರವಾದಿ ಚೌಡಪ್ಪ, ಕರವೇ ರಾಮೇಗೌಡ ಹಾಗೂ ಮಂಜಮ್ಮ, ಮೀನಾಕ್ಷಮ್ಮ ಸೇರಿದಂತೆ ನೂರಾರು ರೈತರು ಹಾಗೂ ಮಹಿಳಾ ಹೋರಾಟಗಾರ್ತಿಯರು ಭಾಗವಹಿಸಿದ್ದರು.

# ಹೆಬ್ಬಾಳದಲ್ಲಿ ನೀರಿನ ದಾಹ ನೀಗಿಸಲು ಟ್ಯಾಂಕರ್ ಪೂರೈಕೆ: ಸಚಿವ ಬೈರತಿ ಸುರೇಶ್

ಬೆಂಗಳೂರು

ಹೆಬ್ಬಾಳ ವಿಧಾನಸಭಾ ಕ್ಷೇತ್ರದ ಕೆಲವು ಬಡಾವಣೆಗಳಲ್ಲಿ ಉಂಟಾಗಿರುವ ಕುಡಿಯುವ ನೀರಿನ ಸಮಸ್ಯೆಯನ್ನು ಪರಿಹರಿಸಲು ಟ್ಯಾಂಕರ್ ಮೂಲಕ ಉಚಿತ ಕಾವೇರಿ ನೀರು ಪೂರೈಕೆಗೆ ನಗರಾಭಿವೃದ್ಧಿ ಸಚಿವ ಹಾಗೂ ಕ್ಷೇತ್ರದ ಶಾಸಕ ಬೈರತಿ ಸುರೇಶ್ ಶನಿವಾರ ಚಾಲನೆ ನೀಡಿದರು.

ಇದೇ ಸಂದರ್ಭದಲ್ಲಿ ಆರ್.ಟಿ. ನಗರ ಪೊಲೀಸ್ ಠಾಣೆಯ ಹಿಂಭಾಗದ ಜನವಸತಿ ಪ್ರದೇಶಗಳಲ್ಲಿ ನೂತನ ಒಳಚರಂಡಿ ಪೈಪ್‌ಲೈನ್ ಅಳವಡಿಸುವ ಕಾಮಗಾರಿಗೂ ಸಚಿವರು ಭೂಮಿ ಪೂಜೆ ನೆರವೇರಿಸಿದರು.

ನಂತರ ಮಾತನಾಡಿದ ಸಚಿವರು, "ಕಳೆದ ಬೇಸಿಗೆಗೆ ಹೋಲಿಸಿದರೆ ಈ ಬಾರಿ ಕ್ಷೇತ್ರದಲ್ಲಿ ನೀರಿನ ಸಮಸ್ಯೆ ತೀವ್ರವಾಗಿಲ್ಲ. ಆದರೂ ಚಾಮುಂಡಿನಗರ ಹಾಗೂ ಕೌಸಲ್ಯನಗರ ಸೇರಿದಂತೆ ಕೆಲವೇ ಕೆಲವು ಬಡಾವಣೆಗಳಲ್ಲಿ ಕುಡಿಯುವ ನೀರಿನ ಕೊರತೆ ಕಂಡುಬಂದಿದೆ. ಈ ಪ್ರದೇಶಗಳ ಜನರಿಗೆ ಅನುಕೂಲವಾಗುವಂತೆ ಉಚಿತವಾಗಿ ಟ್ಯಾಂಕರ್ ನೀರು ಒದಗಿಸಲಾಗುತ್ತಿದೆ," ಎಂದು ತಿಳಿಸಿದರು.

ನೀರಿನ ಪೂರೈಕೆಗಾಗಿ ಸದ್ಯಕ್ಕೆ ಬೆಂಗಳೂರು ಜಲಮಂಡಳಿಯ 5 ಹಾಗೂ ಖಾಸಗಿ ಮೂಲದ 6 ಟ್ಯಾಂಕರ್‌ಗಳನ್ನು ಸನ್ನದ್ಧ ಸ್ಥಿತಿಯಲ್ಲಿಡಲಾಗಿದೆ. ನೀರಿನ ಕೊರತೆ ಇರುವ ಪ್ರದೇಶದ ಎಂಜಿನಿಯರ್‌ಗಳಿಗೆ ಮಾಹಿತಿ ನೀಡಿದ ತಕ್ಷಣವೇ ಟ್ಯಾಂಕರ್ ಕಳುಹಿಸಲು ವ್ಯವಸ್ಥೆ ಮಾಡಲಾಗಿದೆ. ಕ್ಷೇತ್ರದ ಯಾವುದೇ ಮೂಲೆಯಲ್ಲಿ ನೀರಿನ ಸಮಸ್ಯೆ ಉಂಟಾಗದಂತೆ ಎಚ್ಚರವಹಿಸಬೇಕು ಎಂದು ಅಧಿಕಾರಿಗಳಿಗೆ ಸಚಿವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜನರು ಅತ್ಯಮೂಲ್ಯವಾದ ಕುಡಿಯುವ ನೀರನ್ನು ಪೋಲು ಮಾಡದೆ ಸದ್ಬಳಕೆ ಮಾಡಿಕೊಳ್ಳಬೇಕು. ಅಗತ್ಯ ಬಿದ್ದರೆ ಇನ್ನು ಹೆಚ್ಚಿನ ಬಡಾವಣೆಗಳಿಗೂ ಟ್ಯಾಂಕರ್ ಸೌಲಭ್ಯ ವಿಸ್ತರಿಸಲಾಗುವುದು ಎಂದು ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಹೇಳಿದರು.

ಕಾಮಗಾರಿ ವೀಕ್ಷಣೆ ಹಾಗೂ ಚಾಲನೆ ಕಾರ್ಯಕ್ರಮದಲ್ಲಿ ಸ್ಥಳೀಯ ಮುಖಂಡರು ಮತ್ತು ಜಲಮಂಡಳಿ ಅಧಿಕಾರಿಗಳು ಉಪಸ್ಥಿತರಿದ್ದರು.




# ವಸತಿ ಸಹಿತ ಕೌಶಲಾಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಹಾಸನ

ಕೌಶಲ್ಯ ಅಭಿವೃದ್ಧಿ ಸಂಸ್ಥೆ ಮತ್ತು ಭಾರತ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ ರವರು ಕೇರಳ ರಾಜ್ಯದ ಕೊಚ್ಚಿಯ ಅಂಗಮಾಲಿ, ಎರ್ನಾಕುಳಂನಲ್ಲಿ ಇರುವ ಎಸ್.ಡಿ.ಐ ಕೇಂದ್ರದಲ್ಲಿ ಆರು ತಿಂಗಳ ಸಂಪೂರ್ಣ ವಸತಿ ಸಹಿತ ಕೌಶಲಾಭಿವೃದ್ಧಿ ತರಬೇತಿ ಕಾರ್ಯಕ್ರಮಗಳನ್ನು ನಡೆಸುತ್ತಿದ್ದಾರೆ.

ಈ ಕಾರ್ಯಕ್ರಮಗಳನ್ನು Nettur Techinicl Trining Foundation(NTTF) ವತಿಯಿಂದ ಅನುಷ್ಟಾನಗೊಳಿಸಲಾಗುತ್ತಿದ್ದು ಅರ್ಜಿಗಳನ್ನು ಸ್ವೀಕರಿಸುವ ಸಂಬಂಧ ಅಗತ್ಯ ದಾಖಲಾತಿಗಳನ್ನು ಏ.4 ರ ಸಂಜೆ 5 ಘಂಟೆಯೊಳಗೆ ಅರ್ಜಿಗಳನ್ನು ಈ ಲಿಂಕ್ ಗೆ ಸಲ್ಲಿಸುವುದು ಕೋರ್ಸ್ ಲಿಂಕ್ https:www.sdskochi.com/latest-news/ ಮತ್ತು ಅಪ್ಲೀಕೆಷೇನ್ ಫಾರಂ ಲಿಂಕ್ https:www.dsapponline.com/sds/form/register.php ಮೂಲಕ ಅರ್ಜಿ ಸಲ್ಲಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

# 'ಕೊಟ್ಟ ಮಾತು ಉಳಿಸಿಕೊಂಡ ಕುಮಾರಣ್ಣ'



ರಾಯಚೂರು

"ಖಾಸಗಿಯವರ ಪಾಲಾಗುವ ಭೀತಿಯಲ್ಲಿದ್ದ ವಿಶಾಖಪಟ್ಟಣದ ರಾಷ್ಟ್ರೀಯ ಉಕ್ಕು ಕಾರ್ಖಾನೆಯನ್ನು ಉಳಿಸಿಕೊಟ್ಟ ಶ್ರೇಯಸ್ಸು ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರಿಗೆ ಸಲ್ಲುತ್ತದೆ," ಎಂದು ಆಂಧ್ರಪ್ರದೇಶದ ಐಟಿ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ ಸಚಿವ ನಾರಾ ಲೋಕೇಶ್ ಕೃತಜ್ಞತೆ ಸಲ್ಲಿಸಿದರು.

ರಾಯಚೂರಿನಲ್ಲಿ ಮಾತನಾಡಿದ ಅವರು, ವೈಜಾಗ್ ಸ್ಟೀಲ್ ಆಂಧ್ರದ ಜನರ ಭಾವನಾತ್ಮಕ ಸಂಬಂಧವಾಗಿದ್ದು, ಅದನ್ನು ಉಳಿಸಿಕೊಡುವ ಮೂಲಕ ಕುಮಾರಸ್ವಾಮಿ ಅವರು ಇಡೀ ರಾಜ್ಯದ ಜನರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ ಎಂದು ತಿಳಿಸಿದರು.

"ಆಂಧ್ರಪ್ರದೇಶದ ಹಿಂದಿನ ಸರ್ಕಾರದ ತಪ್ಪು ನೀತಿಗಳಿಂದಾಗಿ ವೈಜಾಗ್ ಸ್ಟೀಲ್ ಕಾರ್ಖಾನೆಯು ಮುಚ್ಚುವ ಅಥವಾ ಖಾಸಗೀಕರಣವಾಗುವ ಹಂತಕ್ಕೆ ತಲುಪಿತ್ತು. ಈ ಸಂದರ್ಭದಲ್ಲಿ ಕುಮಾರಸ್ವಾಮಿ ಅವರು ಕೇಂದ್ರ ಉಕ್ಕು ಸಚಿವರಾಗಿ ಜವಾಬ್ದಾರಿ ವಹಿಸಿಕೊಂಡಿದ್ದು ನಮಗೆ ವರದಾನವಾಯಿತು. ಅವರು ಅಧಿಕಾರ ವಹಿಸಿಕೊಂಡ ತಕ್ಷಣವೇ ಕಾರ್ಖಾನೆಯನ್ನು ಉಳಿಸುವ ಭರವಸೆ ನೀಡಿದ್ದರು. ಅದರಂತೆ ಇಂದು ಕಾರ್ಖಾನೆ ಸುಸ್ಥಿತಿಯಲ್ಲಿದ್ದು, ಲಾಭದ ಹಾದಿಯಲ್ಲಿ ಸಾಗುತ್ತಿದೆ," ಎಂದು ಲೋಕೇಶ್ ವಿವರಿಸಿದರು.

ವಿಶಾಖಪಟ್ಟಣದ ಸಂಸದ ಶ್ರೀಭರತ್ ಅವರ ಮೂಲಕ ಕುಮಾರಸ್ವಾಮಿ ಅವರೊಂದಿಗೆ ನಡೆಸಿದ ಸಂಭಾಷಣೆಯನ್ನು ಸ್ಮರಿಸಿದ ಲೋಕೇಶ್, "ನಾನು ದೂರವಾಣಿ ಮೂಲಕ ಕುಮಾರಸ್ವಾಮಿ ಅವರಿಗೆ ಕಾರ್ಖಾನೆ ಉಳಿಸಿಕೊಡಲು ಮನವಿ ಮಾಡಿದ್ದೆ. ಆಗ ಅವರು 'ಬ್ರದರ್, ನೀವು ನಿಶ್ಚಿಂತೆಯಿಂದ ಇರಿ. ಆ ವಿಷಯವನ್ನು ನನಗೆ ಬಿಡಿ' ಎಂದು ಧೈರ್ಯ ತುಂಬಿದ್ದರು. ಕೊಟ್ಟ ಮಾತಿನಂತೆ ಅವರು ಐತಿಹಾಸಿಕ ಕಾರ್ಖಾನೆಯನ್ನು ರಕ್ಷಿಸಿದ್ದಾರೆ. ಇದಕ್ಕಾಗಿ ಆಂಧ್ರದ ಜನರು ಸದಾ ಅವರಿಗೆ ಋಣಿಯಾಗಿರುತ್ತಾರೆ," ಎಂದು ಭಾವನಾತ್ಮಕವಾಗಿ ನುಡಿದರು.

# 'ಬಾದಾಮಿಗೆ ಕೈಕೊಟ್ಟು ಓಡಿ ಹೋದ ಸಿಎಂ'

ಬಾಗಲಕೋಟೆ



"ಮೈಸೂರಿನಲ್ಲಿ ಸೋತ ಬಳಿಕ ಬಾದಾಮಿ ಜನ ಆಶ್ರಯ ನೀಡಿದರು. ಆದರೆ ಈಗ ಬಾದಾಮಿಗೂ ಕೈಕೊಟ್ಟು ಸಿದ್ದರಾಮಯ್ಯ ಓಡಿ ಹೋಗಿದ್ದಾರೆ," ಎಂದು ವಿರೋಧಪಕ್ಷದ ನಾಯಕ ಆರ್. ಅಶೋಕ್ ಲೇವಡಿ ಮಾಡಿದರು.

ನಗರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. "ಬಾದಾಮಿಯಲ್ಲಿ ಹಾಲು ಕುಡಿದು, ಬಿರಿಯಾನಿ ತಿಂದು ಈಗ ಟಾಟಾ ಬಾಯ್ ಬಾಯ್ ಹೇಳಿ ಬಂದಿದ್ದಾರೆ. ಈಗ ಮತ್ತೆ ಚುನಾವಣಾ ಪ್ರಚಾರಕ್ಕೆ ಬಂದಿರುವ ಅವರು ಅಭಿವೃದ್ಧಿಯ ಮಳೆ ಸುರಿಸುತ್ತೇನೆ ಎನ್ನುತ್ತಿದ್ದಾರೆ. ಕಳೆದ ಮೂರು ವರ್ಷಗಳಿಂದ ನಿಮ್ಮದೇ ಶಾಸಕರಿದ್ದರೂ ಬಾಗಲಕೋಟೆಗೆ ಏನು ಅಭಿವೃದ್ಧಿ ಮಾಡಿದ್ದೀರಿ?" ಎಂದು ಪ್ರಶ್ನಿಸಿದರು.

"ಅಧಿಕಾರಕ್ಕೆ ಬಂದಾಗಿನಿಂದಲೂ ಸಿಎಂ ಪಟ್ಟಕ್ಕಾಗಿ ಗುದ್ದಾಟ ನಡೆಯುತ್ತಿದೆ. ವಾಲ್ಮೀಕಿ ಹಗರಣದಿಂದ ಹಿಡಿದು ಲಿಕ್ಕರ್ ಲಾಬಿಯವರೆಗೆ ಈ ಸರ್ಕಾರದಲ್ಲಿ ಸಾಲು ಸಾಲು ಹಗರಣಗಳು ನಡೆಯುತ್ತಿವೆ. ಸಚಿವರೊಬ್ಬರು ಕೋಟಿ ಕೋಟಿ ಹಣ ಲೂಟಿ ಮಾಡಿ ದೆಹಲಿಗೆ ಕಳುಹಿಸುತ್ತಿದ್ದಾರೆ. ರಾಜ್ಯದಲ್ಲಿ ಅಭಿವೃದ್ಧಿ ಸಂಪೂರ್ಣ ಕುಂಠಿತಗೊಂಡಿದ್ದು, ಹೊಸದಾಗಿ ಒಂದು ಡ್ಯಾಮ್ ಅಥವಾ ಮೆಡಿಕಲ್ ಕಾಲೇಜು ತರಲು ಈ ಸರ್ಕಾರಕ್ಕೆ ಸಾಧ್ಯವಾಗಿಲ್ಲ," ಎಂದು ಆರೋಪಿಸಿದರು.

ರಾಜ್ಯದ ಆರ್ಥಿಕ ಪರಿಸ್ಥಿತಿ ಬಗ್ಗೆ ಕಳವಳ ವ್ಯಕ್ತಪಡಿಸಿದ ಅಶೋಕ್, "ಔಷಧ ಖರೀದಿಸಲು ಹಣವಿಲ್ಲ, ಪಿಎಚ್‌ಸಿಗಳಲ್ಲಿ ವೈದ್ಯರಿಲ್ಲ. ಸಾಲ ಮಾಡಿ ತುಪ್ಪ ಕುಡಿಯುವ 'ಮಜವಾದಿ ರಾಮಯ್ಯ' ಅವರ ಆಡಳಿತದಿಂದ ರಾಜ್ಯ ಅಧೋಗತಿಗೆ ತಲುಪಿದೆ. ದಲಿತರ ಅಭಿವೃದ್ಧಿಗೆ ಮೀಸಲಿಟ್ಟಿದ್ದ 53 ಸಾವಿರ ಕೋಟಿ ಹಣವನ್ನು ಲೂಟಿ ಮಾಡಲಾಗಿದೆ. ತೆರಿಗೆದಾರರ ಹಣವನ್ನು ವಯನಾಡಿಗೆ ಕಳುಹಿಸಲಾಗುತ್ತಿದೆ," ಎಂದು ದೂರಿದರು.

ರಾಜ್ಯ ರಾಜಕೀಯದ ಮುಂದಿನ ಬೆಳವಣಿಗೆಗಳ ಬಗ್ಗೆ ಭವಿಷ್ಯ ನುಡಿದ ಅವರು, "ಮೇ 20ರ ನಂತರ ಈ ಸರ್ಕಾರದ ಕಥೆ ಏನಾಗಲಿದೆಯೋ ಗೊತ್ತಿಲ್ಲ. ಡಿ.ಕೆ. ಶಿವಕುಮಾರ್ ಅವರು ಸಿಎಂ ಸ್ಥಾನವನ್ನು ಕಿತ್ತುಕೊಳ್ಳಲು ಕಾಯುತ್ತಿದ್ದಾರೆ. ಸಿದ್ದರಾಮಯ್ಯ ಅವರಿಗೆ ತಮ್ಮ ಸ್ಥಾನವೇ ಗ್ಯಾರಂಟಿ ಇಲ್ಲದಿರುವಾಗ, ಅವರು ಮತ್ತೊಬ್ಬರನ್ನು ಸಿಎಂ ಮಾಡುತ್ತೇನೆ ಎಂದು ಹೇಳುವುದು ಹಾಸ್ಯಾಸ್ಪದ. ಡಾ. ಜಿ. ಪರಮೇಶ್ವರ್ ಅವರ ಭಾಗ್ಯದ ಬಾಗಿಲು ತೆರೆಯುವುದು ಕೂಡ ಸಂಶಯವೇ," ಎಂದು ವ್ಯಂಗ್ಯವಾಡಿದರು.

ಕ್ಷೇತ್ರದಲ್ಲಿ ಈ ಹಿಂದೆ ಚರಂತಿಮಠ ಅವರು ಮಾಡಿದ ಅಭಿವೃದ್ಧಿ ಕೆಲಸಗಳು ಜನರ ಮನಸ್ಸಿನಲ್ಲಿದ್ದು, ಈ ಬಾರಿ ಬಿಜೆಪಿ ಅಭ್ಯರ್ಥಿ ಗೆಲುವು ಸಾಧಿಸುವುದು ನಿಶ್ಚಿತ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

# ಇಂದು ವೀರಾಂಜನೇಯ ಸ್ವಾಮಿಗೆ ಮಹಾಭಿಷೇಕ

ಕೋಲಾರ

ತಾಲೂಕಿನ ವಕ್ಕಲೇರಿ ಹೋಬಳಿಯ ಹನುಮಂತನಗರದಲ್ಲಿ( ಬೆಟ್ಟಬೆಣಜೇನಹಳ್ಳಿ ಗೇಟ್) 47ನೇ ವರ್ಷದ ಶ್ರೀ ವೀರಾಂಜನೇಯಸ್ವಾಮಿ ಜಾತ್ರಾ ಮಹೋತ್ಸವದ ಅಂಗವಾಗಿ ಏ, 5ರ ಭಾನುವಾರ ಬೆಳಗ್ಗೆ 8 ರಿಂದ 12 ರವರೆಗೆ ಅಭಿಷೇಕ, ಪುಷ್ಪಾಲಂಕಾರ, ಮಹಾಮಂಗಳಾರತಿ, 1 ರಿಂದ 2 ಗಂಟೆಯವರೆಗೆ ಸುತ್ತಮುತ್ತಲಿನ ಗ್ರಾಮಸ್ಥರಿಂದ ಆರತಿ ದೀಪೋತ್ಸವ, 2 ಗಂಟೆಗೆ ಅನ್ನಸಂತರ್ಪಣೆ, 3 ಗಂಟೆಗೆ ಉಟ್ಲು ಪರಿಷೆ, ಸಂಜೆ 5 ರಿಂದ 8 ರವರೆಗೆ ಜಾನಪದ ಸಂಗೀತ ಕಾರ್ಯಕ್ರಮ, 8–30 ಗಂಟೆಗೆ ಭಜನೆ ಕಾರ್ಯಕ್ರಮ, ರಾತ್ರಿ 9 ಗಂಟೆಗೆ ರಾಜಾ ಸತ್ಯವ್ರತ ಅಥವಾ ಶನಿಪ್ರಭಾವ ಎಂಬ ಪೌರಾಣಿಕ ನಾಟಕವನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಸಿ.ಆರ್ ಯುವರಾಜ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಶಾಸಕ ಕೊತ್ತೂರು ಜಿ.ಮಂಜುನಾಥ್, ಎಂ.ಎಲ್.ಸಿ ಎಂ.ಎಲ್.ಅನಿಲ್‌ಕುಮಾರ್, ಡಿ.ಐ.ಜಿ.ಪಿ ದೇವರಾಜ ಡಿ, ಮುಖಂಡ ಸಿ.ಎಂ.ಆರ್ ಶ್ರೀನಾಥ್, ಕೋಮಲ್ ನಿರ್ದೇಶಕ ಡಿ.ನಾಗರಾಜಪ್ಪ, ವಕ್ಕಲೇರಿ ಸೊಸೈಟಿ ಅಧ್ಯಕ್ಷ ಫಾಲಾಕ್ಷಗೌಡ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮುರಳಿ ಭಾಗವಹಿಸುವರು.

# ಡಾ. ಬಾಬು ಜಗಜೀವನ್ ರಾಂ 119ನೇ ಜಯಂತಿ



ರಾಮನಗರ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ನಗರಸಭೆ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತಾಶ್ರಯದಲ್ಲಿ ಹಸಿರು ಕ್ರಾಂತಿಯ ಹರಿಕಾರ, ರಾಷ್ಟ್ರ ನಾಯಕ, ಭಾರತದ ಮಾಜಿ ಉಪ ಪ್ರಧಾನ ಮಂತ್ರಿಗಳಾದ ಡಾ. ಬಾಬು ಜಗಜೀವನ್ ರಾಂ ಅವರ 119ನೇ ಜಯಂತಿಯನ್ನು ಏ.5ರ ಭಾನುವಾರ ಆಯೋಜಿಸಲಾಗಿದೆ.

ಅಂದು ಬೆಳಿಗ್ಗೆ 9.30ಕ್ಕೆ ನಗರದ ಸರ್ಕಾರಿ ಪದವಿ ಪೂರ್ವ ಕಾಲೇಜು ಮೈದಾನದಿಂದ ಡಾ. ಬಿ. ಆರ್. ಅಂಬೇಡ್ಕರ್ ಭವನದವರೆಗೆ ಶ್ರೀ ಡಾ. ಬಾಬು ಜಗಜೀವನ್ ರಾಂ ರವರ ಭಾವಚಿತ್ರವನ್ನು ಬೆಳ್ಳಿ ರಥದಲ್ಲಿ ಮೆರವಣಿಗೆ ಮಾಡಲಾಗುವುದು. ನಂತರ ಬೆಳಿಗ್ಗೆ 11 ಗಂಟೆಗೆ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ವೇದಿಕೆ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ರಾಜ್ಯದ ಉಪ ಮುಖ್ಯಮಂತ್ರಿಗಳು, ಭಾರಿ ಮತ್ತು ಮಧ್ಯಮ ನೀರಾವರಿ, ಬೆಂಗಳೂರು ನಗರ ಅಭಿವೃದ್ಧಿ ಹಾಗೂ ಬೆಂಗಳೂರು ನಗರ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಕೆ. ಶಿವಕುಮಾರ್ ಹಾಗೂ ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ. ಎಚ್. ಸಿ. ಮಹದೇವಪ್ಪ ಅವರು ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸುವರು.

ಸಾರಿಗೆ, ಮುಜರಾಯಿ ಇಲಾಖೆ ಹಾಗೂ ಬೆಂಗಳೂರು ದಕ್ಷಿಣ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಎ. ಇಕ್ಬಾಲ್ ಹುಸೇನ್ ಅವರು ಅಧ್ಯಕ್ಷತೆ ವಹಿಸುವರು.

ಬೆಂಗಳೂರು ಗ್ರಾಮಾಂತರ ಲೋಕಸಭಾ ಕ್ಷೇತ್ರದ ಸಂಸದ ಡಾ. ಸಿ.ಎನ್. ಮಂಜುನಾಥ್, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದರಾದ ಡಾ. ಕೆ. ಸುಧಾಕರ್, ಕರ್ನಾಟಕ ರಾಜ್ಯ ರಸ್ತೆ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಮಾಗಡಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಎಚ್.ಸಿ. ಬಾಲಕೃಷ್ಣ, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದ ಶಾಸಕರಾದ ಸಿ.ಪಿ. ಯೋಗೇಶ್ವರ, ನೆಲಮಂಗಲ ವಿಧಾನಸಭಾ ಕ್ಷೇತ್ರದ ಶಾಸಕ ಎನ್. ಶ್ರೀನಿವಾಸ್, ವಿಧಾನ ಪರಿಷತ್ ಶಾಸಕ ಪುಟ್ಟಣ್ಣ, ಎಸ್. ರವಿ, ವಿಧಾನ ಪರಿಷತ್ ಸದಸ್ಯರಾದ ಸುಧಾಮ್ ದಾಸ್, ರಾಮೋಜಿ ಗೌಡ, ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಎಚ್.ಎಂ. ರೇವಣ್ಣ, ಬೆಂಗಳೂರು ದಕ್ಷಿಣ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಕೆ. ರಾಜು, ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ಅಧ್ಯಕ್ಷರಾದ ಗಂಗಾಧರ್, ಬಿ.ಎಂ.ಐ.ಸಿ.ಪಿ.ಎ ಅಧ್ಯಕ್ಷರಾದ ರಘುನಂದನ್ ರಾಮಣ್ಣ, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಎನ್. ನಟರಾಜು ಗಾಣಕಲ್, ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಚೇತನ್ ಕುಮಾರ್ ಎ.ಬಿ. ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ವಕೀಲರು ಹಾಗೂ ಸಾಮಾಜಿಕ ನ್ಯಾಯ ಚಳುವಳಿಗಾರರಾದ ಹನುಮೇಶ್ ಗುಂಡೂರು ಅವರು ಉಪನ್ಯಾಸ ನೀಡುವರು.

# ಕೋಲಾರದಲ್ಲಿ ಬಾಬುಜಿ ಪ್ರತಿಮೆ ನಿರ್ಮಾಣಕ್ಕೆ ಹೋರಾಟ ಸಮಿತಿ ಪಟ್ಟು

ಕೋಲಾರ

ಹಸಿರು ಕ್ರಾಂತಿಯ ಹರಿಕಾರ ಭಾರತದ ಮಾಜಿ ಉಪ ಪ್ರಧಾನಮಂತ್ರಿ ಡಾ. ಜಗಜೀವನ ರಾಮ್ ರವರ ಪ್ರತಿಮೆ ನಿರ್ಮಾಣಕ್ಕಾಗಿ ಗುದ್ದಲಿ ಪೂಜೆ ನೆರವೇರಿಸುವ ಮೂಲಕ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಲು ಜಿಲ್ಲಾಡಳಿತ ಮುಂದಾಗಬೇಕೆಂದು ಕರ್ನಾಟಕ ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ವತಿಯಿಂದ ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.



ಕರ್ನಾಟಕ ಮಾದಿಗ ದಂಡೋರ ರಾಜ್ಯ ಮಾಜಿ ಉಪಾಧ್ಯಕ್ಷ ಸಾಹುಕಾರ್ ಶಂಕರಪ್ಪ ಮಾತನಾಡಿ, ದೇಶದ ದೀನ ದಲಿತರ ಉದ್ದಾರಕ್ಕಾಗಿ ಶ್ರಮಿಸಿದ, ಆಹಾರ ಭದ್ರತೆ ಒದಗಿಸಿದ ಮಾಜಿ ಉಪ ಪ್ರಧಾನಿ ಬಾಬು ಜಗಜೀವನ ರಾಮ್ ರವರಿಗೆ ಗೌರವ ಸಲ್ಲಿಸುತ್ತಿರುವುದು ಸ್ವಾಗತರ್ಹ ಸಂಗತಿಯಾಗಿದೆ. ಹತ್ತಾರು ವರ್ಷಗಳಂತೆ ಈ ವರ್ಷವೂ ಕೇವಲ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವುದೇ ಅಲ್ಲದೆ ಅವರ ಪೂರ್ಣ ಪ್ರಮಾಣದ ನಿಂತಿರುವ ಭಂಗಿಯ ಪ್ರತಿಮೆಯನ್ನು ಸ್ಥಾಪಿಸುವ ಸಂಬಂಧ ರಾಜ್ಯದ ಶಕ್ತಿ ಕೇಂದ್ರವಾದ ವಿಧಾನಸೌಧದ ಮುಂದೆ ನಿರ್ಮಿಸಿದಂತೆ ಕೋಲಾರ ಜಿಲ್ಲೆಯ ಶಕ್ತಿ ಕೇಂದ್ರವಾದ ಜಿಲ್ಲಾ ಆಡಳಿತ ಭವನ ಮುಂದೆ ಶ್ರೀಯುತರ ಕಂಚಿನ ಪ್ರತಿಮೆ ನಿರ್ಮಿಸುವ ಸಂಬಂಧ ದಿನಾಂಕ 5 ಏಪ್ರಿಲ್ 2026 ರಂದು ಬಾಬು ಜಗಜೀವನ ರಾಮ್ ರವರ ಜನ್ಮ ದಿನಾಚರಣೆಗೆ ಅರ್ಥ ಕಲ್ಪಿಸುವಂತೆ ಗುದ್ದಲಿ ಪೂಜೆ ನೆರವೇರಿಸಬೇಕೆಂದು ಒತ್ತಾಯಿಸಿದರು.

ದೀನದಲಿತರ ಉದ್ಧಾರಕ್ಕಾಗಿ ತಮ್ಮ ಜೀವಮಾನದ ಇಡೀ ಜೀವನವನ್ನೇ ಮುಡುಪಾಗಿಟ್ಟ ಮಹಾನ್ ವ್ಯಕ್ತಿಗಳ ಆದರ್ಶಗಳು ಎಲ್ಲರಿಗೂ ಸ್ಫೂರ್ತಿಯಾಗಿದ್ದು ಇಂತಹ ಮಹಾನ್ ವ್ಯಕ್ತಿಗಳ ನೆನಪನ್ನು ಅಚ್ಚ ಹಸಿರಾಗಿಸಲು ಎಲ್ಲರೂ ಸಹಕರಿಸಬೇಕೆಂದು ನಂತರದಲ್ಲಿ ಗುದ್ದಲಿ ಪೂಜೆ ನೆರವೇರಿಸುವ ಮೂಲಕ ಸಾರ್ವಜನಿಕ ಸಭೆಯನ್ನು ಮಾಡಬೇಕೆಂದು ಮನವಿ ಮಾಡಿದರು.

ನಿಯೋಗದಲ್ಲಿ ಜಾಂಭವ ಯುವಸೇನೆ ಶ್ರೀನಿವಾಸ್, ರಾಜೇಶ್, ವೆಂಕಟಸ್ವಾಮಿ, ನಾಗೇಶ್, ಮಧು ಎನ್ ಉಪಸ್ಥಿತರಿದ್ದರು.

# ಗ್ಯಾಸ್ ಸಿಗದೆ ಆಟೋ ಚಾಲಕರ ಬದುಕು ದುಸ್ತರ

ಮುಳಬಾಗಿಲು



ತಾಲೂಕಿನಲ್ಲಿ ಕಳೆದ ಕೆಲವು ದಿನಗಳಿಂದ ಆಟೋಗಳಿಗೆ ಅನಿಲ (ಗ್ಯಾಸ್) ಸರಬರಾಜು ಸ್ಥಗಿತಗೊಂಡಿರುವುದರಿಂದ ಆಟೋ ಚಾಲಕರು ಕೆಲಸವಿಲ್ಲದೆ ಬೀದಿಗೆ ಬೀಳುವ ಪರಿಸ್ಥಿತಿ ನಿರ್ಮಾಣವಾಗಿದೆ. ಸರ್ಕಾರ ಮತ್ತು ಜನಪ್ರತಿನಿಧಿಗಳು ಕೂಡಲೇ ಈ ಸಮಸ್ಯೆಗೆ ಪರಿಹಾರ ಒದಗಿಸಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ತಾಲೂಕು ಅಧ್ಯಕ್ಷ ಹುಸೇನ್ ಒತ್ತಾಯಿಸಿದ್ದಾರೆ.

ನಗರದಲ್ಲಿ ಆಟೋ ಚಾಲಕರ ಅಳಲನ್ನು ಆಲಿಸಿ ಮಾತನಾಡಿದ ಅವರು, ಅನಿಲ ಅಭಾವದಿಂದಾಗಿ ಬಡ ಚಾಲಕರ ಕುಟುಂಬ ನಿರ್ವಹಣೆ ಸಂಕಷ್ಟಕ್ಕೆ ಸಿಲುಕಿದೆ ಎಂದು ಆತಂಕ ವ್ಯಕ್ತಪಡಿಸಿದರು.

"ಮುಳಬಾಗಿಲು ತಾಲೂಕಿನಲ್ಲಿ ಸುಮಾರು 1,500 ರಿಂದ 2,000 ಆಟೋಗಳಿವೆ. ಬಹುತೇಕ ಚಾಲಕರು ದಿನದ ಬಾಡಿಗೆಯನ್ನೇ ನಂಬಿ ಜೀವನ ಸಾಗಿಸುತ್ತಿದ್ದಾರೆ. ನಗರದ ಎರಡು ಗ್ಯಾಸ್ ಬಂಕ್‌ಗಳಲ್ಲಿ ಅನಿಲ ಪೂರೈಕೆ ಇಲ್ಲದೆ ಆಟೋಗಳನ್ನು ಮನೆಗಳ ಮುಂದೆ ನಿಲ್ಲಿಸುವಂತಾಗಿದೆ. ಇದರಿಂದಾಗಿ ದೈನಂದಿನ ಆದಾಯವಿಲ್ಲದೆ ಅನ್ನಕ್ಕೂ ಪರದಾಡುವ ಸ್ಥಿತಿ ಬಂದೊದಗಿದೆ," ಎಂದು ಹುಸೇನ್ ವಿವರಿಸಿದರು.

ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸರ್ಕಾರ ಕೂಡಲೇ ಗ್ಯಾಸ್ ಸರಬರಾಜನ್ನು ಪುನರಾರಂಭಿಸಬೇಕು.

ಒಂದು ವೇಳೆ ತಾಂತ್ರಿಕ ಕಾರಣಗಳಿಂದ ವಿಳಂಬವಾದರೆ, ಜೀವನೋಪಾಯ ಕಳೆದುಕೊಂಡಿರುವ ಆಟೋ ಚಾಲಕರ ಕುಟುಂಬಗಳಿಗೆ ಸರ್ಕಾರ ತಕ್ಷಣವೇ ಆರ್ಥಿಕ ನೆರವು ನೀಡಬೇಕು ಎಂದು ಅವರು ಮನವಿ ಮಾಡಿದರು.

ಆಟೋ ಚಾಲಕರ ಸಮಸ್ಯೆಯನ್ನು ಕಡೆಗಣಿಸಿದರೆ ಮುಂದಿನ ದಿನಗಳಲ್ಲಿ ಸಾವಿರಾರು ಚಾಲಕರನ್ನು ಸಂಘಟಿಸಿ ಕರ್ನಾಟಕ ರಕ್ಷಣಾ ವೇದಿಕೆ ವತಿಯಿಂದ ಉಗ್ರವಾದ ನ್ಯಾಯಯುತ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ಹುಸೇನ್ ಅವರು ಸರ್ಕಾರಕ್ಕೆ ಎಚ್ಚರಿಕೆ ನೀಡಿದ್ದಾರೆ.

# ಸ್ವರ್ಣಭೂಮಿ ಫೌಂಡೇಷನ್‌ನಿಂದ ಕನ್ನಡಿಗರ ವಿಜಯ ದಿನ ಆಚರಣೆ

ಕೋಲಾರ




ಏಪ್ರಿಲ್ 4 ಅನ್ನು ಕನ್ನಡಿಗರ ವಿಜಯ ದಿನ (ವಿಜಯೋತ್ಸವ) ಎಂದು ಆಚರಿಸಲಾಗುತ್ತದೆ. ಕ್ರಿ.ಶ. 618ರ ಸುಮಾರಿಗೆ (ಕೆಲವು ದಾಖಲೆಗಳ ಪ್ರಕಾರ 7ನೇ ಶತಮಾನ) ಚಾಲುಕ್ಯ ಚಕ್ರವರ್ತಿ ಇಮ್ಮಡಿ ಪುಲಕೇಶಿಯು ನರ್ಮದಾ ನದಿ ತೀರದಲ್ಲಿ ಉತ್ತರ ಭಾರತದ ಹರ್ಷವರ್ಧನನನ್ನು ಸೋಲಿಸಿ, ದಕ್ಷಿಣ ಭಾರತದ ಸ್ವಾಯತ್ತತೆಯನ್ನು ಉಳಿಸಿದ ಐತಿಹಾಸಿಕ ದಿನದ ನೆನಪಿಗಾಗಿ ಇದನ್ನು ಆಚರಿಸಲಾಗುತ್ತದೆ. ಈ ದಿನವನ್ನು ನಾಡಿನ ಪ್ರತಿಯೊಬ್ಬರು ಸಂಭ್ರಮದಿಂದ ಆಚರಿಸಬೇಕು ಎಂದು ಸ್ವರ್ಣಭೂಮಿ ಫೌಂಡೇಷನ್ ಅಧ್ಯಕ್ಷರಾದ ಬಿ.ಶಿವಕುಮಾರ್ ತಿಳಿಸಿದರು.

ನಗರದ ಸರ್ವಜ್ಞ ಪಾರ್ಕ್‌ನಲ್ಲಿ ಸ್ವರ್ಣಭೂಮಿ ಫೌಂಡೇಷನ್ ವತಿಯಿಂದ ಹಮ್ಮಿಕೊಂಡಿದ್ದ ಕನ್ನಡಿಗರ ವಿಜಯ ದಿನದ ಆಚರಣೆಯಲ್ಲಿ ಮಾತನಾಡಿದರು.

ಇಮ್ಮಡಿ ಪುಲಕೇಶಿಯು ಹರ್ಷವರ್ಧನನ ದಕ್ಷಿಣ ದಿಗ್ವಿಜಯದ ಆಸೆಯನ್ನು ನುಚ್ಚುನೂರು ಮಾಡಿದನು. ಈ ಜಯದ ನಂತರ ಪುಲಕೇಶಿಗೆ 'ದಕ್ಷಿಣ ಪತೇಶ್ವರ' ಎಂಬ ಬಿರುದು ಬಂದಿತು. ಇಂತಹ ಐತಿಹಾಸಿಕ ದಿನದ ಕಾರ್ಯಕ್ರಮವನ್ನು ಸ್ವರ್ಣಭೂಮಿ ಫೌಂಡೇಷನ್ ಹಮ್ಮಿಕೊಂಡು ಆಚರಿಸುತ್ತಿರುವುದಕ್ಕೆ ಇಡೀ ತಂಡಕ್ಕೆ ಅಭಿನಂದನೆಗಳು ಎಂದು ಜಿಲ್ಲಾ ಮುಖ್ಯೋಪಾಧ್ಯಾಯರ ಸಂಘದ ಜಿಲ್ಲಾಧ್ಯಕ್ಷರದ ಜಿ. ಶ್ರೀನಿವಾಸ್ ತಿಳಿಸಿದರು.

ಈ ದಿನ ಕನ್ನಡಿಗರು ಪುಲಕೇಶಿಯ ಶೌರ್ಯವನ್ನು ಸ್ಮರಿಸಿ, ವಿಜಯೋತ್ಸವ ಆಚರಿಸುತ್ತಾರೆ. ಇದು ಕನ್ನಡ ನಾಡಿನ ಶಕ್ತಿ ಮತ್ತು ಅಸ್ಮಿತೆಯ ಪ್ರತೀಕವಾಗಿ ಆಚರಿಸಲ್ಪಡುವ ಪ್ರಮುಖ ದಿನವಾಗಿದೆ ಎಂದು ಜಿಲ್ಲಾ ಚುಟುಕು ಸಾಹಿತ್ಯ ಪರಿಷತ್ತಿನ ಜೋಲ್ಲಾಧ್ಯಕ್ಷರದ ಪಿ. ನಾರಾಯಣಪ್ಪ ತಿಳಿಸಿದರು.

ರಂಗ ಇಂಚರ ಟ್ರಸ್ಟ್ ನ ಅಧ್ಯಕ್ಷರಾದ ಡಾ. ಇಂಚರ ನಾರಾಯಣಸ್ವಾಮಿ ಮಾತನಾಡುತ್ತಾ ಇಂತಹ ವಿಷಯಗಳು ಹಾಗೂ ಮಹಾತ್ಮರ ಬಗ್ಗೆ ಮಕ್ಕಳ ಪಠ್ಯ ಪುಸ್ತಕದಲ್ಲಿ ನೀಡಿದಾಗ ಇತಿಹಾಸವನ್ನು ಮಕ್ಕಳಿಗೆ ಕನ್ನಡ ನಾಡಿನ ಇತಿಹಾಸವನ್ನು ತಿಳಿಯಲು ಸಾಧ್ಯವಾಗುತ್ತದೆ ಎಂದರು.

# ಬಾಲಮುರುಗರ್ ಸ್ವಾಮಿಗೆ ವೈಭವದ ಹಾಲು ಕಾವಡಿ ಮಹೋತ್ಸವ

ಬಂಗಾರಪೇಟೆ

ನಗರದ ಪ್ರಸಿದ್ಧ ಶ್ರೀ ಬಾಲಮುರುಗರ್ ದೇವಸ್ಥಾನದಲ್ಲಿ ಶನಿವಾರ ಹಾಲು ಕಾವಡಿ ಮಹೋತ್ಸವವು ಅತ್ಯಂತ ಭಕ್ತಿ, ಶ್ರದ್ಧೆ ಹಾಗೂ ಸಡಗರದೊಂದಿಗೆ ಅದ್ದೂರಿಯಾಗಿ ನೆರವೇರಿತು. ಸಾವಿರಾರು ಭಕ್ತರು ಈ ಧಾರ್ಮಿಕ ಸಂಭ್ರಮದಲ್ಲಿ ಪಾಲ್ಗೊಂಡು ಮುರುಗನ್ ಸ್ವಾಮಿಯ ಕೃಪೆಗೆ ಪಾತ್ರರಾದರು.

ದೇವಸ್ಥಾನದ ಆಡಳಿತ ಮಂಡಳಿಯ ಆಶ್ರಯದಲ್ಲಿ ನಡೆದ ಈ ಮಹೋತ್ಸವದ ಅಂಗವಾಗಿ ಮುಂಜಾನೆಯೇ ದೇವಸ್ಥಾನದಲ್ಲಿ ವಿಶೇಷ ಪೂಜೆ, ಹಾಲಾಭಿಷೇಕ, ಪುಷ್ಪಾಲಂಕಾರ ಹಾಗೂ ಮಹಾಮಂಗಳಾರತಿ ಕಾರ್ಯಕ್ರಮಗಳು ಜರುಗಿದವು.

ಬೆಳಿಗ್ಗೆಯಿಂದಲೇ ಭಕ್ತರು ಕಾವಡಿ ಹೊತ್ತು ಭಜನೆ, ನಾದಸ್ವರ, ಡೊಳ್ಳು ಕುಣಿತ ಹಾಗೂ ತಾಳಮದ್ದಲೆಗಳ ವೈಭವದೊಂದಿಗೆ ಮೆರವಣಿಗೆಯಲ್ಲಿ ಸಾಗಿದರು. ಮಹಿಳೆಯರು, ಯುವಕರು ಮತ್ತು ಹಿರಿಯರು ಭಕ್ತಿಭಾವದಿಂದ ಹಾಲಿನ ಕಲಶಗಳನ್ನು ಹೊತ್ತು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿದರು. ಭಕ್ತರ ಜಯಘೋಷಗಳ ನಡುವೆ ಸಾಗಿದ ಮೆರವಣಿಗೆಯು ದೇವಸ್ಥಾನ ತಲುಪಿದ ನಂತರ, ಸಂಗ್ರಹವಾದ ಹಾಲಿನಿಂದ ಶ್ರೀ ಬಾಲಮುರುಗರ್ ಸ್ವಾಮಿಗೆ ಮಹಾ ಹಾಲಾಭಿಷೇಕ ನೆರವೇರಿಸಲಾಯಿತು.




ಮಹೋತ್ಸವದ ಪ್ರಯುಕ್ತ ದೇವಸ್ಥಾನದ ಆವರಣವನ್ನು ಆಕರ್ಷಕ ಹೂವಿನ ಅಲಂಕಾರ ಹಾಗೂ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿತ್ತು. ದೇವಸ್ಥಾನ ಆಡಳಿತ ಮಂಡಳಿಯ ವತಿಯಿಂದ ಭಕ್ತಾದಿಗಳಿಗೆ ಸಮರ್ಪಕವಾಗಿ ಕುಡಿಯುವ ನೀರು, ಪ್ರಸಾದ ವಿತರಣೆ ಹಾಗೂ ಬೃಹತ್ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

ಈ ಭಕ್ತಿ ಉತ್ಸವದಲ್ಲಿ ಸ್ಥಳೀಯ ಜನಪ್ರತಿನಿಧಿಗಳು, ವಿವಿಧ ಸಂಘಟನೆಗಳ ಗಣ್ಯರು ಹಾಗೂ ಬಂಗಾರಪೇಟೆ ಸುತ್ತಮುತ್ತಲ ಗ್ರಾಮಗಳ ಸಾವಿರಾರು ಭಕ್ತರು ಭಾಗವಹಿಸಿ ಹರಕೆ ತೀರಿಸಿದರು. ಹಾಲು ಕಾವಡಿ ಮಹೋತ್ಸವವು ಪಟ್ಟಣದಲ್ಲಿ ಧಾರ್ಮಿಕ ಏಕತೆ ಮತ್ತು ಸಂಪ್ರದಾಯದ ಶ್ರೀಮಂತಿಕೆಯನ್ನು ಮತ್ತೊಮ್ಮೆ ಅನಾವರಣಗೊಳಿಸಿತು.

ಭಾರತ ಸಾರಥಿ
27/04/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಸ್ವಯಂ ಜನಗಣತಿಯಲ್ಲಿ ಪಾಲ್ಗೊಳ್ಳಲು ತಹಶೀಲ್ದಾರ್ ಮನವಿ

ಕೊರಟಗೆರೆ

ದೇಶದ ಸರ್ವತೋಮುಖ ಅಭಿವೃದ್ಧಿಯಲ್ಲಿ ಜನಗಣತಿಯು ಪ್ರಮುಖ ಪಾತ್ರ ವಹಿಸಲಿದ್ದು, ಇದೇ 1 ರಿಂದ ಆರಂಭವಾಗಿರುವ ಸ್ವಯಂ ಗಣತಿ ಕಾರ್ಯದಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಬೇಕು ಎಂದು ತಾಲೂಕು ತಹಶೀಲ್ದಾರ್ ಕೆ. ಮಂಜುನಾಥ್ ಕರೆ ನೀಡಿದ್ದಾರೆ.

ಪಟ್ಟಣದ ತಾಲೂಕು ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, 2027ರ ಜನಗಣತಿಯ ಅಂಗವಾಗಿ ಮೊದಲ ಹಂತದಲ್ಲಿ ಡಿಜಿಟಲ್ ರೂಪದ ಸ್ವಯಂ ಗಣತಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಮಾಹಿತಿ ನೀಡಿದರು.

ಗಣತಿಯ ಪ್ರಮುಖ ಹಂತಗಳು:

ಸ್ವಯಂ ಗಣತಿ: ಏಪ್ರಿಲ್ 1 ರಿಂದ 15 ರವರೆಗೆ ಸಾರ್ವಜನಿಕರು ತಮ್ಮ ಮೊಬೈಲ್ ಮೂಲಕವೇ ವಿವರಗಳನ್ನು ದಾಖಲಿಸಬಹುದು.

ಮನೆ–ಮನೆ ಭೇಟಿ: ಏಪ್ರಿಲ್ 15ರ ನಂತರ ಗಣತಿದಾರರು ಪ್ರತಿಯೊಂದು ಮನೆಗೆ ಖುದ್ದು ಭೇಟಿ ನೀಡಿ ಮಾಹಿತಿ ಸಂಗ್ರಹಿಸಲಿದ್ದಾರೆ.

ಪ್ರಶ್ನಾವಳಿ: ಈ ಬಾರಿ ಗಣತಿಯಲ್ಲಿ ಪ್ರತಿ ಕುಟುಂಬಕ್ಕೆ ಒಟ್ಟು 34 ಅಂಶಗಳ ಪ್ರಶ್ನಾವಳಿ ಇರಲಿದ್ದು, ನಿಖರ ಮಾಹಿತಿ ನೀಡುವುದು ಅಗತ್ಯವಾಗಿದೆ.

ತಾಲೂಕು ಮಟ್ಟದ ಸಿದ್ಧತೆ: ಕೊರಟಗೆರೆ ತಾಲೂಕಿನ ಒಟ್ಟು 388 ಗ್ರಾಮಗಳ ಗಣತಿಗಾಗಿ 54 ಮಂದಿ ಸಿಬ್ಬಂದಿ ಹಾಗೂ 8 ಮಂದಿ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ಪುರಸಭೆ ವ್ಯಾಪ್ತಿಯ 23 ವಾರ್ಡ್‌ಗಳ ಕಾರ್ಯಕ್ಕಾಗಿ 10 ಮಂದಿ ಸಿಬ್ಬಂದಿ ಕೆಲಸ ಮಾಡಲಿದ್ದಾರೆ. 2011ರ ಗಣತಿಯ ಅಂಕಿಅಂಶಗಳನ್ನು ತಾಳೆ ಮಾಡಿಕೊಂಡು ಈ ಪ್ರಕ್ರಿಯೆ ನಡೆಯಲಿದೆ ಎಂದು ತಹಶೀಲ್ದಾರ್ ವಿವರಿಸಿದರು.

ನಕಲಿ ಐಡಿಗಳ ಬಗ್ಗೆ ಎಚ್ಚರ!

ಗಣತಿಯ ಹೆಸರಿನಲ್ಲಿ ಸಾರ್ವಜನಿಕರನ್ನು ವಂಚಿಸುವ ಜಾಲಗಳ ಬಗ್ಗೆ ಎಚ್ಚರಿಸಿದ ಅವರು, "ಸಾರ್ವಜನಿಕರು ಸರ್ಕಾರದ ಅಧಿಕೃತ ವೆಬ್‌ಸೈಟ್ ಮೂಲಕವೇ ಮಾಹಿತಿ ಹಂಚಿಕೊಳ್ಳಬೇಕು. ಸಾಮಾಜಿಕ ಜಾಲತಾಣಗಳಲ್ಲಿ ಬರುವ ಅಪರಿಚಿತ ಲಿಂಕ್‌ಗಳು ಅಥವಾ ಕರೆಗಳಿಗೆ ಓಟಿಪಿ ನೀಡಬಾರದು" ಎಂದು ಕಿವಿಮಾತು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಪುರಸಭಾ ಮುಖ್ಯಾಧಿಕಾರಿ ಉಮೇಶ್, ಕಂದಾಯ ಇಲಾಖೆ ಅಧಿಕಾರಿ ವೆಂಕಟೇಶಮೂರ್ತಿ, ಕುಡಿವ ನೀರು ಸರಬರಾಜು ಇಲಾಖೆಯ ಎಇಇ ಕಾಂತರಾಜು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.



"ಜನಸಂಖ್ಯೆಯ ಆಧಾರದ ಮೇಲೆ ಜನರ ಸಾಮಾಜಿಕ ಮತ್ತು ಆರ್ಥಿಕ ಸ್ಥಿತಿಗತಿಗಳನ್ನು ಅರಿತು ಸರ್ಕಾರ ಹೊಸ ಯೋಜನೆಗಳನ್ನು ರೂಪಿಸುತ್ತದೆ. ಹೀಗಾಗಿ ಪ್ರತಿಯೊಬ್ಬರೂ ಈ ಅಭಿಯಾನದಲ್ಲಿ ಕೈಜೋಡಿಸಬೇಕು."
- ಕೆ. ಮಂಜುನಾಥ್, ತಹಶೀಲ್ದಾರ್.

# 8ರಂದು ಬೃಹತ್ ಜನತಾ ದರ್ಶನ

ತುಮಕೂರು

ಜಿಲ್ಲೆಯ ನಾಗರಿಕರ ಸಮಸ್ಯೆಗಳಿಗೆ ನೇರವಾಗಿ ಸ್ಪಂದಿಸಲು ಮತ್ತು ಸ್ಥಳದಲ್ಲೇ ಪರಿಹಾರ ಒದಗಿಸುವ ಉದ್ದೇಶದಿಂದ ಇದೇ 8ರಂದು ನಗರದ ಕೇಂದ್ರ ಗ್ರಂಥಾಲಯ ಸಭಾಂಗಣದಲ್ಲಿ 'ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ' ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದ್ದಾರೆ.

ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ಅಂದು ಬೆಳಿಗ್ಗೆ 11 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ. ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಯಶಸ್ವಿಯಾಗಿ ತಾಲ್ಲೂಕು ಮಟ್ಟದ ಜನತಾ ದರ್ಶನ ಮುಗಿಸಿದ ನಂತರ, ಈಗ ಜಿಲ್ಲಾ ಮಟ್ಟದ ಅಹವಾಲು ಸ್ವೀಕಾರಕ್ಕೆ ವೇದಿಕೆ ಸಜ್ಜಾಗಿದೆ.

ಸಾರ್ವಜನಿಕರ ಅನುಕೂಲಕ್ಕಾಗಿ ಕಾರ್ಯಕ್ರಮದ ಸ್ಥಳದಲ್ಲಿ 10 ಪ್ರಮುಖ ಇಲಾಖೆಗಳ ವಿಶೇಷ ಮಳಿಗೆಗಳನ್ನು ತೆರೆಯಲಾಗುವುದು. ಆಯಾ ಇಲಾಖೆಯ ಜಿಲ್ಲಾ ಮಟ್ಟದ ಮುಖ್ಯಸ್ಥರು ಸ್ಥಳದಲ್ಲೇ ಹಾಜರಿದ್ದು, ಸಾರ್ವಜನಿಕರ ಅಹವಾಲುಗಳನ್ನು ಸ್ವೀಕರಿಸಿ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕ್ರಮ ಕೈಗೊಳ್ಳಲಿದ್ದಾರೆ.

ಬಂದ ಅಹವಾಲುಗಳನ್ನು ದಾಖಲಿಸಲು ಮತ್ತು ಅವುಗಳ ಮೇಲೆ ನಿರಂತರ ನಿಗಾ ಇಡಲು ಮಳಿಗೆಗಳಲ್ಲಿ ಐಪಿಜಿಆರ್‌ಎಸ್ ತಂತ್ರಾಂಶ ಒಳಗೊಂಡ ಡಾಟಾ ಎಂಟ್ರಿ ಹಾಗೂ ಕಂಪ್ಯೂಟರ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಇದರಿಂದ ದೂರುಗಳ ವಿಲೇವಾರಿ ಪ್ರಕ್ರಿಯೆ ಸುಗಮವಾಗಲಿದೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದ್ದಾರೆ.

ವರ್ಷಗಳಿಂದ ನೆನೆಗುದಿಗೆ ಬಿದ್ದಿದ್ದ ಜಟಿಲ ಸಮಸ್ಯೆಗಳಿಗೂ ಈ ವೇದಿಕೆಯಲ್ಲಿ ಮುಕ್ತಿ ನೀಡುವ ಗುರಿ ಹೊಂದಲಾಗಿದೆ. ಸಾರ್ವಜನಿಕರು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಹೇಳಿದರು.

ಜಿಲ್ಲಾದ್ಯಂತ ಬರುವ ನಾಗರಿಕರಿಗೆ ಅಗತ್ಯವಿರುವ ಕುಡಿಯುವ ನೀರು ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಾರ್ಯಕ್ರಮದ ಸ್ಥಳದಲ್ಲಿ ಒದಗಿಸಲು ಅಧಿಕಾರಿಗಳಿಗೆ ಈಗಾಗಲೇ ಸೂಚನೆ ನೀಡಲಾಗಿದೆ. ಯಾವುದೇ ಲೋಪವಿಲ್ಲದೆ ಜವಾಬ್ದಾರಿ ನಿರ್ವಹಿಸುವಂತೆ ಇಲಾಖಾ ಮುಖ್ಯಸ್ಥರಿಗೆ ಆದೇಶಿಸಲಾಗಿದೆ.

# 19ರಿಂದ ಶ್ರೀಪುತ್ತಿಗೆ ಸುಗುಣ ಶಿಬಿರ



ಉಡುಪಿ

ಇಲ್ಲಿನ ಉಡುಪಿ ಗೀತಾಮಂದಿರದಲ್ಲಿ ವೀರವಿಠಲೋ ವಿಜಯತೇತರಾಮ್ ಎಂದೆನ್ನುತ್ತಾ ಸನಾತನ ಹಿಂದೂ ಸಂಸ್ಕೃತಿ ಸಂರಕ್ಷಣೆ ಸಂವರ್ಧನೆಗಾಗಿ ಜಗದ್ಗುರು ಶ್ರೀಮನ್ಮಧ್ವಾಚಾರ್ಯ ಮೂಲಮಹಾಸಂಸ್ಥಾನ ಉಡುಪಿ ಶ್ರೀಪುತ್ತಿಗೆಮಠದ ವತಿಯಿಂದ ಇದೇ 19ರಿಂದ 30ರವರೆಗೆ ಶ್ರೀ ಪುತ್ತಿಗೆ ಶಿಬಿರ ಆಯೋಜಿಸಲಾಗಿದೆ.

ಭಾರತೀಯ ಸಂತ ಮಹಾಪರಿಷತ್, ಸಂಸ್ಕಾರ ಭಾರತಿ, ವಿಶ್ವ ಹಿಂದೂ ಪರಿಷತ್, ಪತಂಜಲಿ ಯೋಗ ಸಮಿತಿ ಉಡುಪಿ ಘಟಕಗಳ ಸಹಯೋಗದೊಂದಿಗೆ ನಡೆಯುವ ಶ್ರೀಪುತ್ತಿಗೆ ಸುಗುಣ ಶಿಬಿರವು ಮಧ್ಯಾಹ್ನ 2 ರಿಂದ ಸಂಜೆ 6ರ ವರೆಗೆ ಜರುಗಲಿದ್ದು, ಸರ್ವರಿಗೂ ಸ್ವಾಗತ ಕೋರಲಾಗಿದೆ.

# ಪಾಲಿಕೆಯಿಂದ 'ಗುಡಿ-ಗುಂಡಾರ'ಗಳ ಸ್ವಚ್ಛತಾ ಅಭಿಯಾನ; 3 ಟನ್ ಕಸ ತೆರವು

ಬೆಂಗಳೂರು

ಸ್ವಚ್ಛ ಸರ್ವೇಕ್ಷಣ್ 2025–26ರ ರಾಷ್ಟ್ರೀಯ ಶ್ರೇಯಾಂಕ ಪಟ್ಟಿಯಲ್ಲಿ ಬೆಂಗಳೂರನ್ನು ಅಗ್ರಸ್ಥಾನಕ್ಕೇರಿಸುವ ಗುರಿಯೊಂದಿಗೆ 'ಬೆಂಗಳೂರು ಕೇಂದ್ರ ನಗರ ಪಾಲಿಕೆ' (ಬಿಸಿಎನ್‌ಪಿ) ವಿಶೇಷ ಅಭಿಯಾನಕ್ಕೆ ಚಾಲನೆ ನೀಡಿದೆ. ಇದರ 3ನೇ ಭಾಗವಾಗಿ ನಗರದ ಪ್ರಮುಖ 30 ದೇವಸ್ಥಾನಗಳು ಹಾಗೂ ಐತಿಹಾಸಿಕ ತಾಣಗಳನ್ನು ಶುಕ್ರವಾರ ಸಂಪೂರ್ಣವಾಗಿ ಸ್ವಚ್ಛಗೊಳಿಸಲಾಯಿತು.

ನಗರದ ಸ್ವಚ್ಛತೆ ಕಾಪಾಡುವ ಹಾಗೂ ತ್ಯಾಜ್ಯಮುಕ್ತ ನಗರಪಾಲಿಕೆ ರೂಪಿಸುವ ಉದ್ದೇಶದಿಂದ ಕೈಗೊಳ್ಳಲಾದ ಈ ಅಭಿಯಾನದ ಕುರಿತು ಪಾಲಿಕೆ ಆಯುಕ್ತರಾದ ರಾಜೇಂದ್ರ ಚೋಳನ್ ಮಾಹಿತಿ ನೀಡಿದರು.

3 ಟನ್ ತ್ಯಾಜ್ಯ ತೆರವು, 545 ಸಿಬ್ಬಂದಿ ಭಾಗಿ: ಈ ಬೃಹತ್ ಸ್ವಚ್ಛತಾ ಕಾರ್ಯದಲ್ಲಿ 442 ಪೌರಕಾರ್ಮಿಕರು ಹಾಗೂ 105 ಅಧಿಕಾರಿಗಳು ಸೇರಿದಂತೆ ಒಟ್ಟು 545 ಜನ ಪಾಲ್ಗೊಂಡಿದ್ದರು. ದೇವಸ್ಥಾನದ ಆವರಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಿಂದ ಸುಮಾರು 3 ಟನ್ ತ್ಯಾಜ್ಯವನ್ನು ತೆರವುಗೊಳಿಸಿ, ವೈಜ್ಞಾನಿಕವಾಗಿ ವಿಲೇವಾರಿ ಮಾಡಲಾಯಿತು.

ಶುಚಿಗೊಂಡ ಪ್ರಮುಖ ತಾಣಗಳು: ನಗರದ ಐತಿಹಾಸಿಕ ಧರ್ಮರಾಯಸ್ವಾಮಿ ದೇವಸ್ಥಾನ, ಹೊಂಬೇಗೌಡನಗರದ ಆಂಜನೇಯ ದೇವಸ್ಥಾನ, ಸಿದ್ಧಾಪುರದ ಶ್ರೀರಾಮ ದೇವಸ್ಥಾನ, ವಿ.ವಿ. ಪುರಂನ ಕನ್ಯಕಾಪರಮೇಶ್ವರಿ ದೇವಸ್ಥಾನ ಸೇರಿದಂತೆ ಚಾಮರಾಜಪೇಟೆ, ಶಿವಾಜಿನಗರ ಹಾಗೂ ಸಿ.ವಿ. ರಾಮನ್ ನಗರದ ಪ್ರಮುಖ ದೇವಸ್ಥಾನಗಳಲ್ಲಿ ಈ ವಿಶೇಷ ಅಭಿಯಾನ ನಡೆಯಿತು. ಕೇವಲ ಸ್ವಚ್ಛತೆ ಮಾಡುವುದಲ್ಲದೆ, ದೇವಸ್ಥಾನಗಳಿಗೆ ಬರುವ ಭಕ್ತರಲ್ಲಿ ತ್ಯಾಜ್ಯ ಎಸೆಯದಂತೆ ಜಾಗೃತಿಯನ್ನೂ ಮೂಡಿಸಲಾಯಿತು.

ಅಭಿವೃದ್ಧಿ ಅಪರ ಆಯುಕ್ತರಾದ ದಲ್ಜಿತ್ ಕುಮಾರ್ ಅವರ ಮೇಲುಸ್ತುವಾರಿಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಡಿಜಿಎಂ ಭೀಮೇಶ್ ನಾಯಕ್ ಹಾಗೂ ವಿವಿಧ ವಿಭಾಗಗಳ ಎಜಿಎಂಗಳು ಉಪಸ್ಥಿತರಿದ್ದರು.



"ಧಾರ್ಮಿಕ ಸ್ಥಳಗಳಿಗೆ ಪ್ರತಿನಿತ್ಯ ಸಾವಿರಾರು ಜನ ಭೇಟಿ ನೀಡುವುದರಿಂದ ಅಲ್ಲಿ ನೈರ್ಮಲ್ಯ ಕಾಪಾಡುವುದು ಅವಶ್ಯಕ. ಬೆಂಗಳೂರನ್ನು ರಾಷ್ಟ್ರಮಟ್ಟದ ಸ್ವಚ್ಛ ನಗರವನ್ನಾಗಿ ಮಾಡಲು ಈ ಅಭಿಯಾನ ಹಮ್ಮಿಕೊಳ್ಳಲಾಗಿದೆ."
- ರಾಜೇಂದ್ರ ಚೋಳನ್, ಆಯುಕ್ತರು, ಕೇಂದ್ರ ನಗರ ಪಾಲಿಕೆ.

# ಬಸವೇಶ್ವರ-ಮಾರಮ್ಮ ಜಾತ್ರೆ ವೈಭವ

ಕನಕಪುರ

ತಾಲೂಕಿನ ಕಸಬಾ ಹೋಬಳಿ ಬರಡನಹಳ್ಳಿ ಗ್ರಾಮದಲ್ಲಿ ಗ್ರಾಮದೇವತೆಗಳಾದ ಬಸವೇಶ್ವರ ಸ್ವಾಮಿ ಹಾಗೂ ಮಾರಮ್ಮ ದೇವಿಯ ಜಾತ್ರಾ ಮಹೋತ್ಸವದ ಅಂಗವಾಗಿ ಮಂಗಳವಾರ ಬೆಳಿಗ್ಗೆ ಅದ್ದೂರಿ 'ಅಗ್ನಿ ಕೊಂಡೋತ್ಸವ' ನೆರವೇರಿತು. ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆದ ಈ ಧಾರ್ಮಿಕ ವಿಧಿವಿಧಾನಗಳು ಗ್ರಾಮದಲ್ಲಿ ಹಬ್ಬದ ಕಳೆಯನ್ನು ತಂದಿದ್ದವು.

ಜಾತ್ರೆಯ ಅಂಗವಾಗಿ ಗ್ರಾಮದ ಚಿಕ್ಕ ಹೊಳೆಯಲ್ಲಿ ಗಂಗಾಪೂಜೆ ನೆರವೇರಿಸಿ, ಉತ್ಸವ ಮೂರ್ತಿಗಳನ್ನು ಮರವಣಿಗೆಯ ಮೂಲಕ ಬರಮಾಡಿಕೊಳ್ಳಲಾಯಿತು. ಅರ್ಚಕ ವೀರಭದ್ರಯ್ಯ ಅವರು ಧಗಧಗಿಸುವ ಅಗ್ನಿಕೊಂಡವನ್ನು ಯಶಸ್ವಿಯಾಗಿ ಆಯುವ ಮೂಲಕ ಭಕ್ತರ ಕಣ್ಮನ ಸೆಳೆದರು. ಸುತ್ತ ನೆರೆದಿದ್ದ ಸಾವಿರಾರು ಜನರು 'ಜಯಘೋಷ'ಗಳೊಂದಿಗೆ ಭಕ್ತಿ ಸಮರ್ಪಿಸಿದರು.

ಎಳವಾರ ಪೂಜೆ ಮತ್ತು ಮೆರವಣಿಗೆ:

ಬಸವೇಶ್ವರ ಸ್ವಾಮಿಯ 'ಎಳವಾರ' ಕಾರ್ಯಕ್ರಮವು ಪೂಜಾ ಕುಣಿತ ಹಾಗೂ ಮಂಗಳವಾದ್ಯಗಳೊಂದಿಗೆ ಗ್ರಾಮದ ಪ್ರಮುಖ ರಸ್ತೆಗಳಲ್ಲಿ ಸಾಗಿತು. ಪ್ರತಿಯೊಂದು ಮನೆಯ ಮುಂದೆ ಭಕ್ತರು ಎಳವಾರಕ್ಕೆ ವಿಶೇಷ ಪೂಜೆ ಸಲ್ಲಿಸಿ, ದೇವರಿಗೆ ಹಣ್ಣು–ಕಾಯಿ ನೈವೇದ್ಯ ಅರ್ಪಿಸಿದರು.

ಹಬ್ಬದ ಸಂಭ್ರಮದಲ್ಲಿ ಮಿಂಚಿದ ಬರಡನಹಳ್ಳಿ:

ಜಾತ್ರಾ ಮಹೋತ್ಸವದ ಹಿನ್ನೆಲೆಯಲ್ಲಿ ಗ್ರಾಮದ ಮಾರಮ್ಮ ಮತ್ತು ಬಸವೇಶ್ವರ ಸ್ವಾಮಿ ದೇವಸ್ಥಾನಗಳನ್ನು ವಿವಿಧ ಪುಷ್ಪಾಲಂಕಾರ ಹಾಗೂ ವಿದ್ಯುತ್ ದೀಪಗಳಿಂದ ಸಿಂಗರಿಸಲಾಗಿತ್ತು. ಗ್ರಾಮದ ತುಂಬಾ ನೆಂಟರಿಷ್ಟರ ಸಡಗರ ನೆಲೆಸಿತ್ತು. ಅನ್ನಸಂತರ್ಪಣೆ ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜಾತ್ರೆಯ ಮೆರುಗನ್ನು ಹೆಚ್ಚಿಸಿದವು.

# ಲಕ್ಷ ರೂ. ಬೆಲೆಯ ಚುಚ್ಚುಮದ್ದು ಈಗ ಉಚಿತ!



ತುಮಕೂರು

ರಕ್ತಸ್ರಾವದಂತಹ ಗಂಭೀರ ಸಮಸ್ಯೆಯಿಂದ ಬಳಲುವ ಹಿಮೋಫಿಲಿಯಾ (ಕುಸುಮ ರೋಗ) ರೋಗಿಗಳ ಪಾಲಿಗೆ ರಾಜ್ಯ ಸರ್ಕಾರದ 'ಕುಸುಮ ಸಂಜೀವಿನಿ' ಯೋಜನೆ ವರದಾನವಾಗಿ ಪರಿಣಮಿಸಿದೆ. ಶನಿವಾರ ಜಿಲ್ಲಾ ಆಸ್ಪತ್ರೆಯಲ್ಲಿ ಆಯೋಜಿಸಿದ್ದ ವಿಶೇಷ ಕಾರ್ಯಕ್ರಮದಲ್ಲಿ 18 ರೋಗಿಗಳಿಗೆ ಅತ್ಯಂತ ದುಬಾರಿ ಬೆಲೆಯ ಚುಚ್ಚುಮದ್ದನ್ನು ಉಚಿತವಾಗಿ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಜಿಲ್ಲಾ ಆರೋಗ್ಯಾಧಿಕಾರಿ ಡಾ. ಚಂದ್ರಶೇಖರ್, "ಹಿಮೋಫಿಲಿಯಾ ರೋಗಿಗಳಿಗೆ ನೀಡಲಾಗುವ ಒಂದು ಇಂಜೆಕ್ಷನ್ ಬೆಲೆ ಸುಮಾರು 1 ಲಕ್ಷ ರೂಪಾಯಿಗಳಾಗಲಿದೆ. ಸಾಮಾನ್ಯ ಜನರಿಗೆ ಈ ವೆಚ್ಚ ಭರಿಸುವುದು ಅಸಾಧ್ಯ. ಆದರೆ ಸರ್ಕಾರವು ಕುಸುಮ ಸಂಜೀವಿನಿ ಯೋಜನೆಯಡಿ ಈ ಚುಚ್ಚುಮದ್ದನ್ನು ಸಂಪೂರ್ಣ ಉಚಿತವಾಗಿ ನೀಡುತ್ತಿದೆ," ಎಂದು ತಿಳಿಸಿದರು.

ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಅನ್ಸರ್ ಬೇಗ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, "ಕರ್ನಾಟಕ ಸರ್ಕಾರವು ಮೊದಲ ಬಾರಿಗೆ ಈ ವಿಶೇಷ ಯೋಜನೆಯನ್ನು ಜಾರಿಗೆ ತಂದಿದೆ. ಜಿಲ್ಲಾ ಆಸ್ಪತ್ರೆಯಲ್ಲಿ ಪ್ರತಿ ತಿಂಗಳ ಮೊದಲ ಶನಿವಾರದಂದು ರೋಗಿಗಳ ತೂಕಕ್ಕೆ ಅನುಗುಣವಾಗಿ 'ಎಮಿಸಿಜುಮಾಬ್' ಇಂಜೆಕ್ಷನ್ ನೀಡಲಾಗುವುದು. ರೋಗಿಗಳು ಇದರ ಸದುಪಯೋಗ ಪಡೆಯಬೇಕು," ಎಂದರು. ಮಕ್ಕಳ ತಜ್ಞ ಡಾ. ಶ್ರೀನಿವಾಸ ಪ್ರಸಾದ್ ಅವರು ಈ ಚುಚ್ಚುಮದ್ದಿನ ಕಾರ್ಯವಿಧಾನದ ಕುರಿತು ಮಾಹಿತಿ ನೀಡಿದರು. ರಕ್ತಸ್ರಾವವನ್ನು ತಡೆಗಟ್ಟಲು ಇದು ಅತ್ಯಂತ ಪರಿಣಾಮಕಾರಿ ಔಷಧಿಯಾಗಿದೆ ಎಂದು ವಿವರಿಸಿದರು.

# ಜನಗಣತಿಯಲ್ಲಿ ಸಾರ್ವಜನಿಕರು ಭಾಗಿಯಾಗಬೇಕು: ಶಾಸಕ ನಾರಾ ಭರತ್ ರೆಡ್ಡಿ

ಬಳ್ಳಾರಿ

ಕೇಂದ್ರ ಸರ್ಕಾರ ಆರಂಭಿಸಿರುವ ಜನಗಣತಿ ಅಭಿಯಾನದಲ್ಲಿ ಸಾರ್ವಜನಿಕರು ಸ್ವಯಂ ಪ್ರೇರಣೆಯಿಂದ ಭಾಗಿಯಾಗಬೇಕು ಎಂದು ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು.

ಇಲ್ಲಿನ 37ನೇ ವಾರ್ಡ್‌ನ ದೇವಿ ನಗರದಲ್ಲಿ ಭೂಮಿ ಪೂಜೆ – ಸಲಾಂ ಬಳ್ಳಾರಿ ಹಾಗೂ ಮನೆ ಮನೆಗೂ ಭರತ್ ಅಭಿಯಾನಕ್ಕೆ ಚಾಲನೆ ನೀಡಿದ ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ಮಹಾನಗರ ಪಾಲಿಕೆಯ ವತಿಯಿಂದ ಜನಗಣತಿಯ ಬಗ್ಗೆ ಪ್ರಚಾರ ನಡೆಸಿದ್ದು, ಪಾಲಿಕೆಯ ಅಧಿಕಾರಿಗಳು ಮನೆ ಮನೆಗೆ ಜನಗಣತಿ ಬಂದಾಗ ಜನರು ಸಹಕರಿಸಿ ಅಭಿಯಾನ ಯಶಸ್ವಿಗೊಳಿಸಬೇಕೆಂದರು.

ಮಧ್ಯ ಪ್ರಾಚ್ಯ ದೇಶಗಳಲ್ಲಿ ಯುದ್ಧ ಸಂಘರ್ಷ ನಡೆಯುತ್ತಿದ್ದು, ಅಡುಗೆ ಅನಿಲ ಮತ್ತು ತೈಲ ಪೂರೈಕೆಯಲ್ಲಿ ವ್ಯತ್ಯಯ ಆಗಿದೆ, ಗೃಹ ಬಳಕೆ ಹಾಗೂ ವಾಣಿಜ್ಯ ಬಳಕೆಯ ಅನಿಲ ಪೂರೈಕೆಯಲ್ಲಿ ಅಕ್ರಮ ತಡೆಗಟ್ಟುವ ನಿಟ್ಟಿನಲ್ಲಿ ಪಾಲಿಕೆ ಹಾಗೂ ಜಿಲ್ಲಾಧಿಕಾರಿಗಳು ಈಗಾಗಲೇ ಕ್ರಮ ಕೈಗೊಂಡಿದ್ದಾರೆ. ಅನಿಲ ಪೂರೈಕೆಯಲ್ಲಿ ಅಕ್ರಮ ಕಂಡು ಬಂದರೆ ಅಧಿಕಾರಿಗಳು ಮತ್ತು ನನ್ನ ಗಮನಕ್ಕೆ ತರಬೇಕು ಎಂದರು.

ವಾರ್ಡ್ ಸಂಖ್ಯೆ 37 ಹಾಗೂ 38ನೇ ವಾರ್ಡ್‌ಗಳಲ್ಲಿ ರಸ್ತೆ, ಮಳೆ ನೀರು ಚರಂಡಿ, ಒಳ ಚರಂಡಿ ಹಾಗೂ ಪೇವರ್ಸ್ ಅಳವಡಿಕೆ ಕಾಮಗಾರಿಗಳ ಎರಡು ಪ್ರತ್ಯೇಕ ಕಾಮಗಾರಿಗಳಿಗೆ ತಲಾ 2 ಕೋಟಿ ರೂ.ಗಳಂತೆ ಒಟ್ಟು 4 ಕೋಟಿ ರೂ.ಗಳ ವೆಚ್ಚದಲ್ಲಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿದ್ದೇನೆ ಎಂದ ಶಾಸಕರು, ನಗರಕ್ಕೆ ಕುಡಿಯುವ ನೀರಿನ ಪೂರೈಕೆಗಾಗಿ ತುಂಗಭದ್ರಾ ಜಲಾಶಯದಿಂದ 400 ಕ್ಯೂಸೆಕ್ ನೀರನ್ನು ಕಾಲುವೆ ಮೂಲಕ ಕೆರೆಗೆ ತುಂಬಿಸಲು ಪ್ರಾದೇಶಿಕ ಆಯುಕ್ತರು ಆದೇಶ ಮಾಡಿದ್ದಾರೆ. ನಗರಕ್ಕೆ ಕುಡಿಯುವ ನೀರಿನ ಸಮಸ್ಯೆ ಆಗುವದಿಲ್ಲ. ಶಾಶ್ವತ ಕುಡಿಯುವ ನೀರಿನ ಯೋಜನೆಯ ಕಾಮಗಾರಿಗೆ ಶೀಘ್ರ ಆರಂಭಿಸಲಾಗುವುದು ಎಂದರು.

ಪಾಲಿಕೆಯ ಆಯುಕ್ತ ಮಂಜುನಾಥ್, 38ನೇ ವಾರ್ಡ್‌ನ ಸದಸ್ಯ ಕುಬೇರ, 37ನೇ ವಾರ್ಡ್‌ನ ಮುಖಂಡ ಮೊಹಮ್ಮದ್ ಭಾಯ್, ಮಾಜಿ ಮೇಯರ್ ರಾಜೇಶ್ವರಿ, ಪಾಲಿಕೆಯ ಸದಸ್ಯರಾದ ಮಿಂಚು ಸೀನ, ಕಾಂಗ್ರೆಸ್ ಮುಖಂಡರಾದ ಪರುಶುರಾಮುಡು, ಲಾಲಸ್ವಾಮಿ, ಹೊನ್ನಪ್ಪ, ಹಗರಿ ಗೋವಿಂದ, ದೇವಿನಗರ ಹೊನ್ನೂರಪ್ಪ, ಪಿ. ರಾಜು, ಹಾವಭಾವಿ ಲೋಕೇಶ್, ಮುಕ್ಕಣ್ಣ, ಚರಣ್, ಥಿಯೇಟರ್ ಶಿವು, ಪೆದ್ದನ್ನ, ವಿಶ್ವನಾಥ್, ಪದ್ಮಾ, ಹೊನ್ನೂರಸ್ವಾಮಿ ಮತ್ತಿತರರು ಶಾಸಕರೊಂದಿಗೆ ಇದ್ದರು.



# 6ರಂದು ಬಸವಣ್ಣನವರ 450 ಕೆಜಿ ಕಂಚಿನ ಪ್ರತಿಮೆ ಲೋಕಾರ್ಪಣೆ

ದೊಡ್ಡಬಳ್ಳಾಪುರ

ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಜಗಜ್ಯೋತಿ ಬಸವೇಶ್ವರರ 450 ಕೆಜಿ ತೂಕದ ಭವ್ಯ ಕಂಚಿನ ಪ್ರತಿಮೆಯ ಲೋಕಾರ್ಪಣೆ ಸಮಾರಂಭವು ಏಪ್ರಿಲ್ 6ರಂದು ಹಮ್ಮಿಕೊಳ್ಳಲಾಗಿದೆ ಎಂದು ಪ್ರತಿಮೆ ನಿರ್ಮಾಣ ಸಮಿತಿ ಸದಸ್ಯ ಪುಟ್ಟಬಸವರಾಜು ತಿಳಿಸಿದ್ದಾರೆ.

ನಗರದ ಬಸವ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, "ಬಸವಣ್ಣನವರ ವಚನಗಳ ಮೌಲ್ಯ ಹಾಗೂ ಚಿಂತನೆಗಳು ಇಂದಿನ ಪೀಳಿಗೆಗೆ ಅತ್ಯಂತ ಅವಶ್ಯಕವಾಗಿವೆ. ಸುಸಜ್ಜಿತ ಕಂಚಿನ ಪ್ರತಿಮೆ ನಿರ್ಮಾಣವಾಗಬೇಕೆನ್ನುವುದು ಕಳೆದ 7 ವರ್ಷಗಳ ಸುದೀರ್ಘ ಬಯಕೆಯಾಗಿತ್ತು. ಈಗ ಅದು ಈಡೇರುತ್ತಿರುವುದು ಸಂತಸದ ವಿಷಯ," ಎಂದರು.

ಸುತ್ತೂರು, ಸಿದ್ಧಗಂಗಾ ಶ್ರೀಗಳ ದಿವ್ಯ ಸಾನಿಧ್ಯ: ಈ ಐತಿಹಾಸಿಕ ಸಮಾರಂಭದಲ್ಲಿ ಸುತ್ತೂರು ಶ್ರೀಕ್ಷೇತ್ರದ ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು, ಸಿದ್ಧಗಂಗಾ ಮಠದ ಪೀಠಾಧ್ಯಕ್ಷರಾದ ಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು ಹಾಗೂ ಪಾಲನಹಳ್ಳಿ ಮಠದ ಶ್ರೀ ಸಿದ್ದರಾಜು ಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ಸಚಿವರು ಹಾಗೂ ಗಣ್ಯರ ಉಪಸ್ಥಿತಿ: ಆಹಾರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್. ಮುನಿಯಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ. ಅರಣ್ಯ ಸಚಿವ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರಾಧ್ಯಕ್ಷ ಈಶ್ವರ ಬಿ. ಖಂಡ್ರೆ ಮತ್ತು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ ಅವರು ಪ್ರತಿಮೆಯನ್ನು ಉದ್ಘಾಟಿಸಲಿದ್ದಾರೆ.

ಸಮಾವೇಶದಲ್ಲಿ 5ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ, ಶಾಸಕ ಶರತ್ ಕುಮಾರ್ ಬಚ್ಚೇಗೌಡ, ಸಂಸದ ಡಾ. ಕೆ. ಸುಧಾಕರ್, ವಿಧಾನಪರಿಷತ್ ಸದಸ್ಯ ಎಸ್. ರವಿ, ಶಾಸಕರಾದ ಧೀರಜ್ ಮುನಿರಾಜು, ಎನ್. ಶ್ರೀನಿವಾಸ್ ಸೇರಿದಂತೆ ವಿವಿಧ ಮಠಾಧೀಶರು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ.

ಕಲ್ಲಿನ ಮಂಟಪದ ಮೇಲೆ ಸ್ಥಾಪಿಸಲಾಗಿರುವ ಈ ಪ್ರತಿಮೆ ನಿರ್ಮಾಣಕ್ಕೆ ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಹಾಗೂ ದೇವನಹಳ್ಳಿ ತಾಲೂಕು ವೀರಶೈವ ಸಮಾಜ ಸಂಪೂರ್ಣ ಸಹಕಾರ ನೀಡಿದೆ. ಎಲ್ಲಾ ಸಮುದಾಯದವರು ಈ ಸಂಭ್ರಮದಲ್ಲಿ ಪಾಲ್ಗೊಳ್ಳಬೇಕು ಸಮಿತಿ ಸದಸ್ಯ ಪುಟ್ಟಬಸವರಾಜು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಹಾಸಭಾದ ಜಿಲ್ಲಾ ನಿರ್ದೇಶಕ ಆರ್.ಎಸ್. ಮಂಜುನಾಥ್, ಟಿ.ಎಸ್. ರುದ್ರಪ್ಪ, ಜಿ.ವೈ. ಮಲ್ಲಪ್ಪ, ಮಹದೇವಯ್ಯ, ಮೃತ್ಯುಂಜಯ ಹಾಗೂ ಎಂ. ಸುಜಯ್ ಕುಮಾರ್ ಹಾಜರಿದ್ದರು.



# ಬಡವರ ಸೇವೆಗಾಗಿ ನಾನು ರಾಜಕೀಯಕ್ಕೆ ಬಂದಿದ್ದು: ಕೆ.ಎನ್.ಆರ್



ಮಧುಗಿರಿ

ವಸತಿಹೀನರು ಯಾವುದೇ ಜಾತಿಯಾಗಿರಲಿ ಯಾವುದೇ ಪಕ್ಷಕ್ಕೆ ಮತ ನೀಡಿರಲಿ ಮೊದಲು ವಸತಿಹೀನ ಬಡವರಿಗೆ ವಸತಿ ಸೌಲಭ್ಯ ಕಲ್ಪಿಸಿಕೊಡಿ ಒಂದು ವೇಳೆ ನಮ್ಮ ಪಕ್ಷದ ಕಾರ್ಯಕರ್ತರು ಬಂದು ಅವರು ನಮಗೆ ಮತ ನೀಡಿಲ್ಲ ಹಾಗೆ ಹೀಗೆ ಅಂತೇನಾದರು ಹೇಳಿದರೆ ಅದಕ್ಕೆಲ್ಲ ಅವಕಾಶ ಕೊಡಬೇಡಿ ನನ್ನ ಹಿತ ಏನಿದ್ದರು ಬಡವರ್ಗದ ಪರವಾಗಿ ಪಕ್ಷಾತೀತಾವಾಗಿ ಇರಬೇಕು ಬಡವರ ಸೇವೆಗಾಗಿ ನಾನು ರಾಜಕಾರಣಕ್ಕೆ ಬಂದೆ ಎಂದು ಶಾಸಕ ಕೆ.ಎನ್. ರಾಜಣ್ಣ ತಿಳಿಸಿದರು.

ಪಟ್ಟಣದ ತಾ.ಪಂ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ತಾಲೂಕು ಮಟ್ಟದ ಅಧಿಕಾರಿಗಳ ಹಾಗೂ ಗ್ರಾ.ಪಂ ಪಿಡಿಓಗಳ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನೀವು(ಅಧಿಕಾರಿಗಳು) ಒಳ್ಳೆಯ ಕೆಲಸ ಮಾಡುತ್ತಿದ್ದೀರಾ ಅಂಗನವಾಡಿ ಮಕ್ಕಳಿಗೆ ಈ ಶೈಕ್ಷಣಿಕ ವರ್ಷದಿಂದ ಉಚಿತವಾಗಿ ಶೂ ಮತ್ತು ಸಮವಸ್ತ್ರ ವಿತರಿಸಬೇಕು ಎಂದರು.

ಪುರವರ ಪಂಚಾಯ್ತಿ ವ್ಯಾಪ್ತಿಯಲ್ಲಿ ಉಚಿತ ನೋಟ್ ಪುಸ್ತಕ ವಿತರಿಸುತ್ತಿಲ್ಲ ಎಂದು ದೂರುಗಳಿದ್ದು, ಪುರವರ ಪಂಚಾಯ್ತಿ ವ್ಯಾಪ್ತಿಯಲ್ಲಿ ಗೃಹ ಸಚಿವ ಡಾ.ಜಿ. ಪರಮೇಶ್ವರ್ ರವರ ಪೋಟೋ ಹಾಕಿ ಉಚಿತ ಪುಸ್ತಕ ವಿತರಿಸಿ ಮಕ್ಕಳ ಶಿಕ್ಷಣಕ್ಕೆ ಅನುಕೂಲ ಮಾಡಿಕೊಟ್ಟರೆ ನಿಮಗೇ ಒಳ್ಳೆಯದಾಗಲಿದೆ, ಮಧುಗಿರಿ ಪಟ್ಟಣದಲ್ಲಿ 74 ಬೋರ್ ವೆಲ್ ಗಳಿದ್ದು, ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಇಲ್ಲ ಎಂದು ಪುರಸಭೆ ಮುಖ್ಯಾಧಿಕಾರಿ ಸುರೇಶ್ ಶಾಸಕರಿಗೆ ಮಾಹಿತಿ ನೀಡಿದಾಗ, ಚರಂಡಿ ಸ್ವಚ್ಛತೆಗೆ ಆದ್ಯತೆ ಕೊಡಿ, ಮಳೆಗಾಲದಲ್ಲಿ ಚರಂಡಿ ತುಂಬಿ ರಸ್ತೆಗೆ ಹರಿಯುತ್ತಿದೆ ಎಂದು ಸೂಚನೆ ನೀಡಿದರು.

ನಿವೇಶನಗಳ ಹಂಚಿಕೆಯಲ್ಲಿ ಯಾವುದೇ ತಾರತಮ್ಯ ಬೇಡ ಯಾವುದೇ ಪಕ್ಷದಲ್ಲಿರಲಿ, ಬಡವರಾಗಿದ್ದರೆ ಅಂತವರನ್ನು ಗುರುತಿಸಿ ನಿವೇಶನ ನೀಡಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿ ಗೋಟೂರು ಶಿವಪ್ಪ, ತಹಶೀಲ್ದಾರ್ ಶ್ರೀನಿವಾಸ್, ಡಿ ವೈ ಎಸ್ ಪಿ ಮಂಜುನಾಥ್, ತಾ. ಪಂ ಇಓ ಲಕ್ಷ್ಮಣ್, ಎಡಿಓ ಧನಂಜಯ,ಯೋಜನಾಧಿಕಾರಿ ರಾಜೇಂದ್ರ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆದಿನಾರಾಯಣ ರೆಡ್ಡಿ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಇಂಧನ ಒಡಂಬಡಿಕೆ: ನವೋದ್ಯಮಗಳಿಗೆ ತಾಂತ್ರಿಕ ಬಲ



ಬೆಂಗಳೂರು
ರಾಜ್ಯದಲ್ಲಿ ನವೀಕರಿಸಬಹುದಾದ ಇಂಧನ ವಲಯದ ನವೋದ್ಯಮಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ಮಂಡಳಿಯು (ಕ್ರೆಡೆಲ್), ಆಸ್ಟ್ರೇಲಿಯಾದ ಪ್ರತಿಷ್ಠಿತ ನ್ಯೂ ಸೌತ್ ವೇಲ್ಸ್ ವಿಶ್ವವಿದ್ಯಾಲಯ ಸೇರಿದಂತೆ ಪ್ರಮುಖ ಸಂಸ್ಥೆಗಳೊಂದಿಗೆ ಇಂಧನ ಒಪ್ಪಂದಕ್ಕೆ ಸಹಿ ಹಾಕಿದೆ.

ಬೆಂಗಳೂರಿನ ಬೆಸ್ಕಾಂ ಕೇಂದ್ರ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಕ್ರೆಡೆಲ್ ಸಂಸ್ಥೆಯು ಯುಎನ್‌ಎಸ್‌ಡಬ್ಲ್ಯು ಸಿಡ್ನಿ, ಐಐಎಸ್‌ಸಿಯ ಎಫ್‌ಎಸ್‌ಐಡಿ ಹಾಗೂ ಐಐಎಂ ಬೆಂಗಳೂರಿನ ಎನ್‌ಎಸ್‌ಆರ್‌ಸಿಇಎಲ್ ಸಂಸ್ಥೆಗಳೊಂದಿಗೆ ಒಡಂಬಡಿಕೆ ಮಾಡಿಕೊಂಡಿತು.

ಇಂಧನ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತ ಮಾತನಾಡಿ, "ಈ ಸಹಯೋಗದಿಂದಾಗಿ ನವೀಕರಿಸಬಹುದಾದ ಇಂಧನ ಕ್ಷೇತ್ರದಲ್ಲಿ ಆಸ್ಟ್ರೇಲಿಯಾದ ಸುಧಾರಿತ ತಾಂತ್ರಿಕ ಪರಿಣತಿಯನ್ನು ಬಳಸಿಕೊಳ್ಳಲು ಸಾಧ್ಯವಾಗಲಿದೆ. ಈ ಒಪ್ಪಂದಗಳು ಕೇವಲ ತಾಂತ್ರಿಕ ನೆರವಿಗೆ ಸೀಮಿತವಾಗದೆ, ಉದ್ಯಮಗಳ ಬೆಳವಣಿಗೆ ಹಾಗೂ ದೊಡ್ಡ ಮಟ್ಟದ ಉದ್ಯೋಗ ಸೃಷ್ಟಿಗೂ ಪೂರಕವಾಗಲಿವೆ," ಎಂದು ತಿಳಿಸಿದರು.

ಕ್ರೆಡೆಲ್ ವ್ಯವಸ್ಥಾಪಕ ನಿರ್ದೇಶಕ ಕೆ.ಪಿ. ರುದ್ರಪ್ಪಯ್ಯ ಹಾಗೂ ಯುಎನ್‌ಎಸ್‌ಡಬ್ಲ್ಯು ಸಿಡ್ನಿಯ ಪ್ರೊ ವೈಸ್ ಚಾನ್ಸಲರ್ ಲಿಸಾ ಝೂಂರ್ಲಾನ್ ಒಪ್ಪಂದ ಪತ್ರಕ್ಕೆ ಸಹಿ ಹಾಕಿದರು. ಇದೇ ಸಂದರ್ಭದಲ್ಲಿ ಐಐಎಸ್‌ಸಿ ಮತ್ತು ಐಐಎಂಬಿ ಇನ್ನೋವೇಶನ್ ಸಂಸ್ಥೆಗಳ ಮುಖ್ಯಸ್ಥರು ಸಹ ಕ್ರೆಡೆಲ್ ಜೊತೆಗಿನ ಒಪ್ಪಂದಕ್ಕೆ ಅಂಕಿತ ಹಾಕಿದರು.

ಆಸ್ಟ್ರೇಲಿಯಾದ ಕಾನ್ಸುಲ್ ಜನರಲ್ ಹಿಲರಿ ಮೆಕ್ ಗೀಚಿ, ದಕ್ಷಿಣ ಏಷ್ಯಾ ಆಸ್ಟ್ರೇಡ್‌ನ ವ್ಯಾಪಾರ ಮತ್ತು ಹೂಡಿಕೆ ಆಯುಕ್ತರು ಸೇರಿದಂತೆ ಇಂಧನ ವಲಯದ ಹಿರಿಯ ಅಧಿಕಾರಿಗಳು ಈ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾದರು. ಈ ಒಪ್ಪಂದವು ಭಾರತ ಮತ್ತು ಆಸ್ಟ್ರೇಲಿಯಾ ದೇಶಗಳ ನಡುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ ಎಂದು ಅಭಿಪ್ರಾಯಪಡಲಾಯಿತು.

## ಮೈಸೂರು– ಜೋಧ್‌ಪುರ ವಿಶೇಷ ರೈಲು ಸೇವೆ

ಮೈಸೂರು
ಬೇಸಿಗೆ ಕಾಲದಲ್ಲಿ ಹೆಚ್ಚುವರಿ ಪ್ರಯಾಣಿಕರ ಸಂಚಾರವನ್ನು ನಿಭಾಯಿಸಲು ನೈರುತ್ಯ ರೈಲ್ವೆ ವತಿಯಿಂದ ಮೈಸೂರು ಮತ್ತು ಜೋಧ್‌ಪುರ ನಡುವೆ ವಿಶೇಷ ಎಕ್ಸ್‌ಪ್ರೆಸ್ ರೈಲುಗಳನ್ನು ಸಂಚರಿಸಲು ನಿರ್ಧರಿಸಲಾಗಿದೆ.



ರೈಲು ಸಂಖ್ಯೆ 06273ರ ಮೈಸೂರು–ಜೋಧ್‌ಪುರ ಎಕ್ಸ್‌ಪ್ರೆಸ್ ವಿಶೇಷ ಮೈಸೂರು ನಿಲ್ದಾಣದಿಂದ ರಾತ್ರಿ 8.15ಕ್ಕೆ ಏಪ್ರಿಲ್ 13, 20 ಮತ್ತು 27ರಂದು ಸೋಮವಾರಗಳಲ್ಲಿ ಹೊರಡಲಿದೆ. ಈ ರೈಲು ಜೋಧ್‌ಪುರವನ್ನು ಬುಧವಾರ ಸಂಜೆ 5ಕ್ಕೆ ತಲುಪಲಿದೆ.

ಹಾಗೆಯೇ ರೈಲು ಸಂಖ್ಯೆ 06274ರ ಜೋಧ್‌ಪುರ–ಮೈಸೂರು ಎಕ್ಸ್‌ಪ್ರೆಸ್ ವಿಶೇಷ ಜೋಧ್‌ಪುರ ನಿಲ್ದಾಣದಿಂದ ರಾತ್ರಿ 10.45ಕ್ಕೆ ಏಪ್ರಿಲ್ 16, 23 ಮತ್ತು 30ರಂದು ಗುರುವಾರಗಳಲ್ಲಿ ಹೊರಡಲಿದೆ. ಈ ರೈಲು ಮೈಸೂರಿಗೆ ಶನಿವಾರ ಸಂಜೆ 6ಕ್ಕೆ ಆಗಮಿಸಲಿದೆ.

## ಉಮೇಶ್ ಮೇಟಿ ಪರ ಮುನಿಯಪ್ಪ ಬಿರುಸಿನ ಬ್ಯಾಟಿಂಗ್




ಬಾಗಲಕೋಟೆ
ಉಪಚುನಾವಣೆಯ ಕಣ ರಂಗೇರುತ್ತಿದ್ದು, ಬಾಗಲಕೋಟೆ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಪರವಾಗಿ ಆಹಾರ ಸಚಿವ ಕೆ.ಎಚ್. ಮುನಿಯಪ್ಪ ನೇತೃತ್ವದಲ್ಲಿ ಬಿರುಸಿನ ಮತಯಾಚನೆ ನಡೆಯಿತು.

ಸಚಿವರೊಂದಿಗೆ ಮಾಜಿ ಸಚಿವ ಎಚ್. ಆಂಜನೇಯ ಹಾಗೂ ಮಾಜಿ ಸಂಸದ ಬಿ.ಎನ್. ಚಂದ್ರಪ್ಪ ಅವರು ಸುಮಾರು 20ಕ್ಕೂ ಹೆಚ್ಚು ಗ್ರಾಮಗಳಲ್ಲಿ ಸಂಚರಿಸಿ ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಪ್ರಚಾರ ನಡೆಸಿದರು. ಈ ಸಂದರ್ಭದಲ್ಲಿ ವಿವಿಧ ಸಮುದಾಯದ ಮತದಾರರನ್ನು ಭೇಟಿ ಮಾಡಿದ ಸಚಿವರು, ಸರ್ಕಾರದ ಸಾಧನೆಗಳನ್ನು ಮುಂದಿಟ್ಟು ಪಕ್ಷದ ಅಭ್ಯರ್ಥಿಯನ್ನು ಬೆಂಬಲಿಸುವಂತೆ ಮನವಿ ಮಾಡಿದರು.

ಕ್ಷೇತ್ರದಲ್ಲಿ ಪ್ರಚಾರ ಮುಗಿಸಿದ ನಂತರ ಸಚಿವ ಕೆ.ಎಚ್. ಮುನಿಯಪ್ಪ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಚುನಾವಣಾ ಕಣದ ಸದ್ಯದ ಪರಿಸ್ಥಿತಿ ಮತ್ತು ಪ್ರಚಾರದ ವೇಳೆ ಕಂಡುಬಂದ ಬೆಳವಣಿಗೆಗಳ ಕುರಿತು ಸುದೀರ್ಘವಾಗಿ ವಿವರಿಸಿದರು. ಕ್ಷೇತ್ರದ ಮತದಾರರ ಒಲವು ಮತ್ತು ಗೆಲುವಿನ ಸಾಧ್ಯತೆಗಳ ಬಗ್ಗೆ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು.

ಇದೇ ವೇಳೆ, ನಾಳೆ ಆಯೋಜಿಸಲಾಗಿರುವ ಬಾಬು ಜಗಜೀವನರಾಂ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಸಚಿವ ಮುನಿಯಪ್ಪ ಅವರು ಮುಖ್ಯಮಂತ್ರಿಗಳಿಗೆ ಅಧಿಕೃತವಾಗಿ ಮನವಿ ಮಾಡಿದರು. ಈ ವೇಳೆ ಮಾಜಿ ಸಚಿವ ಎಚ್. ಆಂಜನೇಯ, ಮಾಜಿ ಸಂಸದ ಬಿ.ಎನ್. ಚಂದ್ರಪ್ಪ ಹಾಗೂ ಕಾಂಗ್ರೆಸ್‌ನ ಇತರೆ ಪ್ರಮುಖ ಮುಖಂಡರು ಉಪಸ್ಥಿತರಿದ್ದರು.




ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಸರ್ವತೋಮುಖ ಅಭಿವೃದ್ಧಿಗಾಗಿ ವೀರಶೈವ ಲಿಂಗಾಯತ ಸಮಾಜವು ಎನ್‌ಡಿಎ ಅಭ್ಯರ್ಥಿ ಶ್ರೀನಿವಾಸ ಟಿ. ದಾಸಕರಿಯಪ್ಪ ಅವರ ಬೆನ್ನಿಗೆ ಗಟ್ಟಿಯಾಗಿ ನಿಲ್ಲಬೇಕು ಎಂದು ಕೇಂದ್ರ ಸಚಿವ ವಿ. ಸೋಮಣ್ಣ ಮನವಿ ಮಾಡಿದರು. ಸಭೆಯಲ್ಲಿ ಮಾಜಿ ಸಂಸದ ಜಿ.ಎಂ. ಸಿದ್ದೇಶ್ವರ, ವಿಧಾನಸಭೆ ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ್, ಮಾಜಿ ಸಚಿವರುಗಳಾದ ಮುರುಗೇಶ್ ನಿರಾಣಿ, ಸಿ.ಸಿ. ಪಾಟೀಲ್ ಹಾಗೂ ಎಂ.ಪಿ. ರೇಣುಕಾಚಾರ್ಯ ಸೇರಿದಂತೆ ಪ್ರಮುಖ ನಾಯಕರು ಭಾಗವಹಿಸಿ ಅಭ್ಯರ್ಥಿಯ ಪರವಾಗಿ ಮತಯಾಚಿಸಿದರು. ಸಮಾಜದ ಹಿರಿಯರು ಹಾಗೂ ನೂರಾರು ಸಂಖ್ಯೆಯ ಕಾರ್ಯಕರ್ತರು ಈ ಸಭೆಯಲ್ಲಿ ಪಾಲ್ಗೊಂಡು ಒಗ್ಗಟ್ಟು ಪ್ರದರ್ಶಿಸಿದರು. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಬಿಜೆಪಿ ಅಲೆ ಜೋರಾಗಿದ್ದು, ಸಮಾಜದ ಬೆಂಬಲದಿಂದ ಈ ಬಾರಿ ಬದಲಾವಣೆ ನಿಶ್ಚಿತ ಎಂದು ನಾಯಕರು ವಿಶ್ವಾಸ ವ್ಯಕ್ತಪಡಿಸಿದರು.

## 'ಬೆಲೆ ಏರಿಕೆ ನಡುವೆ ಗ್ಯಾರಂಟಿ ಮಹತ್ವ ಜನರಿಗೆ ಅರ್ಥವಾಗಿದೆ'

ಬೆಂಗಳೂರು
"ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಕಳೆದ ಬಾರಿಗಿಂತ ಹೆಚ್ಚಿನ ಮತಗಳ ಅಂತರದಿಂದ ಜಯಭೇರಿ ಬಾರಿಸಲಿದ್ದಾರೆ," ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭವಿಷ್ಯ ನುಡಿದರು.



ಶನಿವಾರ ತಮ್ಮ ಸದಾಶಿವನಗರ ನಿವಾಸದಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಉಪಚುನಾವಣೆಯ ಕಣದಲ್ಲಿ ಗ್ಯಾರಂಟಿ ಯೋಜನೆಗಳ ಪ್ರಭಾವ ದಟ್ಟವಾಗಿದೆ ಎಂದು ವಿಶ್ಲೇಷಿಸಿದರು.

ಉಪಚುನಾವಣೆ ಪ್ರಚಾರದ ಅನುಭವ ಹಂಚಿಕೊಂಡ ಡಿಸಿಎಂ, "ಬೆಲೆ ಏರಿಕೆಯ ಈ ಸಂದರ್ಭದಲ್ಲಿ ಸರ್ಕಾರದ ಗ್ಯಾರಂಟಿ ಯೋಜನೆಗಳು ಜನರಿಗೆ ಸಂಜೀವಿನಿಯಂತಿವೆ. ಕಳೆದ ಬಾರಿ ಬಿಜೆಪಿಗೆ ಮತ ಹಾಕಿದ್ದವರೂ ಈ ಬಾರಿ ಕಾಂಗ್ರೆಸ್ ಬೆಂಬಲಿಸುವುದಾಗಿ ಹೇಳುತ್ತಿದ್ದಾರೆ.

ಗ್ಯಾರಂಟಿ ಯೋಜನೆಗಳನ್ನು ಉಳಿಸಿಕೊಳ್ಳಲು ಜನ ತೀರ್ಮಾನಿಸಿದ್ದು, ನಮ್ಮ ಕಾರ್ಯಕರ್ತರು ಮನೆ ಮನೆಗೆ ತೆರಳಿ ಸರ್ಕಾರದ ಸಾಧನೆಗಳನ್ನು ಮನವರಿಕೆ ಮಾಡುತ್ತಿದ್ದಾರೆ," ಎಂದರು.

ರಾಜ್ಯದಲ್ಲಿ ಉಂಟಾಗಿರುವ ಅನಿಲ (ಗ್ಯಾಸ್) ಅಭಾವದ ಕುರಿತು ಪ್ರತಿಕ್ರಿಯಿಸಿದ ಅವರು, "ಅನಿಲ ಪೂರೈಕೆ ಸಂಪೂರ್ಣವಾಗಿ ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರುತ್ತದೆ. ಕೇಂದ್ರದ ತಪ್ಪು ನೀತಿಗಳಿಂದ ಆಟೋ ಚಾಲಕರು ಹಾಗೂ ಹೋಟೆಲ್ ಉದ್ಯಮ ಸಂಕಷ್ಟಕ್ಕೆ ಸಿಲುಕಿದೆ. ಈ ವೈಫಲ್ಯಕ್ಕೆ ಬಿಜೆಪಿ ನಾಯಕರು ಜನರ ಕ್ಷಮೆ ಕೇಳಬೇಕು," ಎಂದು ಆಗ್ರಹಿಸಿದರು.

ಕೇರಳ ಚುನಾವಣಾ ಪ್ರಚಾರದ ಬಗ್ಗೆ ಕೇಳಿದ ಪ್ರಶ್ನೆಗೆ ಉತ್ತರಿಸಿ, "ಎರಡು ದಿನಗಳ ಕಾಲ ಕೇರಳದಲ್ಲಿ ಪ್ರವಾಸ ಕೈಗೊಳ್ಳಲಿದ್ದೇನೆ. ಅಲ್ಲಿಂದ ಮರಳಿದ ಬಳಿಕ ಮತ್ತೆ ದಾವಣಗೆರೆ ಅಥವಾ ಬಾಗಲಕೋಟೆ ಕ್ಷೇತ್ರಗಳಲ್ಲಿ ಅಂತಿಮ ಹಂತದ ಪ್ರಚಾರದಲ್ಲಿ ತೊಡಗಿಸಿಕೊಳ್ಳುತ್ತೇನೆ. ಯಾರು ಇರಲಿ, ಇಲ್ಲದಿರಲಿ ನಮ್ಮ ಕರ್ತವ್ಯವನ್ನು ನಾವು ಪ್ರಾಮಾಣಿಕವಾಗಿ ಮಾಡುತ್ತೇವೆ," ಎಂದು ತಿಳಿಸಿದರು.

## ಇಂದು ಶ್ರೀ ರಾಮೇಶ್ವರ ಸ್ವಾಮಿ ಜಾತ್ರಾ ಮಹೋತ್ಸವ





ಹೊಸಕೋಟೆ
ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ತಾವರೆಕೆರೆ ಗ್ರಾಮದಲ್ಲಿ ಶ್ರೀ ರಾಮೇಶ್ವರ ಸ್ವಾಮಿ, ಸಿದ್ಧೇಶ್ವರ ಸ್ವಾಮಿ ಜಾತ್ರಾ ಮತ್ತು ಆರಾಧನಾ ಮಹೋತ್ಸವವು ಏಪ್ರಿಲ್ 5ರಂದು ಅತ್ಯಂತ ವಿಜೃಂಭಣೆಯಿಂದ ನೆರವೇರಲಿದೆ. ಈ ಐತಿಹಾಸಿಕ ಧಾರ್ಮಿಕ ಸಮಾರಂಭದ ಅಧ್ಯಕ್ಷತೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಹಿಸಲಿದ್ದಾರೆ.

ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್ ಅವರು ಕಾರ್ಯಕ್ರಮದ ಜ್ಯೋತಿ ಬೆಳಗಿಸಲಿದ್ದಾರೆ. ಕಾಗಿನೆಲೆ ಕನಕಗುರು ಪೀಠದ ಜಗದ್ಗುರು ಶ್ರೀ ನಿರಂಜನಾನಂದಪುರಿ ಸ್ವಾಮೀಜಿ ಹಾಗೂ ಹೊಸದುರ್ಗ ಕನಕಗುರು ಪೀಠದ ಶಾಖಾ ಮಠದ ಶ್ರೀ ಈಶ್ವರಾನಂದಪುರಿ ಸ್ವಾಮೀಜಿ ಅವರು ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಲಿದ್ದಾರೆ.

ಜಾತ್ರಾ ಮಹೋತ್ಸವದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ ಹಾಗೂ ಉನ್ನತ ಶಿಕ್ಷಣ ಸಚಿವ ಎಂ.ಸಿ. ಸುಧಾಕರ್ ಅವರು ವಿಶೇಷ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಇವರೊಂದಿಗೆ ಮಾಜಿ ಸಚಿವರಾದ ಬೈರತಿ ಬಸವರಾಜು, ಎಂ.ಟಿ.ಬಿ. ನಾಗರಾಜ್, ಆರ್. ಶಂಕರ್ ಮತ್ತು ವರ್ತೂರು ಪ್ರಕಾಶ್ ಅವರು ಸಹ ಭಾಗವಹಿಸಲಿದ್ದಾರೆ.

ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಲಿರುವ ಹತ್ತಕ್ಕೂ ಹೆಚ್ಚು ಜಾನಪದ ಕಲಾತಂಡಗಳು ಜಾತ್ರಾ ಮಹೋತ್ಸವದಲ್ಲಿ ತಮ್ಮ ಕಲಾ ಪ್ರದರ್ಶನ ನೀಡಲಿವೆ. ಶ್ರೀ ರಾಮೇಶ್ವರ ಸ್ವಾಮಿ, ಸಿದ್ಧೇಶ್ವರ, ಭತ್ತೇಶ್ವರ ಹಾಗೂ ವದಲಿ ರಾಮೇಶ್ವರ ಸ್ವಾಮಿ ದೇವರ ಆರಾಧನಾ ಮಹೋತ್ಸವವು ಭಕ್ತಿಭಾವದೊಂದಿಗೆ ನಡೆಯಲಿದ್ದು, ಸಾವಿರಾರು ಭಕ್ತರು ಸಾಕ್ಷಿಯಾಗಲಿದ್ದಾರೆ. ಕಾರ್ಯಕ್ರಮದಲ್ಲಿ ಶಾಸಕರಾದ ಡಾ. ಯತೀಂದ್ರ ಸಿದ್ದರಾಮಯ್ಯ, ಶರತ್ ಬಚ್ಚೇಗೌಡ, ಎಂ.ಆರ್. ಮಂಜುನಾಥ್, ಎಸ್.ಆರ್. ವಿಶ್ವನಾಥ್, ಕೆ.ವೈ. ನಂಜೇಗೌಡ ಸೇರಿದಂತೆ ಹತ್ತಾರು ಜನಪ್ರತಿನಿಧಿಗಳು ಹಾಗೂ ಗಣ್ಯರು ಉಪಸ್ಥಿತರಿರಲಿದ್ದಾರೆ.

## ಹಲ್ಲೆ ನಡೆಸಿದವರ ವಿರುದ್ಧ ಕಾನೂನು ಕ್ರಮಕ್ಕೆ ಆಗ್ರಹ

ಬಳ್ಳಾರಿ
ಮಹಾನಗರ ಪಾಲಿಕೆ ಪ್ರಭಾರಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಜೆ.ಎಂ.ವೀರೇಶ್ ಅವರ ಮೇಲೆ ದೈಹಿಕ ಹಲ್ಲೆ ನಡೆಸಿರುವವರ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ ಆಗ್ರಹಿಸಿ ಇಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದಿಂದ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಲಾಯಿತು.

ಇದೇ 3ರ ಶುಕ್ರವಾರದಂದು ಅಪರಾಹ್ನ ಬಳ್ಳಾರಿ ಮಹಾನಗರ ಪಾಲಿಕೆ ಪ್ರಭಾರಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಜೆ.ಎಂ. ವೀರೇಶ ಇವರ ಮೇಲೆ ಬಳ್ಳಾರಿ ಮಹಾನಗರ ಪಾಲಿಕೆ ಸದಸ್ಯ ಹಾಗೂ ಇತರರು ನಡೆಸಿರುವ ದೈಹಿಕ ಹಲ್ಲೆಯನ್ನು ಕರ್ನಾಟಕ ಸರ್ಕಾರಿ ನೌಕರರ ಸಂಘ ಬಳ್ಳಾರಿ ಜಿಲ್ಲಾ ಘಟಕವು ತೀವ್ರವಾಗಿ ಖಂಡಿಸುತ್ತದೆ. ಸದರಿ ಘಟನೆಯು ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಅಧಿಕಾರಿ, ನೌಕರರಿಗೆ ಆಘಾತವನ್ನು ಉಂಟು ಮಾಡಿದೆ. ಭಯ ಭೀತಿಯಿಂದ ಕೆಲಸವನ್ನು ಮಾಡಬೇಕಾಗಿರುವ ಅನಿವಾರ್ಯತೆ ಸೃಷ್ಟಿಯಾಗಿದೆ.

ಆದ್ದರಿಂದ. ತಪ್ಪಿತಸ್ಥ ಮಹಾನಗರ ಪಾಲಿಕೆ ಸದಸ್ಯನ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದೆ.ಒಬ್ಬ ಸರ್ಕಾರಿ ನೌಕರನ ಮೇಲೆ ಸಾರ್ವಜನಿಕವಾಗಿ ನಡೆದ ಈ ದೌರ್ಜನ್ಯವು ನೌಕರರ ವಲಯದಲ್ಲಿ ಆಭದ್ರತೆಯ ಭಾವನೆಯನ್ನು ಮೂಡಿಸಿದೆ. ಜಿಲ್ಲೆಯ ಸಮಸ್ತ ಸರ್ಕಾರಿ ನೌಕರರು ಭಯಮುಕ್ತ ವಾತವರಣದಲ್ಲಿ ಕರ್ತವ್ಯ ನಿರ್ವಹಿಸಲು ಸೂಕ್ತ ಕಾನೂನು ಕ್ರಮ ಕೈಗೊಳ್ಳುವ ಮೂಲಕ ನೌಕರರ ಮನೋಸ್ಥೈರ್ಯ ಹೆಚ್ಚಿಸಬೇಕು. ಇಂತಹ ಘಟನೆಗಳು ಮರುಕಳಿಸದಂತೆ ಜಿಲ್ಲಾಡಳಿತವು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಜಿಲ್ಲೆಯ ಸಮಸ್ತ ನೌಕರರ ಪರವಾಗಿ ಸರ್ಕಾರಿ ನೌಕರರ ಸಂಘ ಜಿಲ್ಲಾ ಘಟಕದ ಪದಾಧಿಕಾರಿಗಳಾದ ಸದಾನಂದ ನೆಲ್ಕುದ್ರಿ, ತಿಪ್ಪಾರೆಡ್ಡಿ ಜಿ.ವೈ., ಡಾ.ರಾಜಶೇಖರ ಗಾಣಿಗೇರ ಸೇರಿದಂತೆ ಹಲವರು ಮನವಿ ಸಲ್ಲಿಸಿದ್ದಾರೆ.



## ಮಹಿಳೆಯರಿಗೆ ಅಕ್ಕಮಹಾದೇವಿ ಸಾರ್ವಕಾಲಿಕ ಪ್ರೇರಣೆ: ಸಚಿವ ಈಶ್ವರ ಖಂಡ್ರೆ ಅಭಿಮತ

ದಾವಣಗೆರೆ
"12ನೇ ಶತಮಾನದಲ್ಲೇ ವಿಚಾರ ಸ್ವಾತಂತ್ರ್ಯವನ್ನು ಪ್ರತಿಪಾದಿಸಿದ ಶರಣೆ ಅಕ್ಕಮಹಾದೇವಿ ಅವರು ಇಂದಿಗೂ ವಿಶ್ವದ ಸಮಸ್ತ ಮಹಿಳೆಯರಿಗೆ ಆದರ್ಶವಾಗಿದ್ದಾರೆ," ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ತಿಳಿಸಿದರು.

ನಗರದ ದೊಡ್ಡಪೇಟೆಯ ಶ್ರೀ ವಿರಕ್ತಮಠದ ಬಸವ ಕೇಂದ್ರದಲ್ಲಿ ಜಾಗತಿಕ ಲಿಂಗಾಯತ ಮಹಾಸಭಾ ಆಯೋಜಿಸಿದ್ದ 'ಅಕ್ಕಮಹಾದೇವಿ ಜಯಂತಿ' ಕಾರ್ಯಕ್ರಮವನ್ನುದ್ದೇಶಿಸಿ ಅವರು ಮಾತನಾಡಿದರು.

ಮಹಿಳಾ ಸಮಾನತೆ ಇಲ್ಲದ ಕಾಲಘಟ್ಟದಲ್ಲೂ ಸ್ತ್ರೀಯರಿಗೆ ಸಮಾಜದಲ್ಲಿ ಸಮಾನ ಸ್ಥಾನಮಾನ ಸಿಗಬೇಕು ಎಂದು ಪ್ರತಿಪಾದಿಸಿದ ಅಕ್ಕಮಹಾದೇವಿ, ನೀತಿ ನಿರೂಪಣೆಯಲ್ಲಿ ಮಹಿಳೆಯ ಪಾತ್ರ ಮಹತ್ವದ್ದು ಎಂಬುದನ್ನು ಸಾಬೀತುಪಡಿಸಿದರು. "ತನ್ನ ವಿಚಾರ ಸ್ವಾತಂತ್ರ್ಯಕ್ಕಾಗಿ ಮಾತು ತಪ್ಪಿದ ಗಂಡನನ್ನೇ ಧಿಕ್ಕರಿಸಿದ ಅಕ್ಕನ ಧೈರ್ಯ ಇಂದಿನ ಸ್ತ್ರೀಕುಲಕ್ಕೆ ದೊಡ್ಡ ಪಾಠ," ಎಂದು ಸಚಿವರು ಬಣ್ಣಿಸಿದರು.




ಚೆನ್ನಮಲ್ಲಿಕಾರ್ಜುನ ಅಂಕಿತದೊಂದಿಗೆ ಸಮಾಜಕ್ಕೆ ವಚನಾಮೃತವನ್ನು ಉಣಬಡಿಸಿದ ಅಕ್ಕಮಹಾದೇವಿಯ ಕೊಡುಗೆ ಸಾಹಿತ್ಯ ಲೋಕಕ್ಕೆ ಅಪ್ರತಿಮವಾದುದು. ಅನುಭವ ಮಂಟಪದಲ್ಲಿ ಅವರು ಎದುರಿಸಿದ ಪ್ರಶ್ನೆಗಳು ಹಾಗೂ ನೀಡಿದ ಉತ್ತರಗಳು ಅವರ ಜ್ಞಾನ ಮತ್ತು ವೈರಾಗ್ಯದ ಔನ್ನತ್ಯವನ್ನು ಸಾರುತ್ತವೆ ಎಂದು ಸಚಿವರು ಸ್ಮರಿಸಿದರು.

ಬದುಕಿನಲ್ಲಿ ಎದುರಾಗುವ ಎಷ್ಟೇ ಕಷ್ಟಗಳನ್ನು ಎದೆಗುಂದದೆ ಎದುರಿಸಬೇಕು ಮತ್ತು ಜಯಿಸಬೇಕು ಎಂದು ಅಕ್ಕಮಹಾದೇವಿ ಸಾರಿದ್ದಾರೆ. ಈ ಚಿಂತನೆಗಳು ಇಂದಿಗೂ ಪ್ರಸ್ತುತವಾಗಿದ್ದು, ನಾವೆಲ್ಲರೂ ಅಕ್ಕನ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಸಚಿವರುಗಳಾದ ಎಂ.ಬಿ. ಪಾಟೀಲ್, ಶರಣಪ್ರಕಾಶ ಪಾಟೀಲ್ ಸೇರಿದಂತೆ ಹಲವು ಗಣ್ಯರು ಹಾಗೂ ಜಾಗತಿಕ ಲಿಂಗಾಯತ ಮಹಾಸಭಾದ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಕಣ್ಮನ ಸೆಳೆದ ಶ್ರೀ ಕರಗದಮ್ಮದೇವಿ ಮಹೋತ್ಸವ

ಶಿಡ್ಲಘಟ್ಟ
ನಗರದ ಐತಿಹಾಸಿಕ ಮುತ್ತೂರು ಬೀದಿಯಲ್ಲಿರುವ ಶ್ರೀ ಕರಗದಮ್ಮದೇವಿ ಹೂವಿನ ಕರಗ ಮಹೋತ್ಸವವು ಬುಧವಾರ ರಾತ್ರಿ ಅತ್ಯಂತ ಸಡಗರ ಹಾಗೂ ವಿಜೃಂಭಣೆಯಿಂದ ನೆರವೇರಿತು. ಸಾವಿರಾರು ಭಕ್ತರು ಈ ಧಾರ್ಮಿಕ ಸಂಭ್ರಮಕ್ಕೆ ಸಾಕ್ಷಿಯಾದರು.

ಕರಗದ ಪ್ರಯುಕ್ತ ದೇವಸ್ಥಾನವನ್ನು ವಿವಿಧ ಪುಷ್ಪಗಳಿಂದ ಹಾಗೂ ಆಕರ್ಷಕ ವಿದ್ಯುತ್ ದೀಪಗಳಿಂದ ಅಲಂಕರಿಸಲಾಗಿತ್ತು. ದೇವಿಗೆ ವಿಶೇಷ ಪೂಜೆ, ಮಹಾಮಂಗಳಾರತಿ ನೆರವೇರಿಸಿ ಭಕ್ತರಿಗೆ ತೀರ್ಥ ಪ್ರಸಾದ ವಿನಿಯೋಗ ಮಾಡಲಾಯಿತು.

ಸಂಪ್ರದಾಯದಂತೆ ಪೂಜಾ ವಿಧಿವಿಧಾನಗಳ ನಂತರ ಹೂವಿನ ಕರಗಕ್ಕೆ ಚಾಲನೆ ನೀಡಲಾಯಿತು.

ಕೋಲಾರದ ರಾಜಕಲ್ಲಹಳ್ಳಿಯ ಪ್ರತಾಪ್ ಅವರು ಹೂವಿನ ಕರಗವನ್ನು ಹೊತ್ತು ಭಕ್ತಿಭಾವದಿಂದ ದೇವಸ್ಥಾನದ ಸುತ್ತ ಪ್ರದಕ್ಷಿಣೆ ಹಾಕಿದರು. ನಂತರ ನಗರದ ಪ್ರಮುಖ ಬೀದಿಗಳಲ್ಲಿ ಕರಗದ ಮೆರವಣಿಗೆ ಸಾಗಿತು.



ಕರಗ ಸಾಗುವ ಹಾದಿಯುದ್ದಕ್ಕೂ ಸಾರ್ವಜನಿಕರು ರಸ್ತೆಗಳನ್ನು ಸ್ವಚ್ಛಗೊಳಿಸಿ, ರಂಗೋಲಿ ಬಿಡಿಸಿ ಸ್ವಾಗತಿಸಿದರು. ಮನೆ ಮುಂದೆ ಕರಗ ಬರುತ್ತಿದ್ದಂತೆಯೇ ಭಕ್ತರು ದೀಪಾರತಿ ಬೆಳಗಿ ಪೂಜೆ ಸಲ್ಲಿಸಿದರು.

ಕರಗದಿಂದ ಉದುರಿದ ಮಲ್ಲಿಗೆ ಹೂವುಗಳನ್ನು ಪ್ರಸಾದದ ರೂಪದಲ್ಲಿ ಸ್ವೀಕರಿಸಿ ಭಕ್ತರು ಧನ್ಯತೆ ಅನುಭವಿಸಿದರು.

ಹೂವಿನ ವೃತ್ತ ಹಾಗೂ ದೇವಾಲಯದ ಬಳಿ ವಿಶೇಷವಾಗಿ ವೇದಿಕೆ ನಿರ್ಮಿಸಿ ಆರ್ಕೆಸ್ಟ್ರಾ ಹಾಗೂ ರಸಸಂಜೆ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ಕನ್ನಡ, ತೆಲುಗು ಮತ್ತು ತಮಿಳು ಚಿತ್ರಗೀತೆಗಳಿಗೆ ಕರಗ ಹೊತ್ತ ಕಲಾವಿದರು ಮಾಡಿದ ನೃತ್ಯ ನೋಡುಗರ ಕಣ್ಮನ ಸೆಳೆಯಿತು.

ಭಕ್ತರು ಈ ದೃಶ್ಯಗಳನ್ನು ತಮ್ಮ ಮೊಬೈಲ್‌ಗಳಲ್ಲಿ ಸೆರೆಹಿಡಿದು ಸಂಭ್ರಮಿಸಿದರು.

ನಗರದ ಅಶೋಕ ರಸ್ತೆ, ಶಾಮಣ್ಣ ಬಾವಿ ರಸ್ತೆ ಸೇರಿದಂತೆ ಹಲವು ಬಡಾವಣೆಗಳನ್ನು ದೀಪಾಲಂಕಾರದಿಂದ ಸಿಂಗರಿಸಲಾಗಿತ್ತು. ನಗರದ ಇತರ ದೇವಾಲಯಗಳಲ್ಲೂ ಈ ಸಂದರ್ಭದಲ್ಲಿ ವಿಶೇಷ ಪೂಜೆಗಳು ನಡೆದವು.

## ಭಾರತಿ.ಜಿ ಬಿಜೆಪಿ ಪ್ರಧಾನ ಕಾರ್ಯದರ್ಶಿಯಾಗಿ ನೇಮಕ



ಬಳ್ಳಾರಿ
ಭಾರತೀಯ ಜನತಾ ಪಾರ್ಟಿಯನ್ನು ಜಿಲ್ಲೆಯಲ್ಲಿ ಸಂಘಟಿಸಿ ಬೂತ್ ಮಟ್ಟದಲ್ಲಿ ಕಟ್ಟಿ ಬೆಳೆಸುವ ನಿಟ್ಟಿನಲ್ಲಿ ಹೊಸ ಪಡೆ ರಚಿಸಲಾಗಿದ್ದು ಮಹಿಳಾ ಘಟಕದ ಜಿಲ್ಲಾ ಪ್ರಧಾನ ಕಾರ್ಯದರ್ಶಿಯಾಗಿ ಶ್ರೀಮತಿ ಭಾರತಿ ಜಿ. ಅವರು ನೇಮಕವಾಗಿದ್ದಾರೆ.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ಹಂಪಿ ರಮಣ ಅವರು ಈ ಕುರಿತು ಪ್ರಕಟಣೆ ನೀಡಿದ್ದು, ಪಕ್ಷ ಬಲವರ್ಧನೆಗಾಗಿ ಜಿಲ್ಲಾ ಮಹಿಳಾ ಮೋರ್ಚಾದ ನೂತನ ಪದಾಧಿಕಾರಿಗಳನ್ನಾಗಿ ಪ್ರಮುಖರನ್ನು ನಿಯುಕ್ತಿಗೊಳಿಸಿದ್ದಾರೆ. ಶಾಂತಾಬಾಯಿ, ರೂಪಾ, ಗೀತಾ, ಜಯಲಕ್ಷ್ಮೀ ಐಟಿ ಸೆಲ್ ಸಂಚಾಲಕರಾಗಿ ಅಪೂರ್ವ, ಸಾಮಾಜಿಕ ಜಾಲತಾಣ ಸಂಚಾಲಕರಾಗಿ ವನಜಾಕ್ಷಿ ಅವರನ್ನು ನೇಮಕ ಮಾಡಲಗಿದೆ ಎಂದು ಅವರು ತಿಳಿಸಿದ್ದಾರೆ.

## ದಾವಣಗೆರೆ–ಬಾಗಲಕೋಟೆ ಕೈಜಾರುವ ಭೀತಿ: ಬಿ.ವೈ. ವಿಜಯೇಂದ್ರ ವ್ಯಂಗ್ಯ

ದಾವಣಗೆರೆ
"ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಕ್ಷೇತ್ರಗಳು ಕಾಂಗ್ರೆಸ್ ಕೈಜಾರುತ್ತಿವೆ ಎಂಬ ಭಯದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನಿದ್ರೆ ಬಾರದಂತಾಗಿದೆ," ಎಂದು ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಾಸಕ ಬಿ.ವೈ. ವಿಜಯೇಂದ್ರ ವಿಶ್ಲೇಷಿಸಿದ್ದಾರೆ.

ನಗರದಲ್ಲಿ ಆಯೋಜಿಸಿದ್ದ 'ಹಿಂದುಳಿದವರ ನಡೆ ಬಿಜೆಪಿಯ ಕಡೆ' ಸಮಾವೇಶದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಭ್ರಷ್ಟಾಚಾರದ ಹಣದ ಮೂಲಕ ಮತ ಸೆಳೆಯಲು ಕಾಂಗ್ರೆಸ್ ಯತ್ನಿಸುತ್ತಿದೆ ಎಂದು ಆರೋಪಿಸಿದ ವಿಜಯೇಂದ್ರ, "ಇಲ್ಲಿ ಶಾಮನೂರು ಅವರ ನೋಟು ಹಂಚಿಕೆಯಾಗುತ್ತಿದೆ. ಆದರೆ ಜನರು 'ಶಾಮನೂರು ಅವರ ನೋಟು, ಬಿಜೆಪಿಗೆ ವೋಟು' ಎಂಬ ಸಂಕಲ್ಪ ಮಾಡಿದ್ದಾರೆ. ಭ್ರಷ್ಟಾಚಾರದ ಹಣದಿಂದ ಮತದಾರರನ್ನು ಗೆಲ್ಲಲು ಸಾಧ್ಯವಿಲ್ಲ," ಎಂದು ಗುಡುಗಿದರು. ಇದೇ ವೇಳೆ ಕಾರ್ಯಕರ್ತರು ಕೂಡ ಇದೇ ಘೋಷಣೆಗಳನ್ನು ಕೂಗಿ ಬೆಂಬಲ ವ್ಯಕ್ತಪಡಿಸಿದರು.



ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ಸರ್ಕಾರ ಲೂಟಿ ಮಾಡಿದೆ ಎಂದು ಆರೋಪಿಸಿದ ಅವರು, ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಕಾಂಗ್ರೆಸ್‌ಗೆ ಇಲ್ಲ ಎಂದರು. "ಯಡಿಯೂರಪ್ಪ ಅವರು ಸಿಎಂ ಆಗಿದ್ದಾಗ ಹಿಂದುಳಿದ ವರ್ಗಗಳ ನಿಗಮಗಳಿಗೆ 550 ಕೋಟಿ ರೂಪಾಯಿ ನೀಡಿದ್ದರು. ಆದರೆ ಸಿದ್ದರಾಮಯ್ಯ ಸರ್ಕಾರ ಕೇವಲ 200–250 ಕೋಟಿ ರೂಪಾಯಿ ನೀಡುವ ಮೂಲಕ ಹಿಂದುಳಿದ ವರ್ಗಗಳನ್ನು ಕೇವಲ ಮತಬ್ಯಾಂಕ್ ಆಗಿ ಬಳಸಿಕೊಳ್ಳುತ್ತಿದೆ," ಎಂದು ಟೀಕಿಸಿದರು.

ಎರಡೂ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಗೆದ್ದೇ ಗೆಲ್ಲುವ ವಾತಾವರಣ ನಿರ್ಮಾಣವಾಗಿದೆ. ಎಚ್.ಡಿ. ಕುಮಾರಸ್ವಾಮಿ ಅವರ ನೇತೃತ್ವದಲ್ಲಿ ಜೆಡಿಎಸ್ ಕಾರ್ಯಕರ್ತರು ಕೂಡ ಬಿಜೆಪಿ ಅಭ್ಯರ್ಥಿಗಳ ಗೆಲುವಿಗೆ ಶಕ್ತಿ ತುಂಬುತ್ತಿದ್ದಾರೆ. ದಾವಣಗೆರೆ ದಕ್ಷಿಣದ ಬಿಜೆಪಿ ಅಭ್ಯರ್ಥಿ ಶ್ರೀನಿವಾಸದಾಸ ಕರಿಯಪ್ಪ ಅವರನ್ನು ಗೆಲ್ಲಿಸಲು ಸರ್ವ ಸಮಾಜದ ಜನರು ಸಂಕಲ್ಪ ತೊಟ್ಟಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಮಾವೇಶದ ಯಶಸ್ವಿಗಾಗಿ ಶ್ರಮಿಸಿದ ರಾಜ್ಯ ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ರಘು ಕೌಟಿಲ್ಯ ಹಾಗೂ ಪದಾಧಿಕಾರಿಗಳನ್ನು ಇದೇ ಸಂದರ್ಭದಲ್ಲಿ ಅಭಿನಂದಿಸಿದರು.

27/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಇಂದಿನಿಂದಲೇ 'ಒನ್ ಟೈಮ್ ಸೆಟಲ್‌ಮೆಂಟ್' ಜಾರಿ



ಬೆಂಗಳೂರು

ದೀರ್ಘಕಾಲದಿಂದ ನೀರಿನ ಬಿಲ್ ಬಾಕಿ ಉಳಿಸಿಕೊಂಡಿರುವ ಬೆಂಗಳೂರು ನಗರದ ಗ್ರಾಹಕರಿಗೆ ಜಲಮಂಡಳಿಯು ಯುಗಾದಿ ಹಬ್ಬದ ವಿಶೇಷ ಕೊಡುಗೆ ನೀಡಿದೆ. ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಘೋಷಣೆಯಂತೆ, 'ಒನ್ ಟೈಮ್ ಸೆಟಲ್‌ಮೆಂಟ್' ಯೋಜನೆ ಇಂದಿನಿಂದ (ಏಪ್ರಿಲ್ 6) ಅಧಿಕೃತವಾಗಿ ಆರಂಭವಾಗಿದ್ದು, ಈ ತಿಂಗಳ ನೀರಿನ ಬಿಲ್ ಜೊತೆಯಲ್ಲೇ ಬಾಕಿ ಪಾವತಿಯ ನೋಟಿಸ್ ನೀಡಲಾಗುವುದು ಎಂದು ಬಿಡಬ್ಲ್ಯೂಎಸ್‌ಎಸ್‌ಬಿ ಅಧ್ಯಕ್ಷ ಡಾ. ರಾಮ್ ಪ್ರಸಾತ್ ಮನೋಹರ್ ತಿಳಿಸಿದ್ದಾರೆ.

ಮೊದಲು ಮಲ್ಲೇಶ್ವರಂ ವಿಭಾಗದ ಸರ್ಕಾರಿ ಬಾಲಕರ ಪದವಿ ಪೂರ್ವ ಕಾಲೇಜಿಗೆ ಭೇಟಿ ನೀಡಿದ ಅವರು, ತರಬೇತಿ ನಡೆಯುತ್ತಿದ್ದ ತರಗತಿಯಲ್ಲಿ ಗಣತಿದಾರರು ಹಾಗೂ ಮೇಲ್ವಿಚಾರಕರೊಂದಿಗೆ ಕುಳಿತುಕೊಂಡು ತರಬೇತಿ ಕ್ರಮಗಳನ್ನು ಸಮಗ್ರವಾಗಿ ವೀಕ್ಷಿಸಿದರು. ತರಬೇತಿಯ ಗುಣಮಟ್ಟ, ವಿಷಯವಸ್ತುಗಳ ಅರ್ಥೈಸುವಿಕೆ ಹಾಗೂ ಕಾರ್ಯಪದ್ಧತಿಯ ಅನುಷ್ಠಾನ ಕುರಿತು ಮಾಹಿತಿ ಪಡೆದುಕೊಂಡರು.

ಈ ವೇಳೆ ಮಾತನಾಡಿದ ಅವರು, ಜನಗಣತಿ ದೇಶದ ಅತ್ಯಂತ ಮಹತ್ವದ ರಾಷ್ಟ್ರೀಯ ಕಾರ್ಯಕ್ರಮವಾಗಿದ್ದು, ಪ್ರತಿಯೊಬ್ಬ ಗಣತಿದಾರರು ತಮ್ಮ ಕರ್ತವ್ಯಗಳನ್ನು ಅತ್ಯಂತ ಜವಾಬ್ದಾರಿಯಿಂದ, ನಿಷ್ಠೆಯಿಂದ ಮತ್ತು ನಿಖರತೆಯಿಂದ ನಿರ್ವಹಿಸಬೇಕೆಂದು ತಿಳಿಸಿದರು.

ತರಬೇತಿ ಕೇಂದ್ರದಲ್ಲಿ ಗಣತಿದಾರರೊಂದಿಗೆ ಸಂವಾದ ನಡೆಸಿ, ಅವರ ಅನುಭವಗಳು ಹಾಗೂ ಅಭಿಪ್ರಾಯಗಳನ್ನು ಆಲಿಸಿದರು. ಟೀ ಸೇವನೆಯ ವೇಳೆ ಎಲ್ಲರೂ ತಪ್ಪದೇ ಸ್ವಯಂ ಗಣತಿ ಪ್ರಕ್ರಿಯೆಯನ್ನು ಸರಿಯಾಗಿ ಅನುಸರಿಸಿ, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವಂತೆ ಸೂಚಿಸಿದರು. ಡಿಜಿಟಲ್ ವಿಧಾನಗಳ ಬಳಕೆ, ಮಾಹಿತಿಯ ನಿಖರತೆ ಹಾಗೂ ಸಮಯಪಾಲನೆಯ ಮಹತ್ವವನ್ನು ವಿಶೇಷವಾಗಿ ಒತ್ತಿ ಹೇಳಿದರು.

ಮುಂದುವರಿದು ರಾಜಾಜಿನಗರದ ಕೆ.ಎಲ್.ಇ. ನಿಜಲಿಂಗಪ್ಪ ಕಾಲೇಜಿಗೆ ಭೇಟಿ ನೀಡಿದ ಅವರು, ಅಲ್ಲಿನ ತರಬೇತಿ ಕಾರ್ಯವನ್ನು ಪರಿಶೀಲಿಸಿ ಅಗತ್ಯ ಸೂಚನೆಗಳನ್ನು ನೀಡಿದರು.


ಗೋವಿಂದರಾಜನಗರ ವಿಭಾಗದ ಗಣತಿದಾರರು ಹಾಗೂ ಮೇಲ್ವಿಚಾರಕರೊಂದಿಗೆ ಭೋಜನ ಮಾಡಿ, ಅವರೊಂದಿಗೆ ಸ್ನೇಹಪೂರ್ಣವಾಗಿ ಮಾತುಕತೆ ನಡೆಸಿ, ಕಾರ್ಯನಿರ್ವಹಣೆಯಲ್ಲಿ ಎದುರಾಗುವ ಸವಾಲುಗಳು ಹಾಗೂ ಅವುಗಳಿಗೆ ಪರಿಹಾರಗಳ ಬಗ್ಗೆ ಚರ್ಚಿಸಿದರು. ಜನಗಣತಿ ಕಾರ್ಯವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲು ಎಲ್ಲರೂ ಸಮನ್ವಯದಿಂದ ಮತ್ತು ಸಕ್ರಿಯವಾಗಿ ಭಾಗವಹಿಸುವಂತೆ ಸಿಬ್ಬಂದಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಜಂಟಿ ಆಯುಕ್ತರಾದ ಸಂಗಪ್ಪ, ವಿವಿಧ ವಿಭಾಗಗಳ ಕಾರ್ಯಪಾಲಕ ಅಭಿಯಂತರರು, ಕಂದಾಯ ಅಧಿಕಾರಿಗಳು, ಚಾರ್ಜ್ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿ ಉಪಸ್ಥಿತರಿದ್ದರು.

# ಕೇಂದ್ರ ಪಾಲಿಕೆ ವ್ಯಾಪ್ತಿಯಲ್ಲಿ ಸ್ವಚ್ಛತಾ ಕ್ರಾಂತಿ: ವಾರಕ್ಕೆ 10 ಕಿ.ಮೀ ಗುರಿ

ಬೆಂಗಳೂರು

"ನಗರದ ನೈರ್ಮಲ್ಯ ಕಾಪಾಡಲು ನಿರಂತರ ಸಾಮೂಹಿಕ ಸ್ವಚ್ಛತೆ ಅತ್ಯಗತ್ಯ. ಕೇಂದ್ರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಪ್ರತಿ ವಾರ ಕನಿಷ್ಠ 10 ಕಿಲೋಮೀಟರ್ ಮಾರ್ಗವನ್ನು ಸಾಮೂಹಿಕವಾಗಿ ಸ್ವಚ್ಛಗೊಳಿಸುವ ಗುರಿ ಹೊಂದಲಾಗಿದೆ," ಎಂದು ಪಾಲಿಕೆ ಆಯುಕ್ತ ರಾಜೇಂದ್ರ ಚೋಳನ್ ತಿಳಿಸಿದ್ದಾರೆ.



ನಗರದ ವಿವಿಧ ಕ್ಷೇತ್ರಗಳಲ್ಲಿ ಸೋಮವಾರ ಹಮ್ಮಿಕೊಳ್ಳಲಾಗಿದ್ದ ವಿಶೇಷ ಸ್ವಚ್ಛತಾ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ನಾಗರಿಕರಿಗೆ ಆರೋಗ್ಯಕರ ಪರಿಸರ ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯು ಬ್ಲ್ಯಾಕ್ ಸ್ಪಾಟ್‌ಗಳ ನಿರ್ಮೂಲನೆಗೆ ಹೆಚ್ಚಿನ ಆದ್ಯತೆ ನೀಡುತ್ತಿದೆ ಎಂದರು.

ಅಭಿವೃದ್ಧಿ ಅಪರ ಆಯುಕ್ತ ದಲ್ಜಿತ್ ಕುಮಾರ್ ಅವರ ಮಾರ್ಗದರ್ಶನದಲ್ಲಿ ನಡೆದ ಈ ಬೃಹತ್ ಕಾರ್ಯಾಚರಣೆಯಲ್ಲಿ ಚಾಮರಾಜಪೇಟೆ, ಚಿಕ್ಕಪೇಟೆ, ಗಾಂಧಿನಗರ ಸೇರಿದಂತೆ ಪ್ರಮುಖ ಕ್ಷೇತ್ರಗಳಲ್ಲಿ ಸ್ವಚ್ಛತೆ ಮಾಡಲಾಯಿತು.

ಕಾರ್ಯಾಚರಣೆ ವ್ಯಾಪ್ತಿ: ಒಟ್ಟು 4.05 ಕಿಲೋಮೀಟರ್ ರಸ್ತೆ ಸ್ವಚ್ಛಗೊಳಿಸಲಾಗಿದೆ.

ಯಂತ್ರೋಪಕರಣಗಳ ಬಳಕೆ: 3 ಜೆಸಿಬಿ ಹಾಗೂ 27 ಟ್ರ್ಯಾಕ್ಟರ್‌ಗಳನ್ನು ಬಳಸಿ ರಸ್ತೆ ಬದಿಗಳಲ್ಲಿದ್ದ 32 ಲೋಡ್ ತ್ಯಾಜ್ಯವನ್ನು ತೆರವುಗೊಳಿಸಲಾಯಿತು.

ಸಿಬ್ಬಂದಿ ಶಕ್ತಿ: 135 ಪೌರಕಾರ್ಮಿಕರು ಹಾಗೂ ಸ್ವಚ್ಛತಾ ಸಿಬ್ಬಂದಿ ಈ ಶ್ರಮದಾನದಲ್ಲಿ ಪಾಲ್ಗೊಂಡಿದ್ದರು.

ಎಲ್ಲೆಲ್ಲಿ ಸ್ವಚ್ಛತೆ?

ಚಾಮರಾಜಪೇಟೆ: ಬಿಬಿಎಂಪಿ ಸಮುದಾಯ ಭವನ ಹಾಗೂ 9ನೇ ಅಡ್ಡರಸ್ತೆ.

ಚಿಕ್ಕಪೇಟೆ: ಕಲಾಸಿಪಾಳ್ಯದ 1, 2 ಮತ್ತು 3ನೇ ಮುಖ್ಯರಸ್ತೆ ಹಾಗೂ ಕುಂಬಾರಗುಂಡಿ ಪ್ರದೇಶ.

ಗಾಂಧಿನಗರ: ಎಂ.ಇ.ಟಿ ಸ್ಟ್ರೀಟ್ ಮತ್ತು ಅಡ್ಡರಸ್ತೆಗಳು.

ಶಾಂತಿನಗರ: ಚರ್ಚ್ ಸ್ಟ್ರೀಟ್ ಮತ್ತು ಸುತ್ತಮುತ್ತ ಪಾದಚಾರಿ ಮಾರ್ಗಗಳ ಒತ್ತುವರಿ ತೆರವು.


ಶಿವಾಜಿನಗರ: ಚಿನ್ನಪ್ಪ ಗಾರ್ಡನ್ ಮತ್ತು ಲಿಂಕ್ ರೋಡ್‌ಗಳು.

ಸಿ.ವಿ. ರಾಮನ್ ನಗರ: ಹಳೆಯ ಮದ್ರಾಸ್ ರಸ್ತೆಯಿಂದ ದೊಮ್ಮಲೂರು ಫ್ಲೈಓವರ್‌ವರೆಗೆ. "ನಗರ ಪಾಲಿಕೆ ಕಸ ಸಂಗ್ರಹಣೆಗೆ ಸಾಕಷ್ಟು ಕ್ರಮಗಳನ್ನು ಕೈಗೊಳ್ಳುತ್ತಿದೆ. ಸಾರ್ವಜನಿಕರು ರಸ್ತೆ ಬದಿ ಅಥವಾ ಸಾರ್ವಜನಿಕ ಸ್ಥಳಗಳಲ್ಲಿ ಕಸ ಎಸೆಯಬಾರದು. ನಿಗದಿತ ಸ್ಥಳಗಳಲ್ಲಿ ಮಾತ್ರ ತ್ಯಾಜ್ಯ ವಿಲೇವಾರಿ ಮಾಡುವ ಮೂಲಕ ನಗರವನ್ನು ಸುಂದರವಾಗಿಡಲು ಸಹಕರಿಸಬೇಕು," ಎಂದು ರಾಜೇಂದ್ರ ಚೋಳನ್ ಮನವಿ ಮಾಡಿದರು. ಈ ವಿಶೇಷ ಅಭಿಯಾನದಲ್ಲಿ ಅರಣ್ಯ, ತೋಟಗಾರಿಕೆ ಇಲಾಖೆ ಹಾಗೂ ಪಾಲಿಕೆಯ ವಿವಿಧ ಹಂತದ ಅಧಿಕಾರಿಗಳು ಭಾಗವಹಿಸಿದ್ದರು.

# 8ರಂದು ಬೃಹತ್ 'ಜನಸ್ಪಂದನ' ಸಭೆ; ಅಹವಾಲುಗಳ ವಿಲೇವಾರಿಗೆ ಡಿಸಿ ಸೂಚನೆ

ತುಮಕೂರು

ಸಾರ್ವಜನಿಕರ ಸಮಸ್ಯೆಗಳಿಗೆ ಗರಿಷ್ಠ ಮಟ್ಟದ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಇದೇ 8ರಂದು ನಗರದ ಕೇಂದ್ರ ಗ್ರಂಥಾಲಯದಲ್ಲಿ ಹಮ್ಮಿಕೊಳ್ಳಲಾಗಿರುವ 'ಜನಸ್ಪಂದನ' ಕಾರ್ಯಕ್ರಮಕ್ಕೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.



ಶುಕ್ರವಾರ ಕಾರ್ಯಕ್ರಮದ ಪೂರ್ವಸಿದ್ಧತೆಗಳನ್ನು ಪರಿಶೀಲಿಸಿದ ಅವರು, ಅಂದು ಬೆಳಿಗ್ಗೆ 10:30ಕ್ಕೆ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗೃಹ ಸಚಿವ ಡಾ. ಜಿ. ಪರಮೇಶ್ವರ್ ಅವರ ಅಧ್ಯಕ್ಷತೆಯಲ್ಲಿ ಈ ಸಭೆ ನಡೆಯಲಿದೆ ಎಂದು ಮಾಹಿತಿ ನೀಡಿದರು.

ಜಿಲ್ಲೆಯಾದ್ಯಂತ ವಿವಿಧ ತಾಲ್ಲೂಕುಗಳಲ್ಲಿ ಈಗಾಗಲೇ ಜನಸಂಪರ್ಕ ಸಭೆಗಳನ್ನು ನಡೆಸಲಾಗಿದ್ದು, ಕಂದಾಯ, ಪಂಚಾಯತ್ ರಾಜ್, ಆಹಾರ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸುಮಾರು 2,500 ಅಹವಾಲುಗಳು ಸಲ್ಲಿಕೆಯಾಗಿವೆ. "ಈ ಅಹವಾಲುಗಳ ಪೈಕಿ ಶೇ. 15ರಷ್ಟನ್ನಾದರೂ ಈ ಕಾರ್ಯಕ್ರಮದಲ್ಲಿ ವಿಲೇವಾರಿ ಮಾಡುವ ಗುರಿ ಹೊಂದಿದ್ದೇವೆ. ಈಗಾಗಲೇ ಬಗೆಹರಿದಿರುವ ಪ್ರಕರಣಗಳ ಫಲಾನುಭವಿಗಳನ್ನು ಕಾರ್ಯಕ್ರಮಕ್ಕೆ ಕರೆತರುವಂತೆ ತಾಲ್ಲೂಕು ಅಧಿಕಾರಿಗಳಿಗೆ ಸೂಚಿಸಲಾಗಿದೆ," ಎಂದು ಡಿಸಿ ತಿಳಿಸಿದರು.

ಸಾರ್ವಜನಿಕರಿಗೆ ವಿಶೇಷ ಸೌಲಭ್ಯಗಳು:

ಇಲಾಖಾವಾರು ಮಳಿಗೆಗಳು: ವಿವಿಧ ಇಲಾಖೆಗಳ ಮಾಹಿತಿ ಮತ್ತು ಸೇವೆಗಾಗಿ ಪ್ರತ್ಯೇಕ ಮಳಿಗೆಗಳನ್ನು ತೆರೆಯಲಾಗುವುದು.

ಐಪಿಜಿಆರ್‌ಎಸ್ ಸೌಲಭ್ಯ: ಅಹವಾಲುಗಳ ದಾಖಲಾತಿಗಾಗಿ ವ್ಯವಸ್ಥಿತ ಸೌಲಭ್ಯ ಕಲ್ಪಿಸಲಾಗಿದೆ.

ಊಟದ ವ್ಯವಸ್ಥೆ: ಕಾರ್ಯಕ್ರಮಕ್ಕೆ ಆಗಮಿಸುವ ಸಾರ್ವಜನಿಕರಿಗೆ ಕೇಂದ್ರ ಗ್ರಂಥಾಲಯದ ತಳಮಹಡಿಯಲ್ಲಿ ಊಟದ ವ್ಯವಸ್ಥೆ ಮಾಡಲಾಗಿದೆ.

ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ತಮ್ಮ ಸಮಸ್ಯೆಗಳಿಗೆ ಸಚಿವರ ಸಮ್ಮುಖದಲ್ಲಿ ಪರಿಹಾರ ಕಂಡುಕೊಳ್ಳುವಂತೆ ಅವರು ಮನವಿ ಮಾಡಿದರು. ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಮಹಾನಗರ ಪಾಲಿಕೆ ಆಯುಕ್ತೆ ಬಿ. ಶುಭ ಉಪಸ್ಥಿತರಿದ್ದರು.

# ಇಂದಿನಿಂದ ಹರಳೂರು ಜಾತ್ರೆ ಆರಂಭ: ಸಿದ್ದಗಂಗಾ ಶ್ರೀಗಳಿಂದ ಚಾಲನೆ

ತುಮಕೂರು

ತಾಲ್ಲೂಕಿನ ಹರಳೂರು ಗ್ರಾಮದಲ್ಲಿ ನೆಲೆಸಿರುವ ಪುರಾತನ ಶ್ರೀ ವೀರಭದ್ರಸ್ವಾಮಿ ಜಾತ್ರಾ ಮಹೋತ್ಸವವು ಏಪ್ರಿಲ್ 7 ರಿಂದ 13 ರವರೆಗೆ ಅತ್ಯಂತ ವೈಭವದಿಂದ ಜರುಗಲಿದೆ. ಶ್ರೀ ವೀರಭದ್ರಸ್ವಾಮಿ ಸೇವಾ ಸಮಿತಿ ಹಾಗೂ ಗ್ರಾಮಸ್ಥರ ಸಹಯೋಗದಲ್ಲಿ ವಾರಪೂರ್ತಿ ವಿವಿಧ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.



ಇದೇ 7 ರಂದು ರಾತ್ರಿ 7:30ಕ್ಕೆ ಸಿದ್ದಗಂಗಾ ಮಠಾಧ್ಯಕ್ಷರಾದ ಶ್ರೀ ಸಿದ್ದಲಿಂಗ ಸ್ವಾಮೀಜಿ ಅವರು ಡಾ. ಶ್ರೀ ಶಿವಕುಮಾರ ಮಹಾಸ್ವಾಮಿಗಳ ಪುತ್ಥಳಿ ಮೆರವಣಿಗೆಗೆ ಚಾಲನೆ ನೀಡುವ ಮೂಲಕ ಜಾತ್ರಾ ಮಹೋತ್ಸವವನ್ನು ಉದ್ಘಾಟಿಸಲಿದ್ದಾರೆ. ಅಂದು ರಾತ್ರಿ 10 ಗಂಟೆಗೆ ವೀರಭದ್ರಸ್ವಾಮಿಗೆ ವಿಶೇಷ ಆರತಿ ಹಾಗೂ ಅಗ್ನಿಕೊಂಡೋತ್ಸವ ನೆರವೇರಲಿದೆ.

ಪ್ರಮುಖ ಧಾರ್ಮಿಕ ವಿಧಿವಿಧಾನಗಳು:

ಏಪ್ರಿಲ್ 8ಕ್ಕೆ ಬೆಳಿಗ್ಗೆ ಧ್ವಜಾರೋಹಣ, ಕಳಸ ಸ್ಥಾಪನೆ ಹಾಗೂ ನಂದಿ ಮತ್ತು ಗಜವಾಹನ ಸೇವೆಗಳು ನಡೆಯಲಿವೆ.

ಏಪ್ರಿಲ್ 9ಕ್ಕೆ (ಮಹಾ ರಥೋತ್ಸವ) ಮಧ್ಯಾಹ್ನ 1 ಗಂಟೆಗೆ ಸರಿಯಾಗಿ ಶ್ರೀ ವೀರಭದ್ರಸ್ವಾಮಿಯ ಮಹಾ ರಥೋತ್ಸವ ಜರುಗಲಿದೆ.

ರಥೋತ್ಸವದ ಅಂಗವಾಗಿ ಧೂಳೋತ್ಸವ, ಪುಷ್ಪಾಲಂಕಾರ ಹಾಗೂ ಪಾನಕ ಸೇವೆ ಇರಲಿದೆ. ಅಂದು ರಾತ್ರಿ 'ಐತಿಹಾಸಿಕ ಕುರುಕ್ಷೇತ್ರ' ನಾಟಕ ಪ್ರದರ್ಶನ ಹಾಗೂ ಬೆಳ್ಳಿ ಪಲ್ಲಕ್ಕಿ ಉತ್ಸವ ನಡೆಯಲಿದೆ.

ಹರಳೂರು ಜಂಗಮಮಠದ ಶ್ರೀ ಚನ್ನಬಸವಸ್ವಾಮೀಜಿ ಅವರ ನೇತೃತ್ವದಲ್ಲಿ ಎಲ್ಲಾ ಧಾರ್ಮಿಕ ಕೈಂಕರ್ಯಗಳು ನೆರವೇರಲಿವೆ. ಭಕ್ತಾದಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶ್ರೀ ವೀರಭದ್ರಸ್ವಾಮಿಯ ಕೃಪೆಗೆ ಪಾತ್ರರಾಗಬೇಕೆಂದು ಶ್ರೀ ವೀರಭದ್ರೇಶ್ವರ ದಾಸೋಹ ಟ್ರಸ್ಟ್ ಮತ್ತು ಸಮುದಾಯ ಭವನ ನಿರ್ಮಾಣ ಸಮಿತಿ ಮನವಿ ಮಾಡಿದೆ.

# ಬಸವತತ್ವ ಪ್ರಸಾರ, ಪ್ರಚಾರ ಇಂದಿನ ಅಗತ್ಯ: ಈಶ್ವರ ಖಂಡ್ರೆ

ದೇವನಹಳ್ಳಿ

ಸಮಸಮಾಜದ ನಿರ್ಮಾಣಕ್ಕೆ ಕ್ರಾಂತಿಯನ್ನೇ ಮಾಡಿದ ಬಸವಣ್ಣನವರ ತತ್ವಾದರ್ಶಗಳು ಸಾರ್ವಕಾಲಿಕವಾಗಿದ್ದು, ಬಸವ ತತ್ವಗಳ ಪ್ರಚಾರ, ಪ್ರಸಾರ ಇಂದಿನ ಅಗತ್ಯವಾಗಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಅಭಿಪ್ರಾಯಪಟ್ಟಿದ್ದಾರೆ.



ದೇವನಹಳ್ಳಿಯಲ್ಲಿಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ವಿಶ್ವಗುರು ಬಸವೇಶ್ವರರ ಪ್ರತಿಮೆ ಅನಾವರಣ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಹೆಣ್ಣಿಗಾಗಿ, ಹೊನ್ನಿಗಾಗಿ, ಮಣ್ಣಿಗಾಗಿ ಜಗತ್ತಿನಲ್ಲಿ ಕ್ರಾಂತಿ ಆಗಿದೆ. ಆದರೆ ಸರ್ವರ ಸಮಾನತೆಗಾಗಿ ಯಾವುದಾದರೂ ಕ್ರಾಂತಿ ನಡೆದಿದ್ದರೆ ಅದು ಕಲ್ಯಾಣದ ಕ್ರಾಂತಿ ಮಾತ್ರ ಎಂದು ಹೇಳಿದರು.

12ನೇ ಶತಮಾನದಲ್ಲಿ ಮನುಷ್ಯರನ್ನು ಮನುಷ್ಯರಂತೆ ಕಾಣುತ್ತಿರಲಿಲ್ಲ. ಮೌಢ್ಯತೆ ಇತ್ತು, ಅನಕ್ಷರತೆ ಇತ್ತು, ಹೆಣ್ಣಿಗೆ ಸಮಾನತೆ ಇರಲಿಲ್ಲ. ಅಂತಹ ಕಾಲಘಟ್ಟದಲ್ಲಿ ಸ್ವಾತಂತ್ರ್ಯ, ಸಮಾನತೆ, ಕಾಯಕ, ದಾಸೋಹ, ಸಹೋದರತ್ವ, ಸಹಬಾಳ್ವೆಯ ತಳಹದಿಯ ಮೇಲೆ ಬಲಿಷ್ಠ ಸುಂದರ ಸಮಾಜದ ನಿರ್ಮಾಣಕ್ಕೆ ವಿಶ್ವಗುರು ಬಸವಣ್ಣನವರ ನೇತೃತ್ವದಲ್ಲಿ ವೈಚಾರಿಕ ಮತ್ತು ವೈಜ್ಞಾನಿಕತೆಯ ತಳಹದಿಯ ಮೇಲೆ ಕ್ರಾಂತಿ ನಡೆಯಿತು. ಶ್ರೇಣಿರಹಿತ, ವರ್ಗರಹಿತ, ಲಿಂಗಭೇದ ರಹಿತ ಸಮ ಸಮಾಜ ನಿರ್ಮಾಣಕ್ಕೆ ಬಸವಣ್ಣನವರು ಶ್ರಮಿಸಿದರು ಎಂದರು.

ಇಡೀ ಜಗತ್ತಿಗೆ ಪ್ರಪ್ರಥಮವಾಗಿ ಸಾಮಾಜಿಕ ನ್ಯಾಯಕೊಟ್ಟ ಸಮುದಾಯ ಯಾವುದಾದರೂ ಇದ್ದರೆ ಅದು ಸರ್ವರಿಗೂ ಲೇಸನ್ನೇ ಬಯಸಿದ ಸಮುದಾಯ ವೀರಶೈವ ಲಿಂಗಾಯತ ಸಮುದಾಯ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾದ ಈಶ್ವರ ಖಂಡ್ರೆ ಪ್ರತಿಪಾದಿಸಿದರು.

ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳಿನ ಕಲ್ಪನೆಯನ್ನು ನೀಡಿ, ವಿಶ್ವದ ಪ್ರಥಮ ಸಂಸತ್ತು ಅನುಭವ ಮಂಟಪ ಸ್ಥಾಪಿಸಿದರು. ಅಲ್ಲಿ 770 ವಿವಿಧ ವೃತ್ತಿಯ, ವಿವಿಧ ಸಮುದಾಯದ ಅಮರಗಣಂಗಳು ಪಾಲ್ಗೊಳ್ಳುತ್ತಿದ್ದರು. ಅವರೆಲ್ಲರೂ ವಚನಗಳನ್ನು ರಚಿಸಿದ್ದಾರೆ. ಪ್ರಜಾಪ್ರಭುತ್ವದ ಪರಿಕಲ್ಪನೆಗೆ ತಳಹದಿಯಾದ ಅನುಭವ ಮಂಟಪ ಬಸವಕಲ್ಯಾಣದಲ್ಲಿ ನಿರ್ಮಾಣವಾಗುತ್ತಿದೆ ಎಂದರು.

2015ರಲ್ಲಿ ತಾವು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರಾಗಿದ್ದಾಗ, ಮಾಡಿದ ಮನವಿಗೆ ಮನ್ನಣೆ ನೀಡಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಆಧುನಿಕ ಅನುಭವ ಮಂಟಪ ನಿರ್ಮಾಣಕ್ಕೆ ಅನುಮೋದನೆ ನೀಡಿ ಬಜೆಟ್ ನಲ್ಲಿ ಘೋಷಿಸಿದರು. ಇತ್ತೀಚೆಗೆ ಆಧುನಿಕ ಅನುಭವ ಮಂಟಪ ಕಾಮಗಾರಿಗೆ 105 ಕೋಟಿ ಬಿಡುಗಡೆ ಮಾಡುವುದರೊಂದಿಗೆ ಈವರೆಗೆ 280 ಕೋಟಿ ರೂ. ಬಿಡುಗಡೆ ಮಾಡಿದ್ದಾರೆ. ಪ್ರಸ್ತುತ ಕಾಮಗಾರಿ ಭರದಿಂದ ಸಾಗಿದ್ದು, ಮುಂದಿನ ವರ್ಷದೊಳಗೆ ಇದರ ಲೋಕಾರ್ಪಣೆ ಮಾಡಲಾಗುವುದು ಎಂದರು.

ವಚನಗಳಲ್ಲಿ ಜೀವಾಮೃತವಿದೆ. ವಚನಗಳಲ್ಲಿರುವ ಸಾರವನ್ನು ಅರಿತು ನಡೆದರೆ ಬಾಳು ಹಸನಾಗುತ್ತದೆ. ನಾವು ಬಸವಾದಿ ಶರಣರ ವಚನಗಳನ್ನು ಅರಿತು ನಡೆದರೆ ನಮ್ಮ ಜನ್ಮ ಸಾರ್ಥಕವಾಗುತ್ತದೆ. ಇಂತಹ ಪುತ್ಥಳಿ, ಪ್ರತಿಮೆಗಳ ಸ್ಥಾಪನೆ ನಮ್ಮಲ್ಲಿ ಅಂತಹ ಮಹಾಪುರುಷರ ಆದರ್ಶ ಪಾಲನೆಗೆ ಪ್ರೇರಣೆ ನೀಡುತ್ತದೆ ಎಂದರು.

ಯುವಶಕ್ತಿ, ಅಣುಶಕ್ತಿಗಿಂತ ಮಿಗಿಲಾದ್ದು, ಸಮಾಜದ ಆಧಾರಸ್ತಂಭವಾದ ಯುವಶಕ್ತಿ ಮುಖ್ಯವಾಹಿನಿಗೆ ಬರಬೇಕು. ಅವರು ದುಶ್ಚಟ, ದುರ್ಗುಣಗಳಿಗೆ ಬಲಿಯಾಗಬಾರದು.

ಸಮಾಜಕ್ಕೆ ಆಸ್ತಿಯಾಗಬೇಕು. ಅವರಿಗೆ ಮಾತೆಯರು ವಚನಗಳನ್ನು ಕಲಿಸುವ ಮೂಲಕ ಸಂಸ್ಕಾರ ಕಲಿಸಬೇಕು. ಹರ, ಚರ ಗುರುಮೂರ್ತಿಗಳು ವ್ಯಸನಮುಕ್ತ ಸಮಾಜದ ನಿರ್ಮಾಣಕ್ಕೆ ಸಂಕಲ್ಪ ಮಾಡಬೇಕು ಎಂದರು.

ಕಾರ್ಯಕ್ರಮದಲ್ಲಿ ಸುತ್ತೂರು ಮಹಾ ಸಂಸ್ಥಾನದ ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಆಹಾರ ಮತ್ತು ನಾಗರೀಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ, ಸಂಸದ ಸುಧಾಕರ್, ಶಾಸಕರಾದ ಧೀರಜ್ ಮುನಿರಾಜ್, ಶರತ್ ಬಚ್ಚೇಗೌಡ ಮತ್ತಿತರರು ಪಾಲ್ಗೊಂಡಿದ್ದರು.

ಶ್ರೀ ಶಿವಕುಮಾರ ಸ್ವಾಮೀಜಿಯವರ

# ಜಯಂತಿ ಆಚರಣೆ

ಶಿಡ್ಲಘಟ್ಟ

ನಗರದ ಶ್ರೀ ಶಿವಕುಮಾರಸ್ವಾಮಿ ವೃತ್ತದಲ್ಲಿ (ಹೂವಿನ ವೃತ್ತ) ಬುಧವಾರದಂದು ತ್ರಿವಿಧ ದಾಸೋಹಿ, ಸಿದ್ದಗಂಗಾ ಶ್ರೀಗಳಾದ ಶಿವಕುಮಾರ ಸ್ವಾಮೀಜಿಯವರ 119ನೇ ಜಯಂತಿಯನ್ನು ಅತ್ಯಂತ ಭಕ್ತಿ–ಶ್ರದ್ಧೆಯಿಂದ ಆಚರಿಸಲಾಯಿತು.

ನಗರೇಶ್ವರಸ್ವಾಮಿ ದೇವಾಲಯದ ಆವರಣದಲ್ಲಿ ಶ್ರೀಗಳ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ, ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಯಿತು.

ನಗರ್ತ ಮಂಡಳಿಯ ಅಧ್ಯಕ್ಷರಾದ ಕೆ.ಆರ್. ಶಿವಶಂಕರ್ ಮಾತನಾಡಿ, "ನಡೆದಾಡುವ ದೇವರು ಎಂದೇ ಖ್ಯಾತರಾದ ಶ್ರೀಗಳು ಅಕ್ಷರ, ಅನ್ನ ಮತ್ತು ಜ್ಞಾನ ದಾಸೋಹದ ಮೂಲಕ ಲಕ್ಷಾಂತರ ಮಕ್ಕಳ ಬದುಕನ್ನು ಬೆಳಗಿದ್ದಾರೆ. ಅವರ ಶಿಸ್ತು, ಶ್ರದ್ಧೆ ಹಾಗೂ ಸಮಯಪ್ರಜ್ಞೆ ಇಂದಿನ ಸಮಾಜಕ್ಕೆ ಮತ್ತು ಮುಂದಿನ ಪೀಳಿಗೆಗೆ ದಾರಿದೀಪ," ಎಂದು ಬಣ್ಣಿಸಿದರು.

ಅಕ್ಕಮಹಾದೇವಿಯವರ ಭಕ್ತಿ ಮತ್ತು ತತ್ವಗಳು ಸಮಾಜಕ್ಕೆ ಹೇಗೆ ಮಾರ್ಗದರ್ಶಿಯೋ, ಹಾಗೆಯೇ ಶ್ರೀಗಳ ಆಧ್ಯಾತ್ಮಿಕ ಜೀವನವು ಯುವಜನತೆಗೆ ಪ್ರೇರಣೆಯಾಗಬೇಕು ಎಂದು ಅವರು ಆಶಯ ವ್ಯಕ್ತಪಡಿಸಿದರು.

ನಗರ್ತ ಯುವಕ ಮಂಡಳಿ ಹಾಗೂ ಮಹಿಳಾ ಮಂಡಳಿಯ ಪದಾಧಿಕಾರಿಗಳು ಮತ್ತು ಶ್ರೀಗಳ ಅಸಂಖ್ಯಾತ ಭಕ್ತರು ಈ ಸಂದರ್ಭದಲ್ಲಿ ಪಾಲ್ಗೊಂಡಿದ್ದರು. ಜಯಂತಿಯ ಅಂಗವಾಗಿ ಸಾರ್ವಜನಿಕರಿಗೆ ಸಾಮೂಹಿಕ ಅನ್ನ ಸಂತರ್ಪಣೆಯನ್ನು ಹಮ್ಮಿಕೊಳ್ಳಲಾಗಿತ್ತು. ಶ್ರೀಗಳ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದ ಭಕ್ತಾದಿಗಳು, ಅವರ ಜೀವನದ ಮೌಲ್ಯಗಳನ್ನು ಸ್ಮರಿಸುತ್ತಾ ಅರ್ಥಪೂರ್ಣವಾಗಿ ದಿನವನ್ನು ಆಚರಿಸಿದರು.



# ಸೊಣ್ಣನಾಯಕನಹಳ್ಳಿ ಗ್ರಾಮಸ್ಥರ ನೆರವಿಗೆ ಧಾವಿಸಿದ ತಹಶೀಲ್ದಾರ್ ರೂಪ



ಮಾಲೂರು

ತಾಲೂಕಿನ ಸೊಣ್ಣನಾಯಕನಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆ ತೋರಿರುವ ಕಾರಣ ತೊರ್ನಹಳ್ಳಿ ಗ್ರಾಮ ಪಂಚಾಯಿತಿ ಆಡಳಿತಾಧಿಕಾರಿ ತಹಶೀಲ್ದಾರ್ ಎಂ.ವಿ.ರೂಪ ಅವರು ಸೊಣ್ಣ ನಾಯಕನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ನೀರಿನ ಸಮಸ್ಯೆಯನ್ನು ನೀಗಿಸಲು ತಾತ್ಕಾಲಿಕವಾಗಿ ಟ್ಯಾಂಕರ್‌ಗಳ ಮೂಲಕ ನೀರು ಸರಬರಾಜು ಮಾಡಲು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ತಾಲೂಕಿನ ತೊರ್ನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸೊಣ್ಣನಾಯಕನಹಳ್ಳಿ ಗ್ರಾಮದಲ್ಲಿ ಕುಡಿಯುವ ನೀರಿಗಾಗಿ ಒಂದು ಕೊಳವೆ ಬಾವಿಯನ್ನು ಕೊರಿಸಲಾಗಿತ್ತು, ಆ ಕೊಳವೆ ಬಾವಿಯಲ್ಲಿ ನೀರು ಬತ್ತಿ ಹೋದ ಕಾರಣ ನೀರಿನ ಸಮಸ್ಯೆ ಉಂಟಾಗಿದೆ, ಗ್ರಾಮಸ್ಥರು ನೀರಿಗಾಗಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ತೊರ್ನಹಳ್ಳಿ ಗ್ರಾಮ ಪಂಚಾಯಿತಿ ಆಡಳಿತ ಅಧಿಕಾರಿ ಹಾಗೂ ತಹಶಿಲ್ದಾರ್ ಎಂ.ವಿ.ರೂಪ ಅವರು ಸೊಣ್ಣನಾಯಕನಹಳ್ಳಿ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲಿಸಿ. ಈ ಗ್ರಾಮದಲ್ಲಿ ನೀರಿನ ಸಮಸ್ಯೆಯನ್ನು ಬಗೆಹರಿಸಲು ತಾತ್ಕಾಲಿಕವಾಗಿ ಟ್ಯಾಂಕರ್ ಮೂಲಕ ನೀರು ಸರಬರಾಜು ಮಾಡುವಂತೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದವರು ಹತ್ತಿರದಲ್ಲಿ ಯಾವುದಾದರೂ ಖಾಸಗಿ ಅವರು ರೈತರು ಕೊಳವೆ ಬಾವಿ ಕೊರೆಸಿದ್ದರೆ ಅಂತಹವರಿಂದ ಬೇಸಿಗೆ ಮುಗಿಯುವವರೆಗೆ ಗ್ರಾಮಕ್ಕೆ ನೀರು ಸರಬರಾಜು ಮಾಡಲು ಅವರ ಮನವೊಲಿಸುವಂತೆ ಹೇಳಿದರು. ಈ ವೇಳೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸಿ.ಆರ್. ಗೌಡ, ಬಿಲ್‌ಕಲೆಕ್ಟರ್ ನಾಗರಾಜ್, ಗ್ರಾಮಸ್ಥರು ಇನ್ನಿತರರು ಹಾಜರಿದ್ದರು.

# 'ಬಾಗಲಕೋಟೆ, ದಾವಣಗೆರೆಯಲ್ಲಿ ಬಿಜೆಪಿ ಗೆಲುವು ನಿಶ್ಚಿತ'



ಬೆಂಗಳೂರು

"ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಸಂಪೂರ್ಣವಾಗಿ ಅಭಿವೃದ್ಧಿ ಮರೆತಿದೆ. ಈ ಬಾರಿಯ ಚುನಾವಣೆಯಲ್ಲಿ ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ಕ್ಷೇತ್ರಗಳಲ್ಲಿ ಬಿಜೆಪಿ ಅಭ್ಯರ್ಥಿಗಳು ಭಾರಿ ಮತಗಳ ಅಂತರದಿಂದ ಗೆಲುವು ಸಾಧಿಸಲಿದ್ದಾರೆ" ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್ ಅಶೋಕ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಮಲ್ಲೇಶ್ವರದಲ್ಲಿರುವ ಬಿಜೆಪಿ ರಾಜ್ಯ ಕಾರ್ಯಾಲಯ 'ಜಗನ್ನಾಥ ಭವನ'ದಲ್ಲಿ ಸೋಮವಾರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯ ಹಾಗೂ ಚುನಾವಣಾ ತಂತ್ರಗಾರಿಕೆಗಳ ಕುರಿತು ತೀವ್ರವಾಗಿ ಟೀಕಿಸಿದರು.

"ಕಾಂಗ್ರೆಸ್‌ಗೆ ಎರಡೂ ಕ್ಷೇತ್ರಗಳಲ್ಲಿ ಸೋಲಿನ ಭೀತಿ ಎದುರಾಗಿದೆ. ದಾವಣಗೆರೆಯಲ್ಲಿ ಮುಸ್ಲಿಂ ಮತದಾರರು ಕೈ ಹಿಡಿಯುವುದಿಲ್ಲ ಎಂದು ಬಹಿರಂಗವಾಗಿ ಹೇಳುತ್ತಿದ್ದಾರೆ. ಬಾಗಲಕೋಟೆಯಲ್ಲಿ ಸೋಲುವ ಸುಳಿವು ಸಿಕ್ಕ ತಕ್ಷಣ ಕೇರಳ ಪ್ರವಾಸದಲ್ಲಿದ್ದ ಮುಖ್ಯಮಂತ್ರಿಗಳು ಅಲ್ಲಿಗೆ ದೌಡಾಯಿಸಿದ್ದಾರೆ. ಸರ್ಕಾರ ಅಭಿವೃದ್ಧಿ ಮಾಡಿದ್ದರೆ ಇಷ್ಟು ಕಷ್ಟಪಡುವ ಅಗತ್ಯವಿರಲಿಲ್ಲ" ಎಂದು ಲೇವಡಿ ಮಾಡಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳ ವಿರುದ್ಧ ಕಿಡಿಕಾರಿದ ಅಶೋಕ್, "ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಶೂನ್ಯ ಅಭಿವೃದ್ಧಿಯಾಗಿದೆ. ಸಿದ್ದರಾಮಯ್ಯ ಅವರು ಕರ್ನಾಟಕವನ್ನು ಸಾಲಗಾರರ ರಾಜ್ಯವನ್ನಾಗಿ ಮಾಡಿದ್ದಾರೆ. ಜನರ ಹೊಟ್ಟೆ ತುಂಬಿಸಬೇಕಾದ ಅನ್ನಭಾಗ್ಯ ಯೋಜನೆಯನ್ನು ಇಂದು 'ಕನ್ನಭಾಗ್ಯ'ವನ್ನಾಗಿ ಪರಿವರ್ತಿಸಿದ್ದಾರೆ. ಅಭಿವೃದ್ಧಿ ವಿರೋಧಿ ಕಾಂಗ್ರೆಸ್ ಸರ್ಕಾರಕ್ಕೆ ಜನರೇ ತಕ್ಕ ಪಾಠ ಕಲಿಸಲಿದ್ದಾರೆ" ಎಂದರು.

ದಾವಣಗೆರೆ ಚುನಾವಣಾ ಕಣದ ಬಗ್ಗೆ ಕುತೂಹಲಕಾರಿ ಹೇಳಿಕೆ ನೀಡಿದ ಅವರು, "ದಾವಣಗೆರೆಯಲ್ಲಿ ಬಡವರನ್ನು ಗೆಲ್ಲಿಸಿ ಎಂದು ಸಿದ್ದರಾಮಯ್ಯ ಹೇಳುತ್ತಿದ್ದಾರೆ. ವಾಸ್ತವದಲ್ಲಿ ಅಲ್ಲಿನ ಬಿಜೆಪಿ ಅಭ್ಯರ್ಥಿಯೇ ಬಡವರ ಪರವಾಗಿರುವವರು. ಹೀಗಾಗಿ ಮುಖ್ಯಮಂತ್ರಿಗಳು ಪರೋಕ್ಷವಾಗಿ ಬಿಜೆಪಿ ಪರವಾಗಿಯೇ ಪ್ರಚಾರ ಮಾಡುತ್ತಿದ್ದಾರೆ. ಎರಡೂ ಕಡೆ ಕಾಂಗ್ರೆಸ್‌ನವರೇ ಒಳಗೊಳಗೆ ಬಿಜೆಪಿ ಪರ ಕೆಲಸ ಮಾಡುತ್ತಿದ್ದಾರೆ" ಎಂದು ಬಾಂಬ್ ಸಿಡಿಸಿದರು.

ಬೆಲೆ ಏರಿಕೆ ಕುರಿತ ಡಿ.ಕೆ. ಶಿವಕುಮಾರ್ ಅವರ ಟೀಕೆಗೆ ತಿರುಗೇಟು ನೀಡಿದ ಅವರು, "ಅಡುಗೆ ಅನಿಲ ಸಮಸ್ಯೆ ಜಾಗತಿಕವಾದುದು. ರಾಹುಲ್ ಗಾಂಧಿ ಮೆಚ್ಚುವ ಪಾಕಿಸ್ತಾನದಲ್ಲಿ ಪೆಟ್ರೋಲ್ ಬೆಲೆ 500 ರೂ. ದಾಟಿದೆ. ಇವೆಲ್ಲದರ ಅರಿವಿಲ್ಲದೆ ಶಿವಕುಮಾರ್ ಅವರು ಪ್ರಧಾನಿ ಮೋದಿಯವರನ್ನು ಟೀಕಿಸುತ್ತಿದ್ದಾರೆ. ಹರ್ಮುಜ್ ಜಲಸಂಧಿಯಲ್ಲಿ ಉದ್ವಿಗ್ನ ಪರಿಸ್ಥಿತಿ ಇದ್ದರೂ, ಮೋದಿಯವರ ರಾಜತಾಂತ್ರಿಕ ಚತುರತೆಯಿಂದಾಗಿ ಭಾರತದ ಹಡಗುಗಳಿಗೆ ಮಾತ್ರ ಸಂಚಾರಕ್ಕೆ ಅನುಮತಿ ಸಿಕ್ಕಿದೆ. ಇಷ್ಟೆಲ್ಲಾ ಸಾಧನೆಗಳಿದ್ದರೂ ರಾಜ್ಯದ ನಾಯಕರು ಸುಮ್ಮನೆ ಬೆಂಕಿ ಹಚ್ಚುವ ಕೆಲಸ ಮಾಡುತ್ತಿದ್ದಾರೆ" ಎಂದು ವಾಗ್ದಾಳಿ ನಡೆಸಿದರು.

# 'ಬಿಜೆಪಿಗೆ ಜಯ ಖಚಿತ'



ಬಾಗಲಕೋಟೆ

"ಬಾಗಲಕೋಟೆ ಮತ್ತು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರಗಳ ಉಪಚುನಾವಣೆಯಲ್ಲಿ ಬಿಜೆಪಿ ಅಭ್ಯರ್ಥಿಗಳು ಭರ್ಜರಿ ಜಯ ಸಾಧಿಸಲಿದ್ದಾರೆ. ಈ ಕ್ಷೇತ್ರಗಳಲ್ಲಿ ಜನ ಬೆಂಬಲ ನಮಗಿದ್ದು, ಎರಡೂ ಕಡೆ ಗೆಲುವು ನಿಶ್ಚಿತ," ಎಂದು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ಬಾಗಲಕೋಟೆಯಲ್ಲಿ ಸೋಮವಾರ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಚುನಾವಣಾ ಕಣದ ಚಿತ್ರಣದ ಬಗ್ಗೆ ವಿಶ್ಲೇಷಿಸಿದರು.

"ಬಾಗಲಕೋಟೆ ಕ್ಷೇತ್ರದಲ್ಲಿ ನಮ್ಮ ಸಂಘಟನೆ ಬಲಿಷ್ಠವಾಗಿದೆ. ಈ ಬಾರಿ ಕನಿಷ್ಠ 10 ಸಾವಿರಕ್ಕೂ ಅಧಿಕ ಮತಗಳ ಅಂತರದಿಂದ ಬಿಜೆಪಿ ಜಯಭೇರಿ ಬಾರಿಸಲಿದೆ. ಮತದಾರರು ಸರ್ಕಾರದ ಆಡಳಿತದ ಬಗ್ಗೆ ಅಸಮಾಧಾನ ಹೊಂದಿದ್ದು, ಬಿಜೆಪಿಯನ್ನು ಬೆಂಬಲಿಸಲಿದ್ದಾರೆ," ಎಂದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸರಣಿ ಪ್ರವಾಸದ ಕುರಿತು ಟೀಕಿಸಿದ ಯಡಿಯೂರಪ್ಪ, "ಮುಖ್ಯಮಂತ್ರಿಗಳು ಇಲ್ಲಿಗೆ ಈಗಾಗಲೇ 4–5 ಬಾರಿ ಭೇಟಿ ನೀಡಿದ್ದಾರೆ. ಒಬ್ಬ ಮುಖ್ಯಮಂತ್ರಿ ಸಣ್ಣ ಉಪಚುನಾವಣೆಗಾಗಿ ಇಷ್ಟೊಂದು ಬಾರಿ ಬರಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ ಎಂದರೆ, ಅವರಿಗೆ ಸೋಲಿನ ಭಯ ಕಾಡುತ್ತಿದೆ ಎಂದೇ ಅರ್ಥ. ಸೋಲುತ್ತೇವೆ ಎಂಬ ಭೀತಿಯಿಂದಲೇ ಅವರು ಪದೇ ಪದೇ ಕ್ಷೇತ್ರಕ್ಕೆ ದೌಡಾಯಿಸುತ್ತಿದ್ದಾರೆ," ಎಂದು ವ್ಯಂಗ್ಯವಾಡಿದರು.

ಬಾಗಲಕೋಟೆ ಮಾತ್ರವಲ್ಲದೆ ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲೂ ಬಿಜೆಪಿ ಗೆಲುವು ಸಾಧಿಸುವ ಮೂಲಕ ಕಾಂಗ್ರೆಸ್‌ಗೆ ಮತದಾರರು ತಕ್ಕ ಪಾಠ ಕಲಿಸಲಿದ್ದಾರೆ ಎಂದು ಈ ಸಂದರ್ಭದಲ್ಲಿ ಅವರು ತಿಳಿಸಿದರು.

# ತೊಪ್ಪಗನಹಳ್ಳಿ ಆಂಜನೇಯ ಸ್ವಾಮಿ ರಥೋತ್ಸವ ಸಂಪನ್ನ



ಮಾಲೂರು

ಕಸಬಾ ಹೋಬಳಿಯ ತೊಪ್ಪಗನಹಳ್ಳಿ ಗ್ರಾಮದಲ್ಲಿ ನೆಲೆಸಿರುವ, ಸುಮಾರು 800 ವರ್ಷಗಳ ಇತಿಹಾಸವುಳ್ಳ ಪುರಾತನ ಶ್ರೀ ಆಂಜನೇಯ ಸ್ವಾಮಿ ಜಾತ್ರಾ ಮಹೋತ್ಸವ ಹಾಗೂ ರಥೋತ್ಸವವು ಸಾವಿರಾರು ಭಕ್ತರ ಸಮ್ಮುಖದಲ್ಲಿ ಅತ್ಯಂತ ವೈಭವದಿಂದ ಜರುಗಿತು.

ಈ ದೇವಾಲಯವು ವಿಶಿಷ್ಟವಾದ 'ತುಪ್ಪದ ಕಜ್ಜಾಯ'ದ ಪ್ರಸಾದಕ್ಕೆ ಹೆಸರುವಾಸಿಯಾಗಿದೆ. ಜಾತ್ರೆಯ ಪ್ರಯುಕ್ತ ಗ್ರಾಮದ ಪ್ರತಿ ಮನೆಯಿಂದಲೂ ತುಪ್ಪದ ಕಜ್ಜಾಯವನ್ನು ತಯಾರಿಸಿ ತಂದು, ದೇವಸ್ಥಾನದ ಮುಂದೆ ರಾಶಿ ಹಾಕಿ ಸಾಮೂಹಿಕವಾಗಿ ಪೂಜೆ ಸಲ್ಲಿಸುವುದು ಇಲ್ಲಿನ ವಿಶೇಷ ವಾಡಿಕೆ. ತಾಲ್ಲೂಕಿನಲ್ಲಿಯೇ ಅಪರೂಪವೆನಿಸುವ ಈ ಕಜ್ಜಾಯದ ರಾಶಿ ಪೂಜೆಯನ್ನು ಕಂಡು ಭಕಾಧಿಗಳು ಪುನೀತರಾದರು.

ಜಾತ್ರಾ ಮಹೋತ್ಸವದ ಅಂಗವಾಗಿ ಆಂಜನೇಯ ಸ್ವಾಮಿಯ ವಿಗ್ರಹಕ್ಕೆ ವಿವಿಧ ಫಲಪುಷ್ಪಗಳಿಂದ ವಿಶೇಷ ಅಲಂಕಾರ ಮಾಡಲಾಗಿತ್ತು. ಮಧ್ಯಾಹ್ನ 12 ಗಂಟೆಗೆ ಸರಿಯಾಗಿ ರಥೋತ್ಸವಕ್ಕೆ ಚಾಲನೆ ನೀಡಲಾಯಿತು. ಅರ್ಚಕರ ಕುಟುಂಬದವರಿಂದ ಮೊದಲಿಗೆ ರಥಕ್ಕೆ 'ಕಜ್ಜಾಯದ ಹಾರ'ವನ್ನು ಹಾಕಿ ಸಂಪ್ರದಾಯಬದ್ಧವಾಗಿ ಚಾಲನೆ ನೀಡಿದ ನಂತರ, ಭಕ್ತರು ನೈವೇದ್ಯ ಅರ್ಪಿಸಿ ದೇವರಿಗೆ ಜಯಘೋಷ ಹಾಕಿದರು.

ಜಾತ್ರೆಯ ಪ್ರಯುಕ್ತ ತೊಪ್ಪಗನಹಳ್ಳಿ, ಅಂಜನಾಪುರ, ಕುರಿಗೌಡನದೊಡ್ಡಿ ಹಾಗೂ ಜಂಪಾಲೆಗೌಡನದೊಡ್ಡಿ ಗ್ರಾಮಸ್ಥರು ಮತ್ತು ದೇವಾಲಯ ಸಮಿತಿಯ ವತಿಯಿಂದ ಅದ್ದೂರಿ ಅನ್ನದಾಸೋಹ ಏರ್ಪಡಿಸಲಾಗಿತ್ತು. ಬೆಳಿಗ್ಗೆ 8 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ಸತತವಾಗಿ ನಡೆದ ಈ ದಾಸೋಹದಲ್ಲಿ ಸುಮಾರು 10 ಸಾವಿರಕ್ಕೂ ಹೆಚ್ಚು ಭಕ್ತರು ಪ್ರಸಾದ ಸ್ವೀಕರಿಸಿದರು.

ಬೆಂಗಳೂರು ಸೇರಿದಂತೆ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಭಕ್ತರು

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy